ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಡಿಸೆಂಬರ್ 27 ಶುಕ್ರವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 250 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಕಳ್ಳತನ ಆರೋಪದಡಿ ದೌರ್ಜನ್ಯ ನಡೆಸಿದ ಪೊಲೀಸರ ವಿರುದ್ಧ ಪ್ರಕರಣ ದಾಖಲು

ಪೊಲೀಸರ ಟಾರ್ಚರ್‌ನಿಂದ ಕಿಡ್ನಿ ವೈಫಲ್ಯಗೊಂಡ ವ್ಯಕ್ತಿಯಿಂದ ಕೋರ್ಟ್ ಮೊರೆ

ಮೈಸೂರು, ಡಿ.26– ನಾಲ್ಕು ವರ್ಷಗಳ ಹಿಂದೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೊಬ್ಬರನ್ನು ಅಕ್ರಮ ಬಂಧನದಲ್ಲಿಟ್ಟು ಮಾರಣಾಂತಿಕ ಹಲ್ಲೆ ನಡೆಸಿದ ಆರೋಪದಡಿ ನಾಲ್ವರು ಪೊಲೀಸರ ವಿರುದ್ಧ ಮೈಸೂರಿನ ಮಂಡಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.



ಮುತ್ತು

ನಗರದ ಬನ್ನಿಮಂಟಪ ಹುಡ್ಕೊ ಬಡಾವಣೆ ನಿವಾಸಿ, ಕೂಲಿಕಾರ್ಮಿಕ ಮುತ್ತು ಅವರ ಮೇಲೆ 2020ರ ಮಾರ್ಚ್‌ನಲ್ಲಿ ಹಲ್ಲೆ ನಡೆಸಿದ್ದ ಆರೋಪದಡಿ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮಂಡಿ ಠಾಣೆಯ ಅಂದಿನ ಇನ್ಸ್‌ಪೆಕ್ಟರ್ ನಾರಾಯಣಸ್ವಾಮಿ, ಸಿಬ್ಬಂದಿ ರವಿಗೌಡ, ರಾಜೇಂದ್ರ ಹಾಗೂ ಶಂಕರ್ ವಿರುದ್ಧ ಮಂಡಿ ಠಾಣೆಯಲ್ಲಿ ಡಿ.24ರಂದು ಪ್ರಕರಣ ದಾಖಲಾಗಿದೆ.

ದೂರಿನಲ್ಲಿರುವುದು: 2020 ಮಾ.6ರಂದು ತನ್ನ ಸಂಬಂಧಿ ರವಿ ಅವರನ್ನು ಮಂಡಿ ಠಾಣೆ ಪೊಲೀಸರು ಕರೆದುಕೊಂಡು ಹೋಗಿದ್ದನ್ನು ತಿಳಿದು ಅವರ ತಾಯಿ ಜೊತೆ ಮಂಡಿ ಠಾಣೆಗೆ ನಾನು ಹೋಗಿದ್ದೆ. ಅಲ್ಲಿದ್ದ ರವಿ ಇವನೇ ಮುತ್ತು ಎಂದು ನನ್ನನ್ನು ತೋರಿಸಿದಾಗ ಪೊಲೀಸರಾದ ನಾರಾಯಣಸ್ವಾಮಿ, ರವಿಗೌಡ, ರಾಜೇಂದ್ರ ಹಾಗೂ ಶಂಕರ್ ಅವರು ನನ್ನನ್ನು ಅಕ್ರಮವಾಗಿ ಬಂಧಿಸಿ, ಬಟ್ಟೆ ಬಿಚ್ಚಿಸಿ, ಟೇಬಲ್ ಮೇಲೆ ಕೈಕಾಲುಗಳನ್ನು ಕಟ್ಟಿ ಹಾಕಿ 'ನೀನು, ರವಿ, ಮಯೂರ ಮತ್ತು ಸುಬ್ಬಯ್ಯ ಜೊತೆ ಸೇರಿಕೊಂಡು ಎಷ್ಟು ಕಳ್ಳತನ ಮಾಡಿದ್ದೀಯಾ? ಎಂದು ಅವಾಚ್ಯವಾಗಿ ಬೈಯ್ದು, ದೊಣ್ಣೆಯಿಂದ ಹೊಡೆದು, ಬೂಟ್ ಕಾಲಿನಿಂದ ಒದ್ದು ಗಾಯಗೊಳಿಸಿದರು.

ನಾನು ಯಾರೊಂದಿಗೂ ಹೋಗಿಲ್ಲ, ಕಳ್ಳತನ ಮಾಡಿಲ್ಲ, ಹೊಡೆಯಬೇಡಿ ಎಂದರೂ ಬಿಡಲಿಲ್ಲ. ಮಯೂರ ಹಾಗೂ ಸುಬ್ಬಯ್ಯ ಊರಿಗೆ ಹೋಗುವುದಾಗಿ ತಿಳಿಸಿ ನನಗೆ ಬ್ಯಾಗುಗಳನ್ನು ಕೊಟ್ಟು ಮನೆಯಲ್ಲಿ ಇಟ್ಟಿರುವಂತೆ ಹೇಳಿದ್ದರು. ಆ ಬ್ಯಾಗುಗಳನ್ನು ಪೊಲೀಸರು ಪರಿಶೀಲಿಸಿದಾಗ ಅದರಲ್ಲಿ ಚಿನ್ನದ ಸರ ಸಿಕ್ಕಿತ್ತು. ಅದರಲ್ಲಿ ಸರವಿದ್ದ ವಿಚಾರ ನನಗೆ ತಿಳಿದಿರಲಿಲ್ಲ ಎಂದು ಹೇಳಿದರೂ ಹಲ್ಲೆ ಮಾಡಿ ಚಿಕಿತ್ಸೆಯನ್ನೂ ಕೊಡಿಸದೆ ಮಾ.8ರಂದು ಸಂಜೆ ನನ್ನನ್ನು ಸಂತೆಮರಳ್ಳಿ ಹಾಗೂ ಸುತ್ತಮುತ್ತಲ ಊರಿಗೆ ಕರೆದುಕೊಂಡು ಹೋಗಿ ಸುತ್ತಿಸಿದರು.

ನಾನು ವಾಂತಿ ಮಾಡಿಕೊಂಡು ಸುಸ್ತಾಗಿದ್ದರಿಂದ ಮಾ.9ರಂದು ಮೈಸೂರಿನ ಬಂಬೂಬಜಾರ್‌ನಲ್ಲಿರುವ ಮಲ್ಲಿಗೆ ನರ್ಸಿಂಗ್ ಹೋಂನಲ್ಲಿ ಚಿಕಿತ್ಸೆ ಕೊಡಿಸಿದರು. ಪರೀಕ್ಷಿಸಿದ ವೈದ್ಯರು ನನ್ನ ಕಿಡ್ನಿಗಳು ವೈಫಲ್ಯವಾಗಿವೆ ಎಂದು ತಿಳಿಸಿದರು. ಬಳಿಕ ಪೊಲೀಸರು ತಮ್ಮ ತಪ್ಪು ಮರೆಮಾಚಿಕೊಳ್ಳಲು ಮಾ.11ರಂದು ಮಿಷನ್ ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ಕೊಡಿಸಿದ್ದರು. ಮಾ.14ರಂದು ಆಸ್ಪತ್ರೆಯಿಂದ ಬಿಡುಗಡೆ ಮಾಡಿಸಿ, ದಾಖಲೆಗಳಿಗೆ ಸಹಿ ಮಾಡಿಸಿಕೊಂಡು ನ್ಯಾಯಾಧೀಶರ ಮುಂದೆ ಹಾಜರುಪಡಿಸಿ ಕಿಡ್ನಿ ವೈಫಲ್ಯವಿರುವ ವಿಚಾರ ತಿಳಿಸಿ, ಪೊಲೀಸರೇ ವಕೀಲರನ್ನು ನೇಮಿಸಿ, ಬಿಡುಗಡೆ ಮಾಡಿಸಿ ಮನೆಗೆ ಕಳುಹಿಸಿದರು. ಮಾ.15 ಮತ್ತು 16ರಂದು ಮನೆಗೆ ಬಂದು ನನ್ನನ್ನು ಮಿಷನ್ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಡಯಾಲಿಸಿಸ್ ಚಿಕಿತ್ಸೆ ಮಾಡಿಸಿದರು. ಮಾ.17ರಂದು ಬಿಬಿ ಆಯಿಷಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದರು ಎಂದು ಮುತ್ತು ದೂರಿದ್ದಾರೆ.

ರವಿ ಎಂಬಾತನೊಂದಿಗೆ ಕಳ್ಳತನ ಮಾಡಿದ್ದಾರೆ ಎಂದು ಸುಳ್ಳು ದಾಖಲೆ ಸೃಷ್ಟಿಸಿ ನನ್ನನ್ನು ಆರೋಪಿಯಾಗಿ ಮಾಡಿದ್ದು, ಅಕ್ರಮ ಬಂಧನದಲ್ಲಿಟ್ಟು ಮಾರಣಾಂತಿಕ ಹಲ್ಲೆ ನಡೆಸಿ, ಕಿಡ್ನಿ ವೈಫಲ್ಯಗೊಳಿಸಿದ್ದಾರೆಂದು ನ್ಯಾಯಾಲಯಕ್ಕೆ ಮುತ್ತು ಖಾಸಗಿ ದೂರು ನೀಡಿದ್ದು, ಅದರನ್ವಯ ಆರೋಪಿತರ ವಿರುದ್ಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ನ್ಯಾಯಾಲಯ ದೇವರಾಜ ಉಪವಿಭಾಗದ ಎಸಿಪಿಗೆ ನಿರ್ದೇಶನ ನೀಡಿತ್ತು. ನ್ಯಾಯಾಲದಯ ನಿರ್ದೇಶನದಂತೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಕಾವೇರಿ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)

ಸಂಕ್ಷಿಪ್ತ ಟೆಂಡರ್ ಪ್ರಕಟಣೆ.
(ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಇ-ಪೋರ್ಟಲ್‌ನಲ್ಲಿ ಮಾತ್ರ)

ಈ ಕಛೇರಿ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 13/2024-25 ದಿ.26.12.2024

ರೂ. 3.32 ರಿಂದ 3.37 ಲಕ್ಷದ ವರೆಗಿನ ಒಟ್ಟು 03 ಕಾಮಗಾರಿಗಳಿಗೆ (ನಾಲೆಯಲ್ಲಿ ಜಂಗಲ್, ಹೂಳು ತೆಗೆಯುವ, ಕಾಲುವೆ ರಿಪೇರಿ ಹಾಗೂ ಇತರೆ ನಿರ್ವಹಣಾ ಕಾಮಗಾರಿಗಳು) ಏಕ-ಬಿಡ್ ಪದ್ಧತಿಯಲ್ಲಿ **ಕೆ.ಡಬ್ಲ್ಯೂ-3** ಅನುಸಾರ ಐಟಂವಾರು ಟೆಂಡರ್‌ನ್ನು ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಅರ್ಹ ಗುತ್ತಿಗೆದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಟೆಂಡರ್ ಪ್ರೊಸೆಸಿಂಗ್ ಶುಲ್ಕ, ಇ.ಎಂ.ಡಿ. ಮೊತ್ತ ಹಾಗೂ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಟೆಂಡರ್ ಅನ್ನು ತೆರೆಯುವ ದಿನಾಂಕ ಹಾಗೂ ಇತರೆ ವಿವರಗಳನ್ನು ಅಂತರ್ಜಾಲದ ಮೂಲಕ ವೆಬ್‌ಸೈಟ್ ವಿಳಾಸ: **https://kppp.karnataka.gov.in** ರಲ್ಲಿ ಪಡೆಯಬಹುದು.

ಹೆಚ್ಚಿನ ವಿವರಗಳನ್ನು ಈ ಕಛೇರಿಯಿಂದ ಪಡೆಯಬಹುದಾಗಿದೆ.

ಸಹಿ/- ಕಾರ್ಯಪಾಲಕ ಇಂಜಿನಿಯರ್, ಕಬಿನಿ ನಾಲೆಗಳ ವಿಭಾಗ, ನಂಜನಗೂಡು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45


ಡಿಸೆಂಬರ್ 27 ಶುಕ್ರವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 250 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಮಿತ್ರ
ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಡಿಸೆಂಬರ್ 27 ಶುಕ್ರವಾರ 2024
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
45
ಸಂಪುಟ: 45 | ಸಂಚಿಕೆ: 250 | ಪುಟಗಳು: 12
ಸುದ್ದಿ, ಫೋಟೋಗ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಭಾರತದ ಆರ್ಥಿಕ ಸುಧಾರಣೆಯ ಹರಿಕಾರ ಮಾಜಿ ಪ್ರಧಾನಿ

ಡಾ.ಮನಮೋಹನ್ ಸಿಂಗ್ ಇನ್ನಿಲ್ಲ

ಯುಪಿಎ ಅಧಿಕಾರಾವಧಿಯಲ್ಲಿ ಒಟ್ಟು 10 ವರ್ಷಗಳ ಕಾಲ ಪ್ರಧಾನಮಂತ್ರಿಯಾಗಿದ್ದರು
ಕೇಂದ್ರ ಸರ್ಕಾರದಿಂದ ಏಳು ದಿನ ರಾಷ್ಟ್ರೀಯ ಶೋಕಾಚರಣೆ; ಇಂದು ಕೇಂದ್ರದ ಎಲ್ಲಾ ಕಾರ್ಯಕ್ರಮ ರದ್ದು

ನವದೆಹಲಿ, ಡಿ.26– ಎರಡು ಅವಧಿಗೆ (ಹತ್ತು ವರ್ಷ) ದೇಶದ ಪ್ರಧಾನಿ ಪಟ್ಟವನ್ನು ಅಲಂಕರಿಸಿದ್ದ ಮನಮೋಹನ್ ಸಿಂಗ್ ಅವರು ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆ ಯಿಂದ ಬಳಲುತ್ತಿದ್ದ 92 ವರ್ಷದ ಮನ ಮೋಹನ್ ಸಿಂಗ್ ದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಉಸಿ ರಾಟದ ತೊಂದರೆ ಹಿನ್ನೆಲೆಯಲ್ಲಿ ಅವರನ್ನು ಇಂದು ರಾತ್ರಿ 8 ಗಂಟೆಗೆ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ರಾತ್ರಿ 9.51ಕ್ಕೆ ಇಹಲೋಕ ತ್ಯಜಿಸಿದರು.

ಡಾ. ಸಿಂಗ್ ಅವರು ಪತ್ನಿ ಗುರುಶರಣ್ ಕೌರ್ ಮತ್ತು ಮೂವರು ಪುತ್ರಿಯರನ್ನು ಅಗಲಿದ್ದಾರೆ. ಕೇಂದ್ರ ಸರ್ಕಾರ ಏಳು ದಿನ ರಾಷ್ಟ್ರೀಯ ಶೋಕಾಚರಣೆ ಘೋಷಿಸಿದ್ದು, ಇಂದು ಎಲ್ಲಾ ಕಾರ್ಯಕ್ರಮ ರದ್ದುಪಡಿಸಿದೆ. 1991ರಲ್ಲಿ ರಾಜ್ಯಸಭೆಗೆ ಪ್ರವೇಶ ಮಾಡುವ ಮೂಲಕ ತಮ್ಮ ರಾಜಕೀಯ ಇನ್ನಿಂಗ್ಸ್ ಆರಂಭಿಸಿದ್ದರು. 2024ರ ಏಪ್ರಿಲ್‌ನಲ್ಲಿ ಅವರ ರಾಜ್ಯಸಭೆ ಅಧಿಕಾರಾವಧಿ ಅಂತ್ಯವಾಗಿತ್ತು. ಈ ಮೂಲಕ ಅವರು ಸಂಸತ್ತಿನ ಮೇಲ್ಮನೆಯಲ್ಲಿ 33 ವರ್ಷಗಳ ಕಾಲ ಇದ್ದರು.

ದೇಶದ ಆರ್ಥಿಕ ಸುಧಾರಣೆಗಳ ದಿಟ್ಟ ಹೆಜ್ಜೆ ಕೈಗೊಂಡು, ಆಧುನಿಕ ಭಾರತದ ಆರ್ಥಿಕತೆಯ ರೂವಾರಿ ಎನಿಸಿದ್ದ ಸಿಂಗ್, 1991ರ ಅಕ್ಟೋಬರ್‌ನಲ್ಲಿ ಮೊದಲ ಬಾರಿಗೆ ರಾಜ್ಯಸಭೆ ಪ್ರವೇಶಿಸಿದ್ದರು. ಅವರು 1991ರಿಂದ 1996ರವರೆಗೆ ನರಸಿಂಹ ರಾವ್ ಸಂಪುಟದಲ್ಲಿ ಹಣಕಾಸು ಸಚಿವರಾಗಿದ್ದರು. ಬಳಿಕ 2004ರಿಂದ 2014ರ ವರೆಗೆ ದೇಶದ ಪ್ರಧಾನಿಯಾಗಿದ್ದರು.

ಮನಮೋಹನಸಿಂಗ್ ಅವರು 1932ರ ಸೆಪ್ಟೆಂಬರ್ 26ರಂದು ಅವಿಭಜಿತ ಭಾರತದ ಪಂಜಾಬ್ ಪ್ರಾಂತ್ಯದಲ್ಲಿ ಜನಿಸಿದ್ದರು. ಡಾ. ಸಿಂಗ್ ಅವರು ಮೆಟ್ರಿಕ್ಯುಲೇಷನ್ ಪರೀಕ್ಷೆಯನ್ನು 1948ರಲ್ಲಿ ಪಂಜಾಬ್ ವಿಶ್ವವಿದ್ಯಾಲಯದಿಂದ ಪೂರ್ಣಗೊಳಿಸಿದ್ದರು. ■6ನೇ ಪುಟಕ್ಕೆ



ಮಾಜಿ ಪ್ರಧಾನಮಂತ್ರಿ ಡಾ.ಮನಮೋಹನ್‌ಸಿಂಗ್ 26.09.1932 — 26.12.2024

ಇಂದು ರಾಜ್ಯದಲ್ಲಿ ಸರ್ಕಾರಿ ರಜೆ

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಶುಕ್ರವಾರದಂದು ಸರ್ಕಾರಿ ರಜೆ ಘೋಷಿಸಿದೆ. ಅದರಂತೆ ಶಾಲಾ–ಕಾಲೇಜು ಹಾಗೂ ಎಲ್ಲಾ ಸರ್ಕಾರಿ ಕಚೇರಿಗಳಿಗೆ ರಜೆ ಇರಲಿದೆ. ಅಲ್ಲದೆ ಇಂದಿನಿಂದ ಜ.1ರವರೆಗೆ ಏಳು ದಿನಗಳ ಕಾಲ ರಾಜ್ಯಾದ್ಯಂತ ಶೋಕಾಚರಣೆ ಘೋಷಿಸಿದೆ. ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನೋರಂಜನಾ ಕಾರ್ಯಕ್ರಮಗಳು ನಡೆಸುವುದನ್ನು ನಿಷೇಧಿಸಲಾಗಿದೆ. ನಿಯಮಿತವಾಗಿ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಮಟ್ಟದಲ್ಲಿ ಹಾರಿಸಬೇಕೆಂದು ಸರ್ಕಾರ ಆದೇಶಿಸಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ಮೋದಿ ಸಂತಾಪ




ರಾಷ್ಟ್ರಪತಿ ದ್ರೌಪದಿ ಮುರ್ಮು ಮನಮೋಹನ್ ಸಿಂಗ್ ನಿಧನಕ್ಕೆ ಸಂತಾಪ ಸೂಚಿಸಿ, ಅವರು ಅಪರೂಪದ ರಾಜಕಾರಣಿ. ಭಾರತದ ಆರ್ಥಿಕತೆಯನ್ನು ಸುಧಾರಿಸಲು ಮಹತ್ವದ ಕೊಡುಗೆಗಳನ್ನು ನೀಡಿದ್ದಾರೆ. ಅವರು ತಮ್ಮ ಕೊಡುಗೆಗಳ ಮೂಲಕ ಸದಾ ಜೀವಂತ ವಾಗಿರುತ್ತಾರೆ. ತಮಗೆ ದೊರೆತ ವಿವಿಧ ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸಿರುವ ಅವರು, ಶೈಕ್ಷಣಿಕ ಮತ್ತು ಆಡಳಿತದ ವಲಯದಲ್ಲಿ ತಮ್ಮದೇ ವಿಶಿಷ್ಟ ಛಾಪು ಮೂಡಿಸಿದ್ದಾರೆ. ■6ನೇ ಪುಟಕ್ಕೆ

ಅವಾಗಿಯೇ ಒಲಿದು ಬಂದ ನಾನಾ ಜವಾಬ್ದಾರಿ ಸ್ಥಾನಗಳು!

ಭಾರತದ ವಿಭಜನೆಯ ನಂತರ ಮನಮೋಹನ್ ಸಿಂಗ್ ಕುಟುಂಬವು ಭಾರತದ ಹಲ್ದ್‌ವಾನ್‌ಗೆ ವಲಸೆ ಹೋಯಿತು. 1948ರಲ್ಲಿ ಅವರು ಅಮೃತಸರಕ್ಕೆ ಸ್ಥಳಾಂತರಗೊಂಡರು. ಅಮೃತಸರದ ಹಿಂದೂ ಕಾಲೇಜಿನಲ್ಲಿ ಅಧ್ಯಯನ ಮಾಡಿದ ಅವರು ಪಂಜಾಬ್ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡಿದ ನಂತರ ಹೋಶಿಯಾರ್ಪುರದಲ್ಲಿ ಅರ್ಥಶಾಸ್ತ್ರವನ್ನು ಅಧ್ಯಯನ ಮಾಡಿದರು ಮತ್ತು ಕ್ರಮವಾಗಿ 1952 ಹಾಗೂ 1954ರಲ್ಲಿ ತಮ್ಮ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ಪಡೆದರು. ಅವರ ಶೈಕ್ಷಣಿಕ ವೃತ್ತಿಜೀವನದುದ್ದಕ್ಕೂ ಮೊದಲ ಸ್ಥಾನ ಪಡೆದರು. ಅವರು 1957ರಲ್ಲಿ ಕೇಂಬ್ರಿಡ್ಜ್ ■6ನೇ ಪುಟಕ್ಕೆ

ನಿಗರ್ವಿ, ಶ್ರದ್ಧೆ, ವಿನೀತ ಭಾವದ ಸಾಕಾರ ಮೂರ್ತಿ

ಭಾರತದ ಹದಿನಾಲ್ಕನೇ ಪ್ರಧಾನ ಮಂತ್ರಿ ಡಾ.ಮನಮೋಹನಸಿಂಗ್ ಅವರನ್ನು ಚಿಂತಕರು ಮತ್ತು ವಿದ್ವಾಂಸರು. ನಿಗರ್ವಿಗಳಾದ ಇವರು ತಮ್ಮ ಶೈಕ್ಷಣಿಕ ಮತ್ತು ಕರ್ತವ್ಯ ಎರಡರಲ್ಲೂ ಶ್ರದ್ಧೆ ಹಾಗೂ ವಿನೀತಭಾವನೆಯಿಂದ ಗೌರವಕ್ಕೆ ಪಾತ್ರರಾಗಿದ್ದಾರೆ.

ಡಾ.ಮನಮೋಹನಸಿಂಗ್ ಅವರ ಶೈಕ್ಷಣಿಕ ಜ್ಞಾನ ಅವರು ಪಂಜಾಬ್ ವಿಶ್ವವಿದ್ಯಾಲಯ ಹಾಗೂ ದೆಹಲಿಯ ಪ್ರತಿಷ್ಠಿತ ಆರ್ಥಿಕ ಶಾಲೆಯಲ್ಲಿ ಬೋಧಕರಾಗಿ ಕಳೆದ ವರ್ಷಗಳಲ್ಲಿ ಸಾಕಾರಗೊಂಡವು. ಯು.ಎನ್.ಸಿ.ಟಿ.ಎ.ಡಿ. ಸಚಿವಾಲಯದಲ್ಲಿ ಅವರು ಕೆಲಕಾಲ ಸೇವೆ ಸಲ್ಲಿಸಿದರು. ಇದರ ಫಲವಾಗಿ 1987ರಿಂದ 1990ರ ವರೆಗೆ ಅವರನ್ನು ಜೀನಿವಾದಲ್ಲಿನ ದಕ್ಷಿಣ ಆಯೋಗಕ್ಕೆ ಮಹಾಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಲಾಯಿತು. 1971ರಲ್ಲಿ ಡಾ.ಸಿಂಗ್ ಅವರು ವಾಣಿಜ್ಯ ಸಚಿವಾಲಯದಲ್ಲಿ ಆರ್ಥಿಕ ಸಲಹೆಗಾರರಾಗಿ ಭಾರತ ಸರ್ಕಾರವನ್ನು ಸೇರಿದರು. 1972ರಲ್ಲಿ ಇವರನ್ನು ಹಣಕಾಸು ಸಚಿವಾಲಯದ ಮುಖ್ಯ ಆರ್ಥಿಕ ಸಲಹೆಗಾರರಾಗಿ ನೇಮಕ ಮಾಡಲಾಯಿತು. ಡಾ. ಸಿಂಗ್ ಅವರು ಹಣಕಾಸು ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿ, ಯೋಜನಾ ಆಯೋಗದ ಉಪಾಧ್ಯಕ್ಷರಾಗಿ, ಭಾರತೀಯ ರಿಸರ್ವ್ ಬ್ಯಾಂಕ್ ಗೌರ್ನರ್ ಆಗಿ, ಪ್ರಧಾನ ಮಂತ್ರಿಗಳ ಸಲಹೆಗಾರರಾಗಿ, ವಿಶ್ವವಿದ್ಯಾಲಯ ಅನುದಾನ ■6ನೇ ಪುಟಕ್ಕೆ

'ದಿ ಆಕ್ಸಿಡೆಂಟಲ್ ಪ್ರೈಮ್‌ಮಿನಿಸ್ಟರ್'

2019ರಲ್ಲಿ ಬಿಡುಗಡೆಯಾದ 'ದಿ ಆಕ್ಸಿಡೆಂಟಲ್ ಪ್ರೈಮ್‌ಮಿನಿಸ್ಟರ್' ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ರಾಜಕೀಯ ಜೀವನವನ್ನು ಬಿಂಬಿಸಿದ ಚಿತ್ರ, ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಅವರಿಗೆ ಮಾಧ್ಯಮ ಸಲಹೆಗಾರರಾಗಿಯೂ ಕಾರ್ಯನಿರ್ವಹಿಸಿದ್ದ ಸಂಜಯ್ ಬರು ಅವರು ಬರೆದಿರುವ ಕೃತಿಯನ್ನು ಆಧರಿಸಿ ಸಿನಿಮಾ ಮಾಡಲಾಗಿತ್ತು. ಪ್ರಧಾನಮಂತ್ರಿಯವರ ಕಚೇರಿಯಲ್ಲಿ ಕಳೆದ ದಿನಗಳ ಬಗ್ಗೆ, ಪ್ರಧಾನಿಯವರ ಜತೆಗಿನ ಒಡನಾಟದ ಬಗ್ಗೆ ಕೃತಿಯಲ್ಲಿ ಅವರು ವಿವರಿಸಿದ್ದಾರೆ. ಮನಮೋಹನ್ ಸಿಂಗ್ ಅವರು ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿಯವರ ನಿಯಂತ್ರಣಕ್ಕೆ ಹೇಗೆ ಸಂಪೂರ್ಣವಾಗಿ ಅಧೀನರಾಗಿದ್ದರು ಎಂಬುದನ್ನು ಕೃತಿಯಲ್ಲಿ ವಿವರಿಸಿದ್ದರು. ಹಿರಿಯ ನಟ ಅನುಪಮ್ ಖೇರ್, ಅಕ್ಷಯ್ ಖನ್ನಾ ನಟಿಸಿರುವ ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ತಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ಫೆ.10ರಿಂದ ಮಹಾ ಕುಂಭಮೇಳ

● ಕೊರೊನಾ ವೇಳೆ ನಡೆಯದಿದ್ದ ಮೇಳ ● ಆರು ವರ್ಷದ ನಂತರ ಪುಣ್ಯಸ್ನಾನ; ಕಾಶಿಯಂತೆ ಗಂಗಾಪೂಜೆ, ದೀಪಾರತಿ

ಮೈಸೂರು, ಡಿ.26(ಬಿಎಲ್‌ಯು)– ಕೋಟ್ಯಾಂತರ ಜನರು ಸಮಾಗಮಗೊಳ್ಳುವ, ಉತ್ತರ ಭಾರತದ ಪ್ರಯಾಗ್ ರಾಜ್‌ನಲ್ಲಿ ನಡೆಯುವ ಮಹಾ ಕುಂಭ ಮೇಳದಂತೆ ಮೈಸೂರಿನ ತಿ.ನರಸೀಪುರದ ಕಾವೇರಿ, ಕಪಿಲಾ ಹಾಗೂ ಸ್ಪಟಿಕ ಸರೋವರ ನದಿಗಳು ಕೂಡುವ ತ್ರಿವೇಣಿ ಸಂಗಮದಲ್ಲಿ ದಕ್ಷಿಣ ಭಾರತದ ಮಹಾ ಕುಂಭಮೇಳ ಫೆಬ್ರವರಿ 10ರಿಂದ ಆರಂಭವಾಗಲಿದೆ. ಮೂರು ನದಿಗಳು ಕೂಡುವ ಪವಿತ್ರ ಸಂಗಮದಲ್ಲಿ 12ನೇ ಮಹಾ ಕುಂಭಮೇಳ ನಡೆಯಲಿದ್ದು, ಇಂದು ಮಠಾಧೀಶರು ಹಾಗೂ ಜಿಲ್ಲೆಯ ಅಧಿಕಾರಿಗಳು ಸಿದ್ಧತೆಗಳ ಕುರಿತಂತೆ ಪೂರ್ವಭಾವಿ ಸಭೆ ನಡೆಸಿದರು.

ಗಂಗಾ, ಯಮುನಾ, ಸರಸ್ವತಿ ನದಿಗಳ ಸಂಗಮ ಸ್ಥಳ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಮಹಾ ಕುಂಭ ಮೇಳ ಜನವರಿ 13ರಿಂದ ಫೆಬ್ರವರಿ 26ರವರೆಗೆ ನಡೆಯಲಿದೆ. ಅದೇ ಮಾದರಿಯಲ್ಲಿ ತಿ.ನರಸೀಪುರದ ತ್ರಿವೇಣಿ ಸಂಗಮದಲ್ಲಿ ಫೆಬ್ರವರಿ 10, 11 ಮತ್ತು 12ರಂದು ಮೂರು ದಿನಗಳ ಕಾಲ ದಕ್ಷಿಣ ಭಾರತದ ಮಹಾ ಕುಂಭಮೇಳ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ■6ನೇ ಪುಟಕ್ಕೆ



ಫೆ.12ರಂದು ಎರಡು ಶುಭ ಮೂಹೂರ್ತದಲ್ಲಿ ಪುಣ್ಯ ಸ್ನಾನ

ತ್ರಿವೇಣಿ ಸಂಗಮದಲ್ಲಿ ನಡೆಯುವ ಮಹಾ ಕುಂಭಮೇಳದಲ್ಲಿ ಫೆಬ್ರವರಿ 12ರಂದು ಎರಡು ಸಮಯಗಳು ಪುಣ್ಯ ಸ್ನಾನಕ್ಕೆ ಪ್ರಶಸ್ತ ಕಾಲವಾಗಿದೆ. ಫೆಬ್ರವರಿ 10ರಂದು ತ್ರಯೋದಶಿ, ಪುಷ್ಯ ಪ್ರಾತಃಕಾಲ 9 ಗಂಟೆಗೆ ಶ್ರೀ ಅಗಸ್ತ್ಯೇಶ್ವರ ಸನ್ನಿಧಿಯಲ್ಲಿ ಅನುಜ್ಞೆ, ಪುಣ್ಯಾಹ, ಗಣಹೋಮ, ಪೂರ್ಣಾಹುತಿ, ಅಭಿಷೇಕ, ಮಹಾ ಮಂಗಳಾರತಿ ನಡೆಯಲಿದ್ದು, ಸಂಜೆ 5 ಗಂಟೆಗೆ ಧರ್ಮ ಸಭೆ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಧ್ವಜಾರೋಹಣ ನಡೆಯಲಿದೆ. ಫೆಬ್ರವರಿ 11 ರಂದು ಚತುರ್ದಶಿ, ಆಶ್ಲೇಷಾ, ಪ್ರಾತಃ, ಪುಣ್ಯಾಹ, ನವಗ್ರಹ ಹೋಮ, ಸುದರ್ಶನ ಹೋಮ ನೆರವೇರಲಿದೆ. ಸಂಜೆ 4 ಗಂಟೆಗೆ ಸಂತರಿಂದ ■6ನೇ ಪುಟಕ್ಕೆ

ಪೂರ್ವ ಸಿದ್ಧತೆಗಳ ಬಗ್ಗೆ ಮಠಾಧೀಶರು, ಜಿಲ್ಲಾ ಅಧಿಕಾರಿಗಳ ಸಭೆ



ತಿ.ನರಸೀಪುರದಲ್ಲಿ ನಡೆಯುವ ಮಹಾ ಕುಂಭಮೇಳದ ಬಗ್ಗೆ ಮೈಸೂರಿನ ಚಾಮುಂಡಿಬೆಟ್ಟದ ಪಾದದ ಬಳಿಯ ಸುತ್ತೂರು ಶಾಖಾ ಮಠದಲ್ಲಿ ಗುರುವಾರ ನಡೆದ ಮಠಾಧೀಶರು ಹಾಗೂ ಜಿಲ್ಲೆಯ ಅಧಿಕಾರಿಗಳ ಸಭೆಯಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿದರು.

ಕುಂಭಮೇಳಕ್ಕೆ ಪೌರಾಣಿಕ ಹಿನ್ನೆಲೆ ಇದೆ

ಪ್ರಯಾಗ್‌ರಾಜ್‌ನಲ್ಲಿ ನಡೆಯುವ ಕುಂಭ ಮೇಳದಷ್ಟೆ ಮೈಸೂರಿನ ತಿ.ನರಸೀಪುರದಲ್ಲಿ ನಡೆಯುವ ಕುಂಭಮೇಳಕ್ಕೂ ಪೌರಾಣಿಕ ಹಾಗೂ ಧಾರ್ಮಿಕವಾಗಿ ಬಹಳ ಮಹತ್ವವಿದೆ.

ತಿರುಮಕೂಡಲು ಶ್ರೀ ಕ್ಷೇತ್ರವು ದಕ್ಷಿಣ ಗಂಗಾ ಎಂದೇ ಪ್ರಖ್ಯಾತವಾಗಿದೆ. ಕಾವೇರಿ, ಕಪಿಲಾ ಹಾಗೂ ಗುಪ್ತಗಾಮಿನಿಯಾಗಿ ಹರಿಯುವ ಸ್ಪಟಿಕ ಸರೋವರ ನದಿಗಳ ಸಂಗಮ ಕ್ಷೇತ್ರಕ್ಕೆ ಪೌರಾಣಿಕವಾಗಿ ಇತಿಹಾಸವಿದೆ. ಅಗಸ್ತ್ಯ ಮುನಿಗಳು ಸ್ವತಃ ತಾವೇ ಮರಳಿನ ಲಿಂಗವನ್ನು ಪ್ರತಿಷ್ಠಾಪಿಸಿ ಪೂಜಿಸಿದ ಅಗಸ್ತ್ಯೇಶ್ವರ ಸ್ವಾಮಿ ಹಾಗೂ ಹನುಮೇಶ್ವರ ಸನ್ನಿಧಿಗಳು ತ್ರಿವೇಣಿ ಸಂಗಮದಲ್ಲಿ ವಿರಾಜಮಾನವಾಗಿದೆ. ಈ ಕ್ಷೇತ್ರವು ಗಂಗಾ ತೀರ್ಥಕ್ಕಿಂತಲೂ ಒಂದು ಗುಲಗಂಜಿ ಪ್ರಮಾಣದಷ್ಟು ಹೆಚ್ಚು ಪುಣ್ಯ ನೆಲೆ ಎಂದು ಶ್ರೀ ಗುಂಜಾ ನರಸಿಂಹಸ್ವಾಮಿಯ ಹಸ್ತದಲ್ಲಿರುವ ತಕ್ಕಡಿಯು ಉದ್ಘೋಷಿಸುತ್ತಿದೆ. ಈ ಕಾರಣದಿಂದ ಶುಭ ಮುಹೂರ್ತದಲ್ಲಿ ಪುಣ್ಯ ಸ್ನಾನ ನೆರವೇರಲಿದೆ.

ಕಳೆದ ಬಾರಿಯ ಕಾಮಗಾರಿ ಬಾಕಿ ಇನ್ನು ಪಾವತಿಸಿಲ್ಲ

2019ರಲ್ಲಿ ನಡೆದ ಕುಂಭಮೇಳದ ಕಾಮಗಾರಿಯ ಬಿಲ್‌ಗಳನ್ನು ಗುತ್ತಿಗೆದಾರರಿಗೆ ಆರು ವರ್ಷವಾದರೂ ಇನ್ನು ನೀಡಿಲ್ಲ ಎಂದು ತಿ.ನರಸೀಪುರದ ತಾಲೂಕು ಪಂಚಾಯತ್ ಮಾಜಿ ಉಪಾಧ್ಯಕ್ಷ ಮರಯ್ಯ ಅಸಮಾಧಾನ ವ್ಯಕ್ತಪಡಿಸಿದರು.

ಗುತ್ತಿಗೆದಾರರ ಬಿಲ್ಅನ್ನು ಈ ಬಾರಿಯಾದರೂ ಕೊಡಿಸುವಂತೆ ಮನವಿ ಮಾಡಿದರು. ನದಿಯಲ್ಲಿ ನೀರು ಹೆಚ್ಚಾಗಿದೆ ಎಂಬ ಸಬೂಬು ಹೇಳಿ ಸ್ನಾನ ಘಟ್ಟ, ಸೋಪಾನ ನಿರ್ಮಾಣ ಹೀಗೆ ಹಲವು ಕಾಮಗಾರಿಗೆ ಅಧಿಕಾರಿಗಳು ನಿರಾಕರಿಸುತ್ತಾರೆ. ಆದರೆ, ಈ ಬಾರಿ ಶಾಶ್ವತವಾದ ಕೆಲಸಗಳು ಕಾರ್ಯರೂಪಕ್ಕೆ ಬರಬೇಕಿದೆ ಎಂದು ಆಗ್ರಹಿಸಿದರು. ಕುಂಭಮೇಳದ ಸಮಯದಲ್ಲಾದರೂ ತಿ.ನರಸೀಪುರದ ಎರಡು ಸೇತುವೆ ಸೇರಿದಂತೆ ಹಳ್ಳ ಕೊಳ್ಳಗಳಾಗಿರುವ ಇತರೆ ರಸ್ತೆಗಳ ಡಾಂಬರೀಕರಣ ಮಾಡಬೇಕು ಎಂದು ಮರಯ್ಯ ಮನವಿ ಮಾಡಿದರು. ವಾಟಾಳ್ ಮಠದ ಡಾ.ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಕಳೆದ ಬಾರಿ ನಡೆದ ಕುಂಭಮೇಳದ ಸಂದರ್ಭದಲ್ಲಿ ಗುತ್ತಿಗೆದಾರರಿಂದ ನಾನೇ ಹಲವು ಕಾಮಗಾರಿ ಮಾಡಿಸಿದ್ದೆ. ಆದರೆ ಆರು ವರ್ಷವಾದರೂ ಅವರಿಗೆ ಬಿಲ್ ನೀಡದಿರುವುದು ಸರಿಯಲ್ಲ ಎಂದರು.

ಮೈಸೂರು ಮಿತ್ರ

ಐದನೇ ಪುಟದಿಂದ

ಡಾ.ಮನಮೋಹನ್‌ಸಿಂಗ್ ಇನ್ನಿಲ್ಲ

ಅವರ ಶೈಕ್ಷಣಿಕ ಸಾಧನೆ ಅವರನ್ನು ಪಂಜಾಬ್‌ನಿಂದ ಇಂಗ್ಲೆಂಡ್‌ನ ಕೇಂಬ್ರಿಜ್ ವಿಶ್ವವಿದ್ಯಾಲಯಕ್ಕೆ ಕರೆದೊಯ್ಯಿತು. ಅಲ್ಲಿ ಅವರು 1957ರಲ್ಲಿ ಪ್ರಥಮ ದರ್ಜೆಯೊಂದಿಗೆ ಅರ್ಥಶಾಸ್ತ್ರದಲ್ಲಿ ಆನರ್ಸ್ ಪದವಿ ಪಡೆದರು. ನಂತರ ಅವರು 1962ರಲ್ಲಿ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ನಫ್ ಫೀಲ್ಡ್ ಕಾಲೇಜಿನಿಂದ ಅರ್ಥಶಾಸ್ತ್ರದಲ್ಲಿ ಡಿ.ಫಿಲ್ ಗೌರವ ಪಡೆದರು. ಅವರ ಕೃತಿ ಭಾರತದ ರಫ್ತು ಸ್ಥಿತಿ ಮತ್ತು ಸ್ವಾವಲಂಬಿ ಸುಸ್ಥಿರ ಪ್ರಗತಿಯಲ್ಲಿ ಅದರ ಭವಿಷ್ಯ ('India's Export Trends and Prospects for Self-Sustained Growth'-Clarendon Press, Oxford, 1964] ಭಾರತದ ಆಂತರಿಕ ಆಧಾರಿತ ವ್ಯಾಪಾರ ನೀತಿಯ ಆರಂಭಿಕ ವಿಮರ್ಶೆಯಾಗಿತ್ತು. ಡಾ. ಮನಮೋಹನಸಿಂಗ್ ಅವರ ಶೈಕ್ಷಣಿಕ ಜ್ಞಾನ ಅವರು ಪಂಜಾಬ್ ವಿಶ್ವವಿದ್ಯಾಲಯದಲ್ಲಿ ಹಾಗೂ ದೆಹಲಿಯ ಪ್ರತಿಷ್ಠಿತ ಆರ್ಥಿಕ ಶಾಲೆಯಲ್ಲಿ ಬೋಧಕರಾಗಿ ಸಾಕಾರಗೊಂಡವು. ಯುಎನ್‌ಸಿಟಿಎಡಿ ಸಚಿವಾಲಯದಲ್ಲಿ ಅವರು ಕೆಲಕಾಲ ಸೇವೆ ಸಲ್ಲಿಸಿದ್ದರು. ಇದರ ಫಲವಾಗಿ 1987ರಿಂದ 1990ರವರೆಗೆ ಅವರನ್ನು ಜಿನೀವಾದಲ್ಲಿನ ದಕ್ಷಿಣ ಆಯೋಗಕ್ಕೆ ಮಹಾಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಲಾಗಿತ್ತು. 1991ರಿಂದ 1996ರವರೆಗೆ ಡಾ. ಸಿಂಗ್ ಅವರು ಭಾರತದ ಹಣಕಾಸು ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರು ಆಗ ಮಾಡಿದ ಆರ್ಥಿಕ ಸುಧಾರಣೆಗಳಿಗೆ ಈಗಲೂ ವಿಶ್ವ ಮನ್ನಣೆ ಇದೆ. ಜನಪ್ರಿಯ ದೃಷ್ಟಿಕೋನದಿಂದ ನೋಡುವುದಾದರೆ ಭಾರತದ ಅಂದಿನ ದಿನಗಳು ಡಾ.ಸಿಂಗ್ ಅವರ ವ್ಯಕ್ತಿತ್ವವನ್ನು ಬಿಂಬಿಸುತ್ತವೆ. ಡಾ.ಸಿಂಗ್ ಅವರು ಸಾಮಾಜಿಕ ಕ್ಷೇತ್ರದ ತಮ್ಮ ಅದ್ವಿತೀಯ ಸಾಧನೆಗಾಗಿ ಹತ್ತು ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

ನಿಗರ್ವಿ, ಶ್ರದ್ಧೆ, ವಿನೀತ ಭಾವದ ಸಾಕಾರ ಮೂರ್ತಿ

ಆಯೋಗದ ಅಧ್ಯಕ್ಷರಾಗಿ ಸರ್ಕಾರದ ವಿವಿಧ ಹುದ್ದೆಗಳಲ್ಲಿ ಉನ್ನತ ಸ್ಥಾನವನ್ನು ಅಲಂಕರಿಸಿದ್ದರು. ಸ್ವತಂತ್ರ ಭಾರತದ ಆರ್ಥಿಕ ಇತಿಹಾಸದಲ್ಲಿ ಒಂದು ಮಹತ್ವದ ತಿರುವು ಮೂಡಿತು. 1991ರಿಂದ 1996ರವರೆಗೆ ಡಾ. ಸಿಂಗ್ ಅವರು ಭಾರತದ ಹಣಕಾಸು ಸಚಿವರಾಗಿ ಸೇವೆ ಸಲ್ಲಿಸಿದರು. ಅವರು ಆಗ ಮಾಡಿದ ಆರ್ಥಿಕ ಸುಧಾರಣೆಗಳಿಗೆ ಈಗಲೂ ವಿಶ್ವದ ಮನ್ನಣೆ ಇದೆ. ಇವರು ದೇಶದ ಎರಡನೇ ಅತ್ಯುನ್ನತ ನಾಗರಿಕ ಪ್ರಶಸ್ತಿ ಪದ್ಮ ವಿಭೂಷಣ (1987) ಪುರಸ್ಕೃತರಾಗಿದ್ದರು. ಜೊತೆಗೆ ವಿಜ್ಞಾನ ಕಾಂಗ್ರೆಸ್‌ನ ಜವಾಹರಲಾಲ್ ನೆಹರೂ ಜನ್ಮ ಶತಮಾನೋತ್ಸವ ಪ್ರಶಸ್ತಿ (1995), ಹಣಕಾಸು ಸಚಿವರಿಗೆ ನೀಡುವ ಏಷ್ಯಾ ವಿತ್ತ ಪ್ರಶಸ್ತಿ (1993 ಮತ್ತು 1994) ಹಣಕಾಸು ಸಚಿವರಿಗೆ ನೀಡುವ ಯೂರೋಹಣ ಪ್ರಶಸ್ತಿ (1993), ಕೇಂಬ್ರಿಜ್ ವಿಶ್ವವಿದ್ಯಾಲಯದ ಆಡಮ್ ಸ್ಮಿತ್ ಬಹುಮಾನ (1956), ಕೇಂಬ್ರಿಜ್ ನ ಸೇಂಟ್ ಜಾನ್ ಕಾಲೇಜಿನಲ್ಲಿ ಅತ್ಯುತ್ತಮ ಸಾಧನೆಗಾಗಿ ರೈಟ್ಸ್ ಪ್ರಶಸ್ತಿ (1955) ಲಭಿಸಿದೆ. ಇದರ ಜೊತೆಗೆ ಜಪಾನೀಸ್ ನಿಹಾನ್ ಕೇಜೈ ಶಿಂಬುನ್ ಗೌರವ ಸೇರಿದಂತೆ ಹಲವು ಸಂಸ್ಥೆಗಳ ಪ್ರಶಸ್ತಿಯೂ ಲಭಿಸಿದೆ. ಆಕ್ಸ್‌ಫರ್ಡ್ ಮತ್ತು ಕೇಂಬ್ರಿಜ್ ವಿಶ್ವವಿದ್ಯಾಲಯ ಸೇರಿದಂತೆ ಹಲವು ವಿಶ್ವವಿದ್ಯಾಲಯಗಳ ಗೌರವ ಪದವಿಗೂ ಡಾ. ಸಿಂಗ್ ಪಾತ್ರರಾಗಿದ್ದಾರೆ. ಡಾ.ಸಿಂಗ್ ಅವರು ಹಲವು ಅಂತಾರಾಷ್ಟ್ರೀಯ ಸಮಾವೇಶಗಳು, ಸಂಘಟನೆಗಳಲ್ಲಿ ಭಾರತವನ್ನು ಪ್ರತಿನಿಧಿಸಿದ್ದಾರೆ. 1993ರಲ್ಲಿ ಸೈಪ್ರಸ್‌ನಲ್ಲಿ ನಡೆದ ಕಾಮನ್‌ವೆಲ್ತ್ ಸರ್ಕಾರದ ಮುಖ್ಯಸ್ಥರ ಸಭೆ ಹಾಗೂ 1993ರಲ್ಲಿ ವಿಯನ್ನಾದಲ್ಲಿ ನಡೆದ ವಿಶ್ವ ಮಾನವ ಹಕ್ಕುಗಳ ಸಮಾವೇಶದಲ್ಲಿ ಪಾಲ್ಗೊಂಡ ಭಾರತೀಯ ನಿಯೋಗದ ನೇತೃತ್ವವನ್ನು ಡಾ. ಸಿಂಗ್ ವಹಿಸಿದ್ದರು. ತಮ್ಮ ರಾಜಕೀಯ ಜೀವನದಲ್ಲಿ ಅವರು 1991ರಿಂದ ಸಂಸತ್ತಿನ ಮೇಲ್ಮನೆ (ರಾಜ್ಯಸಭಾ) ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ. 1998ರಿಂದ 2004ರವರೆಗೆ ಅವರು ಮೇಲ್ಮನೆಯ ಪ್ರತಿಪಕ್ಷದ ನಾಯಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಅವರು 2004ರ ಮೇ 22ರಂದು ಪ್ರಧಾನಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡರು. 2009ರ ಮೇ 22ರಂದು ಎರಡನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಅವರು ಮತ್ತೊಮ್ಮೆ ಪ್ರಮಾಣ ವಚನ ಸ್ವೀಕರಿಸಿದರು.

ನಾನಾ ಜವಾಬ್ದಾರಿ ಸ್ಥಾನಗಳು!

ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರಟ್ರೈಪೋಸ್ ಪೂರ್ಣಗೊಳಿಸಿದರು. ಅವರು ಸೇಂಟ್ ಜಾನ್ಸ್ ಕಾಲೇಜಿನ ಸದಸ್ಯರಾಗಿದ್ದರು.

ಡಿ.ಫಿಲ್ ಮುಗಿಸಿದ ನಂತರ ಸಿಂಗ್ ಭಾರತಕ್ಕೆ ಮರಳಿದರು. ಅವರು 1957 ರಿಂದ 1959ರವರೆಗೆ ಪಂಜಾಬ್ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದ ಹಿರಿಯ ಉಪನ್ಯಾಸಕರಾಗಿದ್ದರು. 1959 ಮತ್ತು 1963ರ ಅವಧಿಯಲ್ಲಿ ಪಂಜಾಬ್ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದಲ್ಲಿ ರೀಡರ್ ಆಗಿ ಸೇವೆ ಸಲ್ಲಿಸಿದರು ಮತ್ತು 1963 ರಿಂದ 1965ರವರೆಗೆ ಅಲ್ಲಿ ಅರ್ಥಶಾಸ್ತ್ರ ಪ್ರಾಧ್ಯಾಪಕರಾಗಿದ್ದರು. ನಂತರ ಅವರು 1966 ರಿಂದ 1969ರವರೆಗೆ ಯುನೈಟೆಡ್ ನೇಷನ್ಸ್ ಕಾನ್ಫರೆನ್ಸ್ ಓನ್ ಟ್ರೇಡ್ ಅಂಡ್ ಡೆವಲಪ್ಮೆಂಟ್ (ಯುಎನ್‌ಸಿಟಿಎಡಿ)ಗಾಗಿ ಕೆಲಸ ಮಾಡಿದರು. ನಂತರ ಅರ್ಥಶಾಸ್ತ್ರಜ್ಞರಾಗಿ ಸಿಂಗ್ ಅವರ ಪ್ರತಿಭೆಯನ್ನು ಗುರುತಿಸಿ ಲಲಿತ್ ನಾರಾಯಣ್ ಮಿಶ್ರಾ ಅವರು ಅವರನ್ನು ವಿದೇಶಿ ವ್ಯಾಪಾರ ಸಚಿವಾಲಯದ ಸಲಹೆಗಾರರಾಗಿ ನೇಮಿಸಿದರು. 1969ರಿಂದ 1971ರವರೆಗೆಸಿಂಗ್ ದೆಹಲಿ ವಿಶ್ವವಿದ್ಯಾಲಯದ ದೆಹಲಿ ಸ್ಕೂಲ್ ಆಫ್ ಎಕನಾಮಿಕ್ಸ್‌ನಲ್ಲಿ ಅಂತರರಾಷ್ಟ್ರೀಯ ವ್ಯಾಪಾರದ ಪ್ರಾಧ್ಯಾಪಕರಾಗಿದ್ದರು. 1972ರಲ್ಲಿ ಸಿಂಗ್ ಹಣಕಾಸು ಸಚಿವಾಲಯದಲ್ಲಿ ಮುಖ್ಯ ಆರ್ಥಿಕ ಸಲಹೆಗಾರರಾಗಿದ್ದರು ಮತ್ತು 1976ರಲ್ಲಿ ಅವರು ಹಣಕಾಸು ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿದ್ದರು. 1980–1982ರಲ್ಲಿ ಯೋಜನಾ ಆಯೋಗದಲ್ಲಿದ್ದರು. 1982ರಲ್ಲಿ ಅವರನ್ನು ಆಗಿನ ಹಣಕಾಸು ಸಚಿವ ಪ್ರಣಬ್ ಮುಖರ್ಜಿ ಅವರ ಅಡಿಯಲ್ಲಿ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಗವರ್ನರ್ ಆಗಿ ನೇಮಿಸಲಾಯಿತು. ಅವರು 1985ರವರೆಗೆ ಈ ಹುದ್ದೆಯ ಲ್ಲಿದ್ದರು. ಅವರು 1985ರಿಂದ 1987ರವರೆಗೆ ಯೋಜನಾ ಆಯೋಗದ (ಭಾರತ) ಉಪಾಧ್ಯಕ್ಷರಾದರು. ಯೋಜನಾ ಆಯೋಗದಲ್ಲಿ ಅವರ ಅಧಿಕಾರಾವಧಿಯ ನಂತರ ಅವರು 1987 ರಿಂದ ನವೆಂಬರ್ 1990ರವರೆಗೆ ಸ್ವಿಟ್ಜರ್ಲೆಂಡ್‌ನ ಜಿನೀವಾದಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ಸ್ವತಂತ್ರ ಆರ್ಥಿಕ ನೀತಿ ಚಿಂತಕರ ಚಾವಡಿಯಾದ ಸೌತ್ ಕಮಿಷನ್‌ನ ಪ್ರಧಾನ ಕಾರ್ಯದರ್ಶಿಯಾಗಿದ್ದರು. ಸಿಂಗ್ ನವೆಂಬರ್ 1990ರಲ್ಲಿ ಜಿನೀವಾದಿಂದ ಭಾರತಕ್ಕೆ ಮರಳಿದರು ಮತ್ತು ಚಂದ್ರಶೇಖರ್ ಅವರ ಅಧಿಕಾರಾವಧಿಯಲ್ಲಿ ಆರ್ಥಿಕ ವ್ಯವಹಾರಗಳ ಬಗ್ಗೆ ಭಾರತದ ಪ್ರಧಾನಮಂತ್ರಿಯ ಸಲಹೆಗಾರರಾಗಿ ಹುದ್ದೆಯನ್ನು ಅಲಂಕರಿಸಿದರು. ಮಾರ್ಚ್ 1991ರಲ್ಲಿ ಅವರು ವಿಶ್ವ ವಿದ್ಯಾಲಯ ಧನಸಹಾಯ ಆಯೋಗದ ಅಧ್ಯಕ್ಷರಾದರು.

ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ಮೋದಿ ಸಂತಾಪ

ಪ್ರಧಾನಿ ನರೇಂದ್ರ ಮೋದಿ: ಮನಮೋಹನ್ ಸಿಂಗ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದು, ಅವರೊಂದಿಗಿನ ಒಡನಾಟದ ಫೋಟೋಗಳನ್ನು ಶೇರ್ ಮಾಡಿಕೊಂಡಿದ್ದಾರೆ. 'ಭಾರತವು ತನ್ನ ಅತ್ಯಂತ ಪ್ರತಿಷ್ಠಿತ ನಾಯಕರಲ್ಲಿ ಒಬ್ಬರಾದ ಡಾ. ಮನಮೋಹನ್ ಸಿಂಗ್ ಅವರನ್ನು ಕಳೆದುಕೊಂಡು ದುಃಖಿಸುತ್ತದೆ. ಹಣಕಾಸು ಸಚಿವರಾಗಿ ಸೇರಿದಂತೆ ವಿವಿಧ ಸರ್ಕಾರಿ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಪ್ರಧಾನಿಯಾಗಿ, ಜನರ ಜೀವನವನ್ನು ಸುಧಾರಿಸಲು ಹಲವು ಪ್ರಯತ್ನಗಳನ್ನು ಮಾಡಿದ್ದಾರೆ. ಅವರು ಪ್ರಧಾನಿಯಾಗಿದ್ದಾಗ ನಾನು ಗುಜರಾತ್ ಸಿಎಂ ಆಗಿದ್ದೆ. ಆ ವೇಳೆ ನಿಯಮಿತವಾಗಿ ಸಂವಹನ ನಡೆಸುತ್ತಿದ್ದೆವು. ಆಡಳಿತಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ನಾವು ಚರ್ಚೆಗಳನ್ನು ನಡೆಸುತ್ತಿದ್ದೆವು' ಎಂದು ಬರೆದುಕೊಂಡಿದ್ದಾರೆ.

ಫೆ.10ರಿಂದ ಮಹಾ ಕುಂಭಮೇಳ

ಭಾಗವಹಿಸಲಿದ್ದಾರೆ. ಈ ಹಿನ್ನೆಲೆ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಸುತ್ತೂರು ಶಾಖಾ ಮಠದಲ್ಲಿ ಇಂದು ಮಠಾಧೀಶರು ಹಾಗೂ ಜಿಲ್ಲೆಯ ಅಧಿಕಾರಿಗಳು ಪೂರ್ವಭಾವಿ ಸಭೆ ನಡೆಸಿದರು.

ಈ ವೇಳೆ ಮಾತನಾಡಿದ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ದಕ್ಷಿಣ ಭಾರತದ ಮಹಾ ಕುಂಭಮೇಳ ಎಂಬ ಪ್ರಖ್ಯಾತಿ ಪಡೆದಿರುವ ತಿ.ನರಸೀಪುರದ ಮಹಾ ಕುಂಭಮೇಳದಲ್ಲಿ ಹಲವು ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದೆ. ಕೊರೊನಾ ಹಿನ್ನೆಲೆ ಕಳೆದ ಬಾರಿ ಕುಂಭಮೇಳ ನಡೆಯದ ಕಾರಣ ಈ ಬಾರಿ ಹೆಚ್ಚು ಭಕ್ತರು ಆಗಮಿಸುವ ನಿರೀಕ್ಷೆ ಇದೆ ಎಂದು ಅಭಿಪ್ರಾಯಪಟ್ಟರು.

ಡಿಸಿ ಜಿ.ಲಕ್ಷ್ಮಿ ಕಾಂತರೆಡ್ಡಿ ಮಾತನಾಡಿ, ತಿ.ನರಸೀಪುರದಲ್ಲಿ 6 ವರ್ಷಗಳ ನಂತರ ಕುಂಭಮೇಳ ನಡೆಸಲಾಗುತ್ತಿದೆ. ಭಕ್ತಾದಿಗಳಿಗೆ ಯಾವುದೇ ತೊಂದರೆ ಆಗದಂತೆ ಅಚ್ಚುಕಟ್ಟಾಗಿ ಎಲ್ಲಾ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಸೋಪಾನ ಸ್ಥಳದಿಂದ ಯಾಗ ನಡೆಯುವ ಸ್ಥಳದಲ್ಲಿ ತಾತ್ಕಾಲಿಕ ಸೇತುವೆ ನಿರ್ಮಾಣದ ಅಗತ್ಯವಿದೆ. ಕಾಶಿಯಲ್ಲಿ ನಡೆಯುವ ಗಂಗಾರತಿಯಂತೆ ಇಲ್ಲಿಯೂ ಗಂಗಾರತಿಗೆ ವ್ಯವಸ್ಥೆ ಮಾಡುವಂತೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಜಿಲ್ಲಾಡಳಿತಕ್ಕೆ ಸಲಹೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಮಾತನಾಡಿ, ಕುಂಭಮೇಳದಲ್ಲಿ ಲಕ್ಷಾಂತರ ಜನರು ಭಾಗವಹಿಸುವ ಹಿನ್ನೆಲೆ ಯಾವುದೇ ತೊಡಕಾಗದಂತೆ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ವ್ಯವಸ್ಥೆಯನ್ನು ನಿರ್ವಹಿಸುವುದಾಗಿ ತಿಳಿಸಿದರು.

ಶುಭ ಮೂಹೂರ್ತದಲ್ಲಿ ಪುಣ್ಯ ಸ್ನಾನ

ಮಹಾ ಮಂಡಲೇಶ್ವರ ಸಂಗಮ ಕ್ಷೇತ್ರ ಪ್ರವೇಶ, ಗುಂಜಾನರಸಿಂಹ ಸ್ವಾಮಿ ದೇವಸ್ಥಾನದಿಂದ ನರಸೀಪುರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಲಿದೆ.


ತರುವಾಯ ಸಂಜೆ 6 ಗಂಟೆಗೆ ಶ್ರೀ ರುದ್ರಹೋಮ, ಪೂರ್ಣಾಹುತಿ ನಡೆಯಲಿದ್ದು, ರಾತ್ರಿ 7 ಗಂಟೆಗೆ ಕಾಶಿ ಮಾದರಿಯಲ್ಲಿ ಗಂಗಾಪೂಜೆ ಹಾಗೂ ದೀಪಾರತಿ ಕಾರ್ಯಕ್ರಮಗಳು ನೆರವೇರಲಿದೆ.

ಕೊನೆಯ ದಿನವಾದ ಫೆಬ್ರವರಿ 12ರಂದು ಬೆಳಿಗ್ಗೆ ಪೂರ್ಣಿಮಾ ಮಖಾ ನಕ್ಷತ್ರ, ಚಂಡಿಕಾ ಹೋಮ, ಪೂರ್ಣಾಹುತಿ, ಕುಂಭೋಧ್ವಾಸನಸ ಹಾಗೂ ಸಪ್ತ ಪವಿತ್ರ ನದಿಗಳಿಂದ ತಂದ ತೀರ್ಥಗಳನ್ನು ತ್ರಿವೇಣಿ ಸಂಗಮದಲ್ಲಿ ಸಂಯೋಜನೆ ಮಾಡಿ ಪುಣ್ಯ ಸ್ನಾನ ಮಾಡಲಾಗುವುದು. ತರುವಾಯ ಧರ್ಮ ಸಭೆ ನಡೆಯಲಿದೆ.

ಫೆಬ್ರವರಿ 12ರಂದು ಮೀನ ಲಗ್ನದಲ್ಲಿ ಬೆಳಿಗ್ಗೆ 9ರಿಂದ 9.30 ಗಂಟೆವರೆಗೆ ಹಾಗೂ ವೃಷಭ ಲಗ್ನದಲ್ಲಿ ಮಧ್ಯಾಹ್ನ 12ರಿಂದ 1 ಗಂಟೆವರೆಗೆ ಪುಣ್ಯ ಸ್ನಾನಕ್ಕೆ ಪ್ರಶಸ್ತ ಕಾಲ ನಿಗದಿ ಮಾಡಲಾಗಿದೆ.

ಡಾ.ಮನಮೋಹನ್ ಸಿಂಗ್ ನಿಧನಕ್ಕೆ ಗಣ್ಯರ ಸಂತಾಪ


ನವದೆಹಲಿ: ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ (92) ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಹಲವು ಸಂತಾಪ ಸೂಚಿಸಿದ್ದಾರೆ.



ಮಾಜಿ ಪ್ರಧಾನಿ ಎಚ್. ಡಿ. ದೇವೇಗೌಡ ಅವರು ಸಂತಾಪ ಸೂಚಿಸಿ, 'ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದ ಸುದ್ದಿ ತಿಳಿದು ದುಃಖವಾಗಿದೆ. ಅವರು ಒಳ್ಳೆಯ ಮತ್ತು ತಾಳ್ಮೆಯ ವ್ಯಕ್ತಿ, ಅದ್ಭುತ ಅರ್ಥಶಾಸ್ತ್ರಜ್ಞ ಮತ್ತು ನಾನು ಗೌರವಿಸುವ ಸಹೋದ್ಯೋಗಿ. ಭಾರತದ ಆರ್ಥಿಕ ಭವಿಷ್ಯವನ್ನು ಬದಲಿಸಿದ ವ್ಯಕ್ತಿ' ಎಂದು ಹೇಳಿದ್ದಾರೆ



ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಂತಾಪ ಸೂಚಿಸಿ ಮನಮೋಹನ್ ಸಿಂಗ್ ಅವರು ಭಾರತವನ್ನು ಅಪಾರ ಬುದ್ಧಿವಂತಿಕೆ ಮತ್ತು ಸಮಗ್ರತೆಯಿಂದ ಮುನ್ನಡೆಸಿದರು. ಅವರ ನಮ್ರತೆ ಮತ್ತು ಅರ್ಥಶಾಸ್ತ್ರದ ತಿಳುವಳಿಕೆಯು ರಾಷ್ಟ್ರವನ್ನು ಪ್ರೇರೇಪಿಸಿತು. ಶ್ರೀಮತಿ ಕೌರ್ ಮತ್ತು ಕುಟುಂಬಕ್ಕೆ ನನ್ನ ಹೃತ್ಪೂರ್ವಕ ಸಂತಾಪಗಳು. ನಾನು ಮಾರ್ಗದರ್ಶಕನನ್ನು ಕಳೆದುಕೊಂಡಿದ್ದೇನೆ. ಅವರನ್ನು ಮೆಚ್ಚಿದ ಲಕ್ಷಾಂತರ ಜನರು ಅವರನ್ನು ಅತ್ಯಂತ ಹೆಮ್ಮೆಯಿಂದ ನೆನಪಿಸಿಕೊಳ್ಳುತ್ತಾರೆ.



ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸಂತಾಪ ಸೂಚಿಸಿ, 'ದಾರ್ಶನಿಕ ಅರ್ಥಶಾಸ್ತ್ರಜ್ಞ, ರಾಜನೀತಿಜ್ಞ, ಮತ್ತು ಭಾರತವನ್ನು ನಿರ್ಣಾಯಕ ಸಮಯಗಳಲ್ಲಿ ಬುದ್ಧಿವಂತಿಕೆಯಿಂದ ಮುನ್ನಡೆಸಿದ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನದಿಂದ ತೀವ್ರ ದುಃಖವಾಗಿದೆ. ಭಾರತದ ಆರ್ಥಿಕ ಸುಧಾರಣೆಗಳು, ಜಾಗತಿಕ ಮಟ್ಟ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ಅವರ ಕೊಡುಗೆಗಳು ಶಾಶ್ವತವಾಗಿ ಸ್ಮರಣೀಯವಾಗಿರುತ್ತವೆ. ಡಾ. ಸಿಂಗ್ ಅವರು ಸಾರ್ವಜನಿಕ ಜೀವನದಲ್ಲಿ ಸಮಗ್ರತೆ, ನಮ್ರತೆ ಮತ್ತು ಬುದ್ಧಿವಂತಿಕೆಯ ದಾರಿದೀಪವಾಗಿದ್ದರು, ತಲೆಮಾರುಗಳ ನಾಯಕರು ಮತ್ತು ನಾಗರಿಕರನ್ನು ಸಮಾನವಾಗಿ ಪ್ರೇರೇಪಿಸಿದರು. ಅವರ ಕುಟುಂಬ ಮತ್ತು ಪ್ರೀತಿಪಾತ್ರರಿಗೆ ನನ್ನ ಹೃತ್ಪೂರ್ವಕ ಸಂತಾಪಗಳು. ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ.



ಆರ್. ಅಶೋಕ್ ಅವರು, 'ಭಾರತದ ಮಾಜಿ ಪ್ರಧಾನಿ ಶ್ರೀ ಮನಮೋಹನ್ ಸಿಂಗ್ ಅವರು ವಿಧಿವಶರಾದ ಸುದ್ದಿ ತೀವ್ರ ನೋವುಂಟು ಮಾಡಿದೆ. ಕೇಂದ್ರ ಹಣಕಾಸು ಸಚಿವರಾಗಿ, ಆರ್‌ಬಿಐ ಗವರ್ನರ್ ಆಗಿ, ಆರ್ಥಿಕ ಸಲಹೆಗಾರರಾಗಿ, ರಾಜ್ಯಸಭೆಯ ಪ್ರತಿಪಕ್ಷ ನಾಯಕರಾಗಿ, ಪ್ರಧಾನ ಮಂತ್ರಿಗಳಾಗಿ ಸುಮಾರು ಐದು ದಶಕಗಳ ಕಾಲ ಅನೇಕ ಹುದ್ದೆಗಳಲ್ಲಿ ರಾಷ್ಟ್ರ ಸೇವೆ ಸಲ್ಲಿಸಿದ ಡಾ. ಮನಮೋಹನ್ ಸಿಂಗ್ ಅವರ ನಿಧನದಿಂದ ದೇಶ ಒಬ್ಬ ಮುತ್ಸದ್ದಿ ನಾಯಕನನ್ನು ಕಳೆದುಕೊಂಡಂತಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ, ಅವರ ಕುಟುಂಬಸ್ಥರಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ' ಎಂದು ಬರೆದುಕೊಂಡಿದ್ದಾರೆ.



ಆಡು ಮುಟ್ಟದ ಸೊಪ್ಪಿಲ್ಲ ಎನ್ನುವಂತೆ ಮನಮೋಹನ್ ಸಿಂಗ್ ತಿಳಿಯದ ಆರ್ಥಿಕ ನೀತಿ ಇಲ್ಲ ಅರ್ಥಶಾಸ್ತ್ರದಲ್ಲಿ ಆಳವಾದ ಜ್ಞಾನ ಹೊಂದಿದ್ದ ಅವರು ಇಡೀ ವಿಶ್ವವೇ ಮೆಚ್ಚುಗೆ ಪಡುವಂತಹ ಆರ್ಥಿಕ ನೀತಿಗಳನ್ನು ರೂಪಿಸಿ ಭಾರತದ ಆರ್ಥಿಕತೆಯ ದಿಗ್ಗಜರೆನಿಸಿಕೊಂಡರು. ಅವರ ಆರ್ಥಿಕ ಶಿಸ್ತು, ಬದ್ಧತೆ ದೇಶದ ಅಭಿವೃದ್ಧಿಗೆ ಹೆಚ್ಚು ಪೂರಕವಾಗಿತ್ತು. ಅವರ ಅಧಿಕಾರಾವಧಿ ಭಾರತದ ಆರ್ಥಿಕತೆಯ ಮೈಲಿಗಲ್ಲು. ಅಂತಹ ಆರ್ಥಿಕ ತಜ್ಞರ ನಿಧನದಿಂದ ಭಾರತ ದೇಶಕ್ಕೆ ಅಪಾರ ನಷ್ಟ ಉಂಟಾಗಿದೆ.

-ಎಂ.ಕೆ.ಸೋಮಶೇಖರ್, ಮಾಜಿ ಶಾಸಕರು.



ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಂತಾಪ ಸೂಚಿಸಿ, ಮಾಜಿ ಪ್ರಧಾನಿಯವರ ನಿಧನದಿಂದ ಭಾರತವು ಒಬ್ಬ ದೂರದೃಷ್ಟಿಯ ರಾಜನೀತಿ ತಜ್ಞ, ಸಮಗ್ರತೆಯ ನಾಯಕ ಮತ್ತು ಅಪ್ರತಿಮ ಅರ್ಥಶಾಸ್ತ್ರಜ್ಞನನ್ನು ಕಳೆದುಕೊಂಡಿದೆ. ಅವರ ಆರ್ಥಿಕ ಉದಾರೀಕರಣ ಮತ್ತು ಹಕ್ಕುಗಳ ಆಧಾರಿತ ಕಲ್ಯಾಣ ಮಾದರಿಯ ನೀತಿಯು ಕೋಟ್ಯಾಂತರ ಭಾರತೀಯರ ಜೀವನವನ್ನು ಗಾಢವಾಗಿ ಪರಿವರ್ತಿಸಿತು. ಭಾರತದಲ್ಲಿ ಮಧ್ಯಮ ವರ್ಗವನ್ನು ಸೃಷ್ಟಿಸಿತು ಮತ್ತು ಕೋಟಿಗಟ್ಟಲೆ ಜನರನ್ನು ಬಡತನದಿಂದ ಮೇಲಕ್ಕೆತ್ತಿತು. ಜೀವನದುದ್ದಕ್ಕೂ ಹಿರಿಯ ಸಹೋದ್ಯೋಗಿ, ಸೌಮ್ಯ ಬುದ್ಧಿಜೀವಿ ಮತ್ತು ಭಾರತದ ಆಕಾಂಕ್ಷೆಗಳನ್ನು ಸಾಕಾರಗೊಳಿಸಿದ ವಿನಮ್ರ ಚೇತನರಾಗಿ ಬದುಕಿದವರು. ಕಾರ್ಮಿಕ ಸಚಿವಾಗಿ, ರೈಲ್ವೆ ಸಚಿವಾಗಿ ಮತ್ತು ಸಮಾಜ ಕಲ್ಯಾಣ ಸಚಿವಾಗಿ ಅವರ ಸಂಪುಟದ ಭಾಗವಾಗಿದ್ದಕ್ಕೆ ನನಗೆ ಹೆಮ್ಮೆ ಇದೆ.



ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಸಿಎಂ ಸಿದ್ದರಾಮಯ್ಯ ಅವರು, 'ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದಿಂದ ದುಃಖಿತನಾಗಿದ್ದೇನೆ. ಅಪಾರ ಜ್ಞಾನ, ದೂರದೃಷ್ಟಿಯ ಆಲೋಚನೆ ಹಾಗೂ ಸಮರ್ಥ ನಾಯಕತ್ವವು ಭಾರತದ ನೆಲದಲ್ಲಿ ಅವರನ್ನು ಅಮರವಾಗಿಸಲಿದೆ. ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ ನಾನು ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿ ಕೊಂಡೆ. ಈ ಸಂದರ್ಭದಲ್ಲಿ ನಮ್ಮ ಸರ್ಕಾರದ ಯೋಜನೆ ಗಳಿಗೆ ಅವರಿಂದ ದೊರೆತ ಮಾರ್ಗದರ್ಶನ ಹಾಗೂ ಬೆಂಬಲವನ್ನು ಸ್ಮರಿಸಲೇಬೇಕು. ಯುಪಿಎ ಸರ್ಕಾರದ ಆಹಾರ ಹಕ್ಕು ಕಾಯ್ದೆಯು ನಮ್ಮ ನಾಡಿನ ಪ್ರಗತಿಯ ಹಾದಿಗೆ ಹೊಸ ಆಯಾಮ ಕಲ್ಪಿಸಿಕೊಟ್ಟಿದೆ. ಮಾತಿಗಿಂತ ಕೃತಿ ಲೇಸೆಂಬ ನುಡಿಗಟ್ಟಿಗೆ ಅನ್ವರ್ಥದಂತೆ ಬದುಕಿದ ಓರ್ವ ಮುತ್ಸದ್ದಿ ನಾಯಕನನ್ನು ಕಳೆದುಕೊಂಡ ಭಾರತವಿಂದು ಬಡವಾಗಿದೆ. ಮೃತರ ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬ ವರ್ಗ ಮತ್ತು ಕೋಟ್ಯಂತರ ಅಭಿಮಾನಿ ಗಳಿಗೆ ದುಃಖ ಭರಿಸುವ ಶಕ್ತಿ ಸಿಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ' ಎಂದು ಬರೆದುಕೊಂಡಿದ್ದಾರೆ.



ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದಿಂದ ದೇಶವು ಮಹಾನ್ ಆರ್ಥಿಕ ತಜ್ಞರೊಬ್ಬರನ್ನು ಕಳೆದುಕೊಂಡಿದೆ. ಭಾರತವನ್ನು ವಿಶ್ವದ ಬಲಿಷ್ಠ ಆರ್ಥಿಕ ಶಕ್ತಿಯಾಗಿ ರೂಪಿಸುವಲ್ಲಿ ಅವರ ಪಾತ್ರ ಮಹತ್ವದ್ದು. ಅವರು ನಿಜಕ್ಕೂ ಭವ್ಯ ಭಾರತದ ನಿರ್ಮಾತೃ. ಕೇಂದ್ರದಲ್ಲಿ ಹಣಕಾಸು ಸಚಿವರು, ಆರ್‌ಬಿಐನ ಗವರ್ನರ್, ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆಯ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಅವರ ಕೊಡುಗೆ ಅಪಾರ. ಅವರ ನೆನಪು ಅಜರಾಮರ.

-ಸಿ.ನಾರಾಯಣಗೌಡ, ಅಧ್ಯಕ್ಷರು, ಮೈಸೂರು ಹೋಟೆಲ್ ಮಾಲೀಕರ ಸಂಘ.



ಡಾ.ಮನಮಹೋನ್ ಸಿಂಗ್ ನಿಧನದಿಂದ ದೇಶವು ಅತ್ಯುತ್ತಮ ಅರ್ಥ ಶಾಸ್ತ್ರಜ್ಞರೊಬ್ಬರನ್ನು ಕಳೆದುಕೊಂಡಿದೆ. ದೇಶದ ಪ್ರಧಾನಿಯಾಗಿ 10 ವರ್ಷಗಳ ಕಾಲ ಆಡಳಿತ ನಡೆಸಿದ ಅವರು ದೇಶದ ಅಭಿವೃದ್ಧಿಗಾಗಿ ತಮ್ಮ ಜ್ಞಾನವನ್ನು ವಿನಿಯೋಗಿಸಿದರು. ಆ ಮೂಲಕ ರಾಷ್ಟ್ರದ ಆರ್ಥಿಕ ಪರಿಸ್ಥಿತಿ ಉಜ್ವಲಗೊಳಿಸಿದ ಮಹಾನ್ ವ್ಯಕ್ತಿಯನ್ನು ದೇಶವಿಂದು ಕಳೆದುಕೊಂಡಿದೆ. ಅವರು ತಮ್ಮ ಸರಳ ಸಜ್ಜನಿಕೆ ವ್ಯಕ್ತಿತ್ವದಿಂದ ಇಡೀ ವಿಶ್ವದ ಗಮನ ಸೆಳೆದಿದ್ದರು.

-ಹೆಚ್.ಎ.ವೆಂಕಟೇಶ್, ವಕ್ತಾರರು, ಕೆಪಿಸಿಸಿ

ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸಮಾವೇಶ ರದ್ದು

ಬೆಳಗಾವಿಗೆ ಯಾರೂ ಬರಬೇಡಿ: ಡಿಕೆಶಿ ಮನವಿ



ಬೆಂಗಳೂರು, ಡಿ.26– ಆರ್ಥಿಕ ಸುಧಾರಣೆಯ ಹರಿಕಾರ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು ನಿಧನರಾದ ಹಿನ್ನೆಲೆಯಲ್ಲಿ ನಾಳೆ(ಡಿ.27) ಬೆಳಗಾವಿಯಲ್ಲಿ ನಡೆಯಬೇಕಾಗಿದ್ದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸಮಾವೇಶ ಸೇರಿದಂತೆ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ತುರ್ತು ಪತ್ರಿಕಾಗೋಷ್ಠಿ ನಡೆಸಿ ಡಾ.ಮನಮೋಹನ್ ಸಿಂಗ್ ಅವರ ನಿಧನಕ್ಕೆ ಸಂತಾಪ ಸೂಚಿಸಿ ಮಾತನಾಡಿದ ಅವರು ಶುಕ್ರವಾರ ಬೆಳಗ್ಗೆ 10:30ಕ್ಕೆ ಬೆಳಗಾವಿಯ ವೇದಿಕೆಯಲ್ಲಿ ಸಂತಾಪ ಸೂಚಿಸಲಾಗುವುದು. ನಂತರ ಕಾರ್ಯಕ್ರಮ ಮೊಟಕುಗೊಳಿಸಿ ದೆಹಲಿಗೆ ತೆರಳುವುದಾಗಿ ತಿಳಿಸಿದರು.

ಬೆಳಗಾವಿಯ ಕಾಂಗ್ರೆಸ್ ಕಾರ್ಯಕ್ರಮ ರದ್ದಾಗಿರುವುದರಿಂದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಬೆಳಗಾವಿಗೆ ಬರದಂತೆ ಮನವಿ ಮಾಡಿದ ಡಿಕೆಶಿ, ಮನಮೋಹನ್ ಸಿಂಗ್ ಅವರ ಸಾಧನೆಗಳನ್ನು ಸ್ಮರಿಸಿ ಕಂಬನಿ ಮಿಡಿದರು.

ಕೇಂದ್ರ ತುರ್ತು ಸಂಪುಟ ಸಭೆ: ಮನಮೋಹನ್ ಸಿಂಗ್ ನಿಧನರಾದ ಹಿನ್ನೆಲೆಯಲ್ಲಿ ಶುಕ್ರವಾರ ಬೆಳಗ್ಗೆ 10:30 ಗಂಟೆಗೆ ಪ್ರಧಾನಿ ನರೇಂದ್ರ ಮೋದಿಯವರು ತುರ್ತು ಸಂಪುಟ ಸಭೆಯನ್ನು ಕರೆದಿದ್ದಾರೆ. ದೇಶದಾದ್ಯಂತ ಏಳು ದಿನಗಳ ಕಾಲ ಶೋಕಾಚರಣೆಯನ್ನು ಈಗಾಗಲೇ ಘೋಷಿಸಲಾಗಿದೆ.

ಸಾಧಕರಿಗೆ ಸನ್ಮಾನ...



ಮೈಸೂರಿನ ಸರಸ್ವತಿಪುರಂನ ನಾಮಧಾರಿಗೌಡ ಬಾಲಕರ ವಿದ್ಯಾರ್ಥಿನಿಲಯದಲ್ಲಿ ನಡೆದ ನಾಮಧಾರಿಗೌಡ ಸಂಘದ 2023–2024ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಯೋಗ ಶಿಕ್ಷಕ ಜ್ಞಾನಾನಂದ, ಸಹಾಯಕ ಪ್ರಾಧ್ಯಾಪಕ ಡಾ.ಪವನ್ ಕುಮಾರ್, ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಪತ್ರಕರ್ತ ಎಂ.ಸುಬ್ರಹ್ಮಣ್ಯ, ಪಿಎಚ್.ಡಿ ಪದವೀಧರರಾದ ಡಾ.ಅಕ್ಷತಾ, ಡಾ.ಲಕ್ಷ್ಮಿ ಕಾಂತ್, ಡಾ.ಮೋಹನ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಎಂ.ಎನ್.ಸೋಮಶೇಖರ್, ಸಿ.ಜಿ. ನಾಗರಾಜು, ಅಶೋಕ್‌ಕುಮಾರ್, ಭೀಮರಾಜ್, ಬಿ.ಸಿ.ಬಸಪ್ಪ ಇತರರಿದ್ದರು.

ಕಲಬುರ್ಗಿ ಬಳಿ ಅಪಘಾತ; ಮೈಸೂರು ಮಹಿಳೆ ಸಾವು



ವಿನುತಾ ರವಿ ಕಶ್ಯಪ್


ಮೈಸೂರು, ಡಿ.26 (ಆರ್‌ಕೆ)– ಕಲಬುರ್ಗಿ ಬಳಿ ಬುಧವಾರ ಮಧ್ಯಾಹ್ನ ಕಬ್ಬು ತುಂಬಿದ ಲಾರಿ, ಟೆಂಪೋ ಟ್ರಾವೆಲರ್ ಮತ್ತು ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಮೈಸೂರು ಮಹಿಳೆ ಸೇರಿ ಮೂವರು ಸಾವನ್ನಪ್ಪಿದ್ದಾರೆ.

ಮೂಲತಃ ಮೈಸೂರಿನವರಾದ ಯಾದವಗಿರಿ ನಿವಾಸಿ ಸಿ.ರವಿ ಕಶ್ಯಪ್ ಅವರ ಪತ್ನಿ ವಿನುತಾ ರವಿ ಕಶ್ಯಪ್ (54), ಕಲಬುರ್ಗಿಯ ಅನೂಪ್ ಮಹದೇವ (29) ಮತ್ತು ಬೈಕ್ ಸವಾರರಾದ ಗೊಬ್ಬೂರು (ಬಿ) ಗ್ರಾಮದ ನಿವಾಸಿ ಬಸವರಾಜ್ (33) ದುರ್ಮರಣಕ್ಕೀಡಾದವರು.

ಕಲಬುರ್ಗಿ–ಅಫಜಲ್‌ಪುರ ರಾಷ್ಟ್ರೀಯ ಹೆದ್ದಾರಿ (150 ಇ)ಯ ಗೊಬ್ಬೂರು (ಬಿ) ಗ್ರಾಮದ ಬಳಿ ಮಧ್ಯಾಹ್ನ 3.30 ಗಂಟೆ ವೇಳೆಗೆ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ ಗಾಯಗೊಂಡಿರುವ ಐವರನ್ನು ಕಲಬುರ್ಗಿಯ ಯುನೈಟೆಡ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಕಲಬುರ್ಗಿಯಿಂದ ಸುಮಾರು 41 ಕಿ.ಮೀ. ದೂರದಲ್ಲಿರುವ ಗಣಗಪುರದ ಶ್ರೀ ದತ್ತಾತ್ರೇಯ ಸ್ವಾಮಿ ದೇವಸ್ಥಾನದಿಂದ ವಿನುತ ಮತ್ತು ಸಂಬಂಧಿಕರು ಟೆಂಪೋ ಟ್ರಾವೆಲರ್‌ನಲ್ಲಿ ಹಿಂತಿರುಗುತ್ತಿದ್ದಾಗ ಅಪಘಾತ ಸಂಭವಿಸಿದ್ದು, ವಿಷಯ ತಿಳಿಯುತ್ತಿದ್ದಂತೆಯೇ ಗೊಬ್ಬೂರು ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕಲಬುರ್ಗಿ ಸಾರ್ವಜನಿಕ ಆಸ್ಪತ್ರೆ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ಬಳಿಕ ವಿನುತಾ ಅವರ ದೇಹವನ್ನು ಪೊಲೀಸರು ವಾರಸುದಾರರಿಗೆ ಒಪ್ಪಿಸಿದರು. ಇಂದು ರಾತ್ರಿ ವೇಳೆಗೆ ಪಾರ್ಥಿವ ಶರೀರವನ್ನು ಮೈಸೂರಿಗೆ ತರಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.12.2024 ಶುಕ್ರವಾರ, ಮಳೆ ನಕ್ಷತ್ರ: ಮೂಲ, 16.12.2024 ರಿಂದ 28.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಧನುರ್ಮಾಸ, ಕೃಷ್ಣ ಪಕ್ಷ,
ತಿಥಿ: ದ್ವಾದಶಿ, ನಕ್ಷತ್ರ: ವಿಶಾಖ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹತೋಬಾರ ಶ್ರೀ ಧರ್ಮ ಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ನಿರಂತರ ಫೌಂಡೇಷನ್ :** ನಿರಂತರ ರಂಗ ಉತ್ಸವ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಸಂಜೆ 7ಕ್ಕೆ ಆಳ್ವಾಸ್ ರಂಗ ಅಧ್ಯಯನ ಕೇಂದ್ರ ಮೂಡುಬಿದಿರೆ ತಂಡದಿಂದ ಚಾರುವಸಂತ ನಾಟಕ ಪ್ರದರ್ಶನ, ರಚನೆ : ಡಾ. ಹಂಪನಾ, ನಿರ್ದೇಶನ : ಡಾ. ಜೀವನ್‌ರಾಂ ಸುಳ್ಯ, ಸ್ಥಳ: ಕಿರುರಂಗ ಮಂದಿರ, ರಂಗಾಯಣ.

■ **ಮೈಸೂರು ಅರಮನೆ ಮಂಡಳಿ:** ಬೆಳಗ್ಗೆ 10 ರಿಂದ ಅರಮನೆ ಫಲಪುಷ್ಪ ಪ್ರದರ್ಶನ–2024, ಸಂಜೆ 7 ರಿಂದ ಅರಮನೆ ವಿದ್ಯುತ್ ದೀಪಾಲಂಕಾರ, ಸ್ಥಳ: ಮೈಸೂರು ಅರಮನೆ ಆವರಣ.

■ **ಸುಪ್ರಭ ನಾಗೇಶ್‌ರಾವ್ ಸೇವಾ ಪ್ರತಿಷ್ಠಾನ :** 5ನೇ ವರ್ಷದ ಪ್ರಸ್ತುತಿ ವಿಶ್ವ ಶಾಂತಿಗಾಗಿ ವಿಷ್ಣು ಸಹಸ್ರನಾಮ ಪಾರಾಯಣ, ಸ್ಥಳ: #622, 2ನೇ ಮೇನ್, 2ನೇ ಕ್ರಾಸ್, ಶಾರದಾದೇವಿನಗರ, ಬೆಳಗ್ಗೆ 5 ರಿಂದ ರಾತ್ರಿ 10 ರವರೆಗೆ.

■ **ಮೈಸೂರು ವಿಶ್ವವಿದ್ಯಾನಿಲಯ, ಗಾಂಧಿ ಅಧ್ಯಯನ ಕೇಂದ್ರ :** ಮಹಾತ್ಮ ಗಾಂಧೀಜಿ ಅಧ್ಯಕ್ಷತೆಯ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ದಿನಾಚರಣೆ, ವಿಶೇಷ ಉಪನ್ಯಾಸ, ಬೆಳಗಾವಿ ಅಧಿವೇಶನದಲ್ಲಿ ಗಾಂಧೀಜಿ ಸಂದೇಶ : ಚಾರಿತ್ರಿಕ ಮಹತ್ವ, ಉದ್ಘಾಟನೆ : ಸಾಮಾಜಿಕ ಕಾರ್ಯಕರ್ತ ಸಂತೋಷ್ ಕೌಲಗಿ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಸ್ಥಳ: ಗಾಂಧಿ ಭವನ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಕನ್ನಡ ಚಳವಳಿ ಕೇಂದ್ರ ಸಮಿತಿ :** ಸುವರ್ಣ ಕರ್ನಾಟಕ ರಾಜ್ಯೋತ್ಸವ ಹಾಗೂ ಅಭಿನಂದನಾ ಸಮಾರಂಭ, ಉದ್ಘಾಟನೆ : ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಅಧ್ಯಕ್ಷತೆ : ಸಪ್ತ ಮಹಾಕಾವ್ಯಗಳ ಕರ್ತೃ ಡಾ. ಲತಾರಾಜಶೇಖರ್, ಅಭಿನಂದಿಸುವವರು : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಮಧ್ಯಾಹ್ನ 12ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ (ಬೆಂಗಳೂರು), ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ :** ಬೆಂಗಳೂರು ಮಹಾರಾಣಿ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೆ.ಎಸ್. ಶ್ರೀಧರನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಸನಾತನ ಸಭಾ, ಜಯನಗರ, ಸಂಜೆ 6.15ರಿಂದ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕಿ, ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ವಿದ್ವನ್ಮಣಿ, ದರ್ಶನ ವಾರಿಧಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ : ಡಾ. ಕಲೀಂವುಲ್ಲಾ, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಮತ್ತು ಸಂಜೆ 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ: ಡಾ.ಹೆಚ್.ವಿಶ್ವನಾಥ್, ಕುಲಸಚಿವರು, ಪರೀಕ್ಷಾ ವಿಭಾಗ ಪ್ರಾಯೋಜಕರು: ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯ, ಮೈಸೂರು. ಪ್ರಸ್ತುತಿ: ಎನ್. ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 KABHI -ಕರ್ನಾಟಕ–ಮೆದುಳು ಆರೋಗ್ಯ ಕುರಿತ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ನಿಮ್ಹಾನ್ಸ್ ಸಂಸ್ಥೆ, ಬೆಂಗಳೂರು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ 'ಲೇಪನ ಚಿಕಿತ್ಸೆ' ಕುರಿತು ಡಾ. ಸದ್ಗುಣ. ಡಿ. ಎನ್ ಅವರೊಂದಿಗೆ ಮಾತುಕತೆ ನಂತರ 'ಗ್ಯಾಸ್ ಗೀಜರ್ ಸಿಂಡ್ರೋಮ್' ಕುರಿತು ಡಾ. ವೇಣುಗೋಪಾಲಕೃಷ್ಣ. ಕೆ.ಎಸ್ ಅವರೊಂದಿಗೆ ಮಾತುಕತೆ. ನಂತರ 'ಚಳಿಗಾಲದಲ್ಲಿ ಕಂಡುಬರುವ ಸಾಮಾನ್ಯ ಆರೋಗ್ಯ ಸಮಸ್ಯೆಗಳು' ಕುರಿತು ಡಾ.ಕೆ. ನಾಗೇಂದ್ರ ಪ್ರಸಾದ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.40 ಗಾಂಧಿ ಸ್ಮೃತಿ, 10.00ಕರ್ನಾಟಕ ಶಾಸ್ತ್ರೀಯ ಸಂಗೀತ : ಜಿ.ಶ್ರೀಕಾಂತ್ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸಂಗೀತ ಸಂಭ್ರಮ ನಾದಲಯ ಸಂಗಮ', ಪ್ರಸ್ತುತಿ :ಹೆಚ್. ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ: 12.35 ದೇವರನಾಮ, 12.45 ಕಾದಂಬರಿ ವಿಹಾರ–ಎಂ.ಆರ್. ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು' ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ– ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಚಿಟ್ಟಿಬಾಬು–ವೀಣಾ ವಾದನ, 4.00 ಮಹಿಳಾರಂಗ–ಜೀವನ್ಮುಖಿ–ಕ್ಲೌಡ್ ಕಿಚನ್ ಕುರಿತು ಮಾತುಕತೆ, ಪ್ರಸ್ತುತಿ: ಕೀರ್ತನಾ, 4.30 ವೃತ್ತಿ ಮಾರ್ಗದರ್ಶನ 'ಸಮಾಜ ಶಾಸ್ತ್ರ ಅಂದರೆ ಸೋಷಿಯಾಲಜಿ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸಮಾಜ ಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ. ಸಂತೋಷ್ ನಾಯಕ್.ಆರ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 6.50 ಕೃಷಿರಂಗ: ಪ್ರಾಯೋಜಿತ ನೇರ ಫೋನ್ ಇನ್ ಕಾರ್ಯಕ್ರಮ, ಪ್ರಾಯೋಜಕರು : ಕೃಷಿ ಇಲಾಖೆ, ಕರ್ನಾಟಕ ಸರ್ಕಾರ, 7.20 ಕೃಷಿ ಹಾಡುಗಳು, 7.45 ಕನ್ನಡದಲ್ಲಿ ಭಾಷಣ, 8.00 ಸಂಧ್ಯಾರಾಗ–ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲೂಕು ಕೊಡಗನಪುರದ ರಂಗ ಕಲಾವಿದರಾದ ಕೆ.ಎಸ್. ಮಹಾದೇವಪ್ಪ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಡಾ. ಮೈಸೂರು ಉಮೇಶ್, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಹೆಚ್.ಕೆ. ನಾರಾಯಣ – ಹಾಡುಗಾರಿಕೆ, 10.00 ತತ್ವ ಸಂಚಾರ : ಜನಪದ ಗಾಯಕರ ತತ್ವಗಾಯನ, ಪ್ರಸ್ತುತಿ : ಡಾ. ಮೈಸೂರು ಉಮೇಶ್, 10.30 ಸವಿನೆನಪು

■ **ಭಾರತೀಯ ನೃತ್ಯಕಲಾ ಪರಿಷತ್ :** ನಾಟ್ಯಾಚಾರ್ಯ ಎಂ. ವಿಷ್ಣುದಾಸ್ ಸಂಸ್ಮರಣಾ 32ನೇ ನೃತ್ಯೋತ್ಸವ, ಭರತನಾಟ್ಯ ಕಾರ್ಯಕ್ರಮ, 5.40 ರಿಂದ ಚಾಮರಾಜನಗರ ನೂಪುರು ನೃತ್ಯಾಂಜಲಿ ಸ್ಕೂಲ್ ಆಫ್ ಡಾನ್ಸ್‌ನ ವಿದುಷಿ ಉಷಾ ವೇಣುಗೋಪಾಲ್‌ರವರ ಶಿಷ್ಯ ವೃಂದದವರಿಂದ, ಸಂಜೆ 6 ರಿಂದ ಮನೋಲಯ ನೃತ್ಯಾಲಯದ ವಿದುಷಿ ಚಂದ್ರಿಕ ಆಕಾಶ್‌ರವರ ಶಿಷ್ಯ ವೃಂದದವರಿಂದ, ಸಂಜೆ 6.20 ರಿಂದ ಚನ್ನರಾಯಪಟ್ಟಣ ನೃತ್ಯ ವಿಹಾರ್ ಸ್ಕೂಲ್ ಆಫ್ ಆರ್ಟ್ಸ್‌ನ ವಿದುಷಿ ಶುಭ್ರತಾ ಪಿ. ರವರ ಶಿಷ್ಯವೃಂದದವರಿಂದ, ಸಂಜೆ 6.40 ರಿಂದ ವಿದ್ವಾನ್ ಯೋಗೇಶ್ ಕುಮಾರ್ ಮತ್ತು ವಿದುಷಿ ಸ್ನೇಹ ನಾರಾಯಣ್ ಅವರಿಂದ, ಸಂಜೆ 8 ರಿಂದ ಭರತನಾಟ್ಯ ಪ್ರದರ್ಶನ, ವಿದುಷಿ ಶ್ರೀಮತಿ ಲಕ್ಷ್ಮಿ ಎನ್.ಎಸ್. ಶಿಷ್ಯ ವೃಂದದವರಿಂದ, ಸಂಜೆ 7.30 ರಿಂದ ಸಭಾ ಕಾರ್ಯಕ್ರಮ, ಅಧ್ಯಕ್ಷತೆ : ಭಾರತೀಯ ನೃತ್ಯಕಲಾ ಪರಿಷತ್ ಅಧ್ಯಕ್ಷೆ ವಿದುಷಿ ವೇಣುಗೋಪಾಲ್, ಮುಖ್ಯ ಅತಿಥಿಗಳು : ಭರತಾಂಜಲಿ ಸ್ಕೂಲ್ ಆಫ್ ಡಾನ್ಸ್ ಅಂಡ್ ಯೋಗ ಟ್ರಸ್ಟ್ ನಿರ್ದೇಶಕರಾದ ವಿದುಷಿ ಡಾ. ಶೀಲಾ ಶ್ರೀಧರ್, ಸನ್ಮಾನಿತರು : ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ವಿದುಷಿ ಲಲಿತಾ ರಾವ್ ಕೋರೆ, ವಿದುಷಿ ಡಾ. ತುಳಸಿ ರಾಮಚಂದ್ರ, ಸ್ಥಳ: ಗಾನಭಾರತಿ, ವೀಣೆ ಶೇಷಣ್ಣ ಭವನ.

ಮೈಸೂರು ಮಿತ್ರ ಶುಕ್ರವಾರ 27 ಡಿಸೆಂಬರ್ 2024



ಜಲಜೀವನ್ ಯೋಜನೆ ಅನುದಾನ ದುರುಪಯೋಗ

● ತಾಪಂ ಕೆಡಿಪಿ ಸಭೆಯಲ್ಲಿ ಆರೋಪ ● 10 ದಿನದೊಳಗೆ ವರದಿ ನೀಡುವಂತೆ ಶಾಸಕ ಪೊನ್ನಣ್ಣ ಸೂಚನೆ



ಪೊನ್ನಂಪೇಟೆ ಸಾಮರ್ಥ್ಯ ಸೌಧದಲ್ಲಿ ಶಾಸಕ ಎ.ಎಸ್. ಪೊನ್ನಣ್ಣ ಅಧ್ಯಕ್ಷತೆಯಲ್ಲಿ ಪೊನ್ನಂಪೇಟೆ ಮತ್ತು ವಿರಾಜಪೇಟೆ ತಾಲೂಕು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಗೋಣಿಕೊಪ್ಪ, ಡಿ.26–ಜಲಜೀವನ್ ಮಿಷನ್ ಯೋಜನೆ ಅನುದಾನ ದುರುಪಯೋಗವಾಗುತ್ತಿದೆಯೇ ಹೊರತು, ಮನೆ ಮನೆಗಳಿಗೆ ಗಂಗೆ ಹರಿಯುತ್ತಿಲ್ಲ ಎಂಬ ಆರೋಪಗಳು ತಾಲೂಕು ಪಂಚಾಯಿತಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರತಿದನಿಸಿದವು.

ಪೊನ್ನಂಪೇಟೆ ಸಾಮರ್ಥ್ಯ ಸೌಧದಲ್ಲಿ ಗುರುವಾರ ಶಾಸಕ ಎ.ಎಸ್.ಪೊನ್ನಣ್ಣ ಅಧ್ಯಕ್ಷತೆಯಲ್ಲಿ ನಡೆದ ಪೊನ್ನಂಪೇಟೆ ಮತ್ತು ವಿರಾಜಪೇಟೆ ತಾಲೂಕು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ 'ಹರ್ ಘರ್ ಜಲ್' ವಿಚಾರವೇ ತೀವ್ರ ಚರ್ಚೆಗೆ ಒಳಪಟ್ಟಿತು. ಒಂದು, ಎರಡು ಹೀಗೆ ನಾಲ್ಕು ಹಂತಗಳಲ್ಲಿ ಕಾಮಗಾರಿ ಪ್ರಾರಂಭಗೊಂಡರೂ ಜೆಜೆಎಂನಲ್ಲಿ ಹಲವಾರು ಸಮಸ್ಯೆಗಳು ಕಾಡುತ್ತಿವೆ. ಯೋಜನೆ ವ್ಯವಸ್ಥಿತವಾಗಿ ಪ್ರತಿ ಮನೆಗೆ ತಲುಪುತ್ತಿಲ್ಲ ಎಂದು ದೂರುಗಳು ಹೆಚ್ಚಾಗಿ ಕೇಳಿ ಬಂದವು.

ಟ್ಯಾಂಕ್ ನಿರ್ಮಾಣ ಸ್ಥಳದಲ್ಲಿ ನೀರಿನ ಸಮಸ್ಯೆ ಕಾಡುತ್ತಿದೆ. ಪೈಪ್‌ಲೈನ್‌ಗಳು ಸರಿಯಾದ ಕ್ರಮದಲ್ಲಿ ಅಳವಡಿಸಿಲ್ಲ. ಜಲಜೀವನ್ ಯೋಜನೆಯಲ್ಲಿ ಬಹುದೊಡ್ಡ ಹಗರಣವೇ ನಡೆದಿದ್ದು, ಈ ಸತ್ಯ ಹೊರಬರಲು ಸಮಿತಿ ರಚಿಸಿ ಗುತ್ತಿಗೆದಾರರು ಹಾಗೂ ಅಧಿಕಾರಿಗಳನ್ನು ತನಿಖೆಗೆ ಒಳಪಡಿಸಬೇಕು ಎಂದು ಸಭೆಯಲ್ಲಿ ತಾಪಂ ಮಾಜಿ ಸದಸ್ಯ ಹೆಚ್.ಇ. ಗಣೇಶ್ ಒತ್ತಾಯಿಸಿದರು.

ನಂತರ ಮಾತನಾಡಿದ ಶಾಸಕ ಎ.ಎಸ್.ಪೊನ್ನಣ್ಣ, ಜೆಜೆಎಂ ಸಮಸ್ಯೆಗಳಿಗೆ ಸಂಬಂಧಿಸಿದಂತೆ 10 ದಿನದೊಳಗೆ ಸೂಕ್ತ ವರದಿ ನೀಡಬೇಕು. ಪ್ರತಿ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಆಯಾ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನಗೊಂಡಿರುವ ಯೋಜನೆಯ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಯೋಜನೆಯ ಸಮಸ್ಯೆ ಪರಿಹಾರಕ್ಕೆ ಪ್ರತ್ಯೇಕವಾಗಿ ಜ.20ರೊಳಗೆ ಸಭೆ ನಡೆಸುವುದಾಗಿ ಭರವಸೆ ನೀಡಿದರು. ಪರಿಶಿಷ್ಟ ವರ್ಗ ಮತ್ತು ಪಂಗಡದವರ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸಲು ಅಧಿಕಾರಿಗಳು ಮುಂದಾಗಬೇಕು. ಸಮುದಾಯ ಹಕ್ಕುಗಳನ್ನು ನೀಡಲು ಆಯಾ ಇಲಾಖೆಗಳು ತೊಡಕು ಉಂಟುಮಾಡಬಾರದು ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು.

ಪೊನ್ನಂಪೇಟೆ ಮತ್ತು ವಿರಾಜಪೇಟೆ ತಾಲೂಕಿನ ತಟ್ಟಳ್ಳಿ, ದಿಡ್ಡಳ್ಳಿ, ಕೊಲ್ಲಿಹಾಡಿ, ಬೊಮ್ಮಾಡು, ನಾಗರಹೊಳೆ, ಬಾಳೆಕೋವು, ಗೋಣಿಗದ್ದೆ, ಬೊಂಬುಕಾಡು, ಜಂಗಲ್ ಹಾಡಿ, ಚೀನಿಹಡ್ಲಿ, ಐಯಿರಸುಳಿ ಈ ಹಾಡಿಗಳಲ್ಲಿ ಕುಡಿಯುವ ನೀರು, ವಿದ್ಯುತ್ ಸಂಪರ್ಕ, ರಸ್ತೆ ಅಭಿವೃದ್ಧಿ ಪಡಿಸುವುದು ಮತ್ತಿತರ ಮೂಲ ಸೌಲಭ್ಯಕ್ಕೆ ಯಾವುದೇ ಅಡ್ಡಿ ಮಾಡದಂತೆ ಅರಣ್ಯ ಅಧಿಕಾರಿಗಳಿಗೆ ಶಾಸಕ ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿಧಾನಪರಿಷತ್ ಸದಸ್ಯ ಎಂ.ಪಿ.ಸುಜಾ ಕುಶಾಲಪ್ಪ ಮಾತನಾಡಿ, ಕಂದಾಯ ಇಲಾಖೆಯ ಪೌತಿ ಖಾತೆ ಸಮಸ್ಯೆಯನ್ನು ಬಗೆಹರಿಸಲು ಕ್ರಮ ತೆಗೆದುಕೊಳ್ಳಬೇಕು. ಕಂದಾಯ ಇಲಾಖೆ ಸುತ್ತ ಸುತ್ತುತ್ತಿರುವ ಮಧ್ಯವರ್ತಿಗಳ ಹಾವಳಿಗಳನ್ನು ತಡೆಹಿಡಿಯಲು ಬದಲಾವಣೆ ತರಬೇಕು ಎಂದು ವಿರಾಜಪೇಟೆ ತಹಸೀಲ್ದಾರ್ ರಾಮಚಂದ್ರ ಹಾಗೂ ಪೊನ್ನಂಪೇಟೆ ತಹಸೀಲ್ದಾರ್ ಮೋಹನ್‌ಕುಮಾರ್ ಅವರಿಗೆ ಸೂಚಿಸಿದರು.

ಸಭೆಯಲ್ಲಿ ಐಟಿಡಿಪಿ ಇಲಾಖೆ ತಾಲೂಕು ಅಧಿಕಾರಿ ನವೀನ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ, ಪೊನ್ನಂಪೇಟೆ ತಾಲೂಕು ಅಧ್ಯಕ್ಷ ಕಾಳಿಮಾಡ ಪ್ರಶಾಂತ್, ವಿರಾಜಪೇಟೆ ತಾಲೂಕು ಅಧ್ಯಕ್ಷ ಜಾನ್ಸನ್, ಜಿಪಂ ಉಪಕಾರ್ಯದರ್ಶಿ ಧನರಾಜ್, ತಾಪಂ ಇಓ ಕೋಣಿಯಂಡ ಅಪ್ಪಣ್ಣ, ಕೊಳ್ಳಿಮಾಡ ಅಜಿತ್ ಅಯ್ಯಪ್ಪ, ವಿ.ಟಿ.ವಾಸು, ಎಂ.ವಿ.ಕಿರಣ್, ಟಿ.ಕೆ. ಅಬ್ದುಲ್ ಸಮ್ಮದ್, ಮತ್ರಂಡ ರೇಖಾ ಪೊನ್ನಪ್ಪ, ಮಾಳೇಟಿರ ಪ್ರಶಾಂತ್ ಉತ್ತಪ್ಪ ಪರ್ವಿನ್ ಲೋಬೊ, ಕೊಳ್ಳುಮಂಡ ರಫೀಕ್, ಹೆಚ್.ಇ.ಗಣೇಶ್, ಟಿ.ಎನ್.ಶಶಿಧರನ್, ತೋರೆರ ಜಿ.ಪೊನ್ನಕ್ಕಿ ಜಾನ್ಸನ್, ತಾಲೂಕು ಮಟ್ಟದ ಅಧಿಕಾರಿಗಳು, ವಿವಿಧ ಗ್ರಾಪಂ ಪಿಡಿಓಗಳು ಇದ್ದರು.

ವಿ.ಪೇಟೆಯಲ್ಲಿ ಕಾವೇರಿ ಕೊಡವ ಕೇರಿ ವಾರ್ಷಿಕ ಪುತ್ತರಿ



ಪುತ್ತರಿ ಊರೋರ್ಮೆ ಕಾರ್ಯಕ್ರಮದಲ್ಲಿ ಹಿರಿಯ ಲೇಖಕಿ ಕರೋಟಿರ ಶಶಿಸುಬ್ರಮಣಿ ಮಾತನಾಡಿದರು.

ವಿರಾಜಪೇಟೆ: ಇಲ್ಲಿನ ಜನರಲ್ ತಿಮ್ಮಯ್ಯ ಬಡಾವಣೆಯ ಕಾವೇರಿ ಕೊಡವ ಕೇರಿ ವಾರ್ಷಿಕ ಪುತ್ತರಿ ಊರೋರ್ಮೆ ಕಾರ್ಯಕ್ರಮ ಕೊಡವ ಸಮಾಜದ ಸಭಾಂಗಣದಲ್ಲಿ ನಡೆಯಿತು.

ಹಿರಿಯ ಲೇಖಕಿ ಹಾಗೂ ಜ್ಯೋತಿಷಿ ಕರೋಟಿರ ಶಶಿಸುಬ್ರಮಣಿ ಮಾತನಾಡಿ, ಕೊಡವ ಸಂಸ್ಕೃತಿ ಆಚಾರ-ವಿಚಾರ, ಸಂಪ್ರದಾಯಗಳ ಪಾಲನೆ ಅತ್ಯಂತ ಮಹತ್ವದ್ದಾಗಿದ್ದು. ಈ ಕಾರಣದಿಂದ ಕೊಡವ ಭಾಷೆ–ಸಂಸ್ಕೃತಿ ಬಗ್ಗೆ ಅಭಿಮಾನ ಬೆಳೆಸಬೇಕು. ವಿಶ್ವದಲ್ಲೇ ಪ್ರಶಂಸನೀಯ ವಿಶಿಷ್ಟ ಸಂಸ್ಕೃತಿಯನ್ನು ಕೊಡವರೇ ಮರೆತರೆ ಅದು ಭವಿಷ್ಯದ ದೃಷ್ಟಿಯಿಂದ ದುರದೃಷ್ಟಕರ. ಈ ಸನ್ನಿವೇಶದಲ್ಲಿ ಯುವಜನತೆ ಸಂಸ್ಕೃತಿ ಮತ್ತು ಭಾಷೆ ಬೆಳೆಸುವಿಕೆಗೆ ಮುಂದಾಗುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದರು.

ಕೇರಿ ಅಧ್ಯಕ್ಷ ಮೇರಿಯಂಡ ಅರಸು ಅಚ್ಚಮ್ಮ ಮಾತನಾಡಿ, ಕೊಡವ ಸಂಸ್ಕೃತಿ, ಭಾಷೆ ಇಡೀ ವಿಶ್ವದಲ್ಲೇ ವೈವಿಧ್ಯತೆ ಹೊಂದಿದೆ. ಆದರೆ, ಅದನ್ನು ಬೆಳೆಸುವಲ್ಲಿ ಕೊಡವರೇ ಹಿಂದೇಟು ಹಾಕುತ್ತಿರುವುದು ವಿಷಾದಕರ. ಪುತ್ತರಿ ಹಬ್ಬ ಸೌಹಾರ್ದತೆ ಮತ್ತು ಸಹಬಾಳ್ವೆಯ ಸಂಕೇತವಾಗಿದೆ ಎಂದು ತಿಳಿಸಿದರು.

ಈ ಸಂದರ್ಭ ನಿವೃತ್ತ ಸೈನಿಕ ಮೇರಿಯಂಡ ಅಪ್ಪಾಜಿ, ನೌಕಾ ಪಡೆ ನಿವೃತ್ತ ಅಧಿಕಾರಿ ಬಿದ್ದಂಡ ಗಣಪತಿ, ನಿವೃತ್ತ ಪೊಲೀಸ್ ಅಧಿಕಾರಿಗಳಾದ ನಾಯಕಂಡ ಉತ್ತಯ್ಯ ಮತ್ತು ಕೋದೇಂಗಡ ಮಣಿ ಬೋಪಯ್ಯರನ್ನು ಸನ್ಮಾನಿಸಲಾಯಿತು. ಕೇರಿ ಪದಾಧಿಕಾರಿಗಳಾದ ಅಂಜಪರವಂಡ ಅನಿಲ್ ಮಂದಣ್ಣ, ಚೊಟ್ಟೆರ ಬೆಳ್ಳಿಯಪ್ಪ, ಚೊಟ್ಟೆರ ರಮೇಶ್, ಬಾಳೆಕುಟ್ಟಿರ ರಾಜಾ ಗಣಪತಿ, ಮೇಕತಂಡ ಚಂಗಪ್ಪ ಬಟ್ಟಿಯಂಡ ವಿಠಲ, ಬೊಪ್ಪಂಡ ತ್ರಿಶು ಗಣಪತಿ, ಬೊಳ್ಳೆಪಂಡ ಆಶಾ ಸುರೇಶ್, ಚಿಲ್ಲವಂಡ ರೇಖಾ ಹರೀಶ್, ತಾತಂಡ ಮಿನ್ನು, ಬಿದ್ದಂಡ ರಾಧಿಕಾ, ಚೊಟ್ಟೇರ ರವಿ ಉಪಸ್ಥಿತರಿದ್ದರು.

ಚಾ.ನಗರ ಗ್ರೇಡ್–1 ನಗರಸಭೆಗೆ ಸರ್ಕಾರಕ್ಕೆ ಪ್ರಸ್ತಾವನೆ

● ಅಧ್ಯಕ್ಷ ಸುರೇಶ್ ಮಾಹಿತಿ ● ಬಜೆಟ್ ಪೂರ್ವಭಾವಿ ಸಭೆಯಲ್ಲಿ ಸಾರ್ವಜನಿಕರ ಸಲಹೆ ಸ್ವೀಕಾರ



ಚಾಮರಾಜನಗರದ ಸಿಡಿಎಸ್ ಭವನದಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ನಗರಸಭೆ ಅಧ್ಯಕ್ಷ ಸುರೇಶ್ ಮಾತನಾಡಿದರು.

ಚಾಮರಾಜನಗರ, ಡಿ.26–ನಗರಸಭೆ ವ್ಯಾಪ್ತಿಯ 31 ವಾರ್ಡ್‌ಗಳಲ್ಲಿ 90 ಸಾವಿರ ಜನಸಂಖ್ಯೆ ಮೀರಿದ್ದು, ನಗರಸಭೆ ಸುತ್ತಮುತ್ತಲಿರುವ ಗ್ರಾಮಗಳನ್ನು ಸೇರ್ಪಡೆ ಮಾಡಿಕೊಂಡು ಗ್ರೇಡ್–1 ನಗರಸಭೆಯನ್ನಾಗಿಸಿ, ಅಭಿವೃದ್ಧಿ ವೇಗ ಹೆಚ್ಚಿಸುವ ಸಲುವಾಗಿ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದಾಗಿ ನಗರಸಭೆ ಅಧ್ಯಕ್ಷ ಸುರೇಶ್ ತಿಳಿಸಿದರು.

ನಗರದ ಸಿಡಿಎಸ್ ಭವನದಲ್ಲಿ ನಡೆದ 2024–25ನೇ ಸಾಲಿನ ಪರಿಷ್ಕೃತ ಹಾಗೂ 2025–26ನೇ ಸಾಲಿನ ಅಯವ್ಯಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನಗರಸಭೆಗೆ ಈಗ ಸರ್ಕಾರದಿಂದ ಬರುತ್ತಿರುವ ಅನುದಾನ ಬಹಳ ಕಡಿಮೆ ಇದೆ. ನಗರದ ಸಮಗ್ರ ಅಭಿವೃದ್ಧಿ ಹಾಗೂ ಏರುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಮೂಲ ಸೌಲಭ್ಯ ಕಲ್ಪಿಸಲು ಕಷ್ಟಸಾಧ್ಯ. ಅಲ್ಲದೇ, ಜಿಲ್ಲಾ ಕೇಂದ್ರವಾದ ಬಳಿಕ ನಗರಸಭೆ ವ್ಯಾಪ್ತಿಗೆ ಬರುವಂತೆ ಮಲ್ಲಯ್ಯನಪುರ, ಉತ್ತುವಳ್ಳಿ, ಯಡಪುರ ಹಾಗೂ ವೈದ್ಯಕೀಯ ಕಾಲೇಜು ಸೇರಿದಂತೆ ಅನೇಕ ಗ್ರಾಮಗಳನ್ನು ಒಳಪಡಿಸಿಕೊಂಡು ಗ್ರೇಡ್–1 ನಗರಸಭೆ ಮಾಡಲು ಎಲ್ಲಾ ಪ್ರಯತ್ನವನ್ನು ನಗರಸಭೆಯಿಂದ ಕೈಗೊಳ್ಳಲಾಗಿದೆ ಎಂದರು.

ಗ್ರೇಡ್–1 ನಗರಸಭೆಯನ್ನಾಗಿಸಲು ಸುಮಾರು 1 ಲಕ್ಷಕ್ಕೂ ಅಧಿಕ ಜನಸಂಖ್ಯೆ ಇರಬೇಕು. ಕರ್ನಾಟಕ ಮುನಿಸಿಪಾಲಿಟಿ ಕಾಯ್ದೆ ಪ್ರಕಾರ ಹಿಂದಿನ ಜನಗಣತಿ ಆಧಾರದಲ್ಲಿ ಸ್ಥಳೀಯ ಆಡಳಿತ ದರ್ಜೆಯನ್ನು ನಿಗದಿಪಡಿಸಲಾಗುವುದು. ಅದಕ್ಕೆ ಸಮೀಪದ ಹಳ್ಳಿಗಳನ್ನು ನಗರಸಭೆ ವ್ಯಾಪ್ತಿಗೆ ಒಳಪಡಿಲಾಗುವುದು. ಗ್ರೇಡ್–1 ನಗರಸಭೆಯಾದರೆ ಪೌರಾಡಳಿತ ಸಚಿವಾಲಯದಿಂದ ಹೆಚ್ಚಿನ ಅನುದಾನ ಮತ್ತು ಕರ ವಸೂಲಾತಿ ಹೆಚ್ಚಳವಾಗುತ್ತದೆ. ಅಲ್ಲದೇ, ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಹೆಚ್ಚು ಬರಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ನಗರಸಭೆಯನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಜನಪರ ಬಜೆಟ್: ಬಜೆಟ್ ಪೂರ್ವಭಾವಿ ಸಭೆಯಲ್ಲಿ ಸಾರ್ವಜನಿಕರು ಉಪಯುಕ್ತ ಹಾಗೂ ಅಭಿವೃದ್ಧಿ ಪೂರಕ ಸಲಹೆ ಸೂಚನೆಗಳನ್ನು ನೀಡಿದ್ದು, ಸದ್ಯದಲ್ಲೇ ಸದಸ್ಯರ ಪೂರ್ವಭಾವಿ ಸಭೆ ನಡೆಸಲಾಗುವುದು. ಈ ಸಭೆಯ ಸಲಹೆ ಸೂಚನೆಗಳನ್ನು ಕ್ರೋಢೀಕರಿಸಿ, ಅಭಿವೃದ್ಧಿ ಹಾಗೂ ಜನಪರ ಬಜೆಟ್ ಮಂಡಿಸುವುದಾಗಿ ಸುರೇಶ್ ತಿಳಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಲಕ್ಕೂರು ಪ್ರಸಾದ್ ಮಾತನಾಡಿ, ಕಳೆದ ಬಾರಿ ಬಜೆಟ್‌ನಲ್ಲಿ ಪತ್ರಕರ್ತರಿಗೆ ವೈದ್ಯಕೀಯ ವೆಚ್ಚಕ್ಕೆ ಅನುದಾನ ಮೀಸಲಿಡಲಾಗಿತ್ತು. ಅದರಂತೆ ಈ ಬಾರಿಯೂ ಮೀಸಲಿಡಬೇಕು ಎಂದರು.

ನಗರಸಭೆ ವ್ಯಾಪ್ತಿಯ ಹಲವು ವಾರ್ಡ್‌ಗಳಲ್ಲಿ ಕಸದ ಸಮಸ್ಯೆ ಹೆಚ್ಚಾಗಿದೆ. ಆದ್ದರಿಂದ ಕಸದ ಸಮಸ್ಯೆಯನ್ನು ಹೋಗಲಾಡಿಸಿ ಸ್ವಚ್ಛತೆಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು ಎಂದು ಕೆಲ ಮಹಿಳೆಯರು ಸಲಹೆ ನೀಡಿದರು.

ಮುಖಂಡ ಬಾಲಸುಬ್ರಹ್ಮಣ್ಯಂ, ಪೌರಾಯುಕ್ತ ರಾಮದಾಸ್ ಮಾತನಾಡಿದರು. ಸಭೆಯಲ್ಲಿ ಉಪಾಧ್ಯಕ್ಷೆ ಮಮತಾ ಬಾಲಸುಬ್ರಮಣ್ಯ, ಲೆಕ್ಕ ಅಧೀಕ್ಷಕ ಜಯನಾಯಕ್, ಎಇಇಗಳಾದ ನಟರಾಜು, ರೂಪ, ಸಮುದಾಯ ಸಂಘಟನಾಧಿಕಾರಿ ವೆಂಕಟನಾಯಕ್, ಸುಷ್ಮಾ, ಪುಷ್ಪಾ ಇತರರು ಹಾಜರಿದ್ದರು.

ಜನವರಿಯಿಂದ ಹಾಲು ಉತ್ಪಾದಕರಿಗೆ 1 ರೂ. ಹೆಚ್ಚುವರಿ



ವೈ.ಸಿ.ನಾಗೇಂದ್ರ

ಚಾಮರಾಜನಗರ: ಚಾಮರಾಜನಗರ ಜಿಲ್ಲಾ ಹಾಲು ಒಕ್ಕೂಟದಿಂದ ಹಾಲು ಉತ್ಪಾದಕರಿಗೆ ಜ.1 ರಿಂದ ಲೀಟರ್‌ಗೆ ಒಂದು ರೂ. ಹೆಚ್ಚುವರಿ ನೀಡಲು ನಿರ್ದೇಶಕರ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ ಎಂದು ಚಾಮುಲ್ ಅಧ್ಯಕ್ಷ ವೈ.ಸಿ. ನಾಗೇಂದ್ರ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎರಡೂವರೆ ವರ್ಷಗಳ ಹಿಂದೆ ಚಾಮುಲ್ ಅಧ್ಯಕ್ಷನಾಗಿ ಆಯ್ಕೆಯಾದ ಬಳಿಕ ಒಕ್ಕೂಟದ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇನೆ. ಹಾಲು ಉತ್ಪಾದಕರಿಗೆ ಒಕ್ಕೂಟ ಹಾಗೂ ಸರ್ಕಾರದಿಂದ ದೊರೆಯುವ ಎಲ್ಲಾ ಸವಲತ್ತುಗಳನ್ನು ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು.

ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಉತ್ತಮ ಭಾಂದವ್ಯ ಹೊಂದಿದ್ದರು, ಕೆಲ ರೈತರ ಮುಖಂಡರು ನೀಡಿರುವ ಹೇಳಿಕೆ ಸತ್ಯಕ್ಕೆ ದೂರವಾಗಿದೆ. ಹಾಲು ಒಕ್ಕೂಟದಲ್ಲಿ ಪ್ರತಿನಿತ್ಯ ಹೆಚ್ಚಿನ ಹಾಲು ಶೇಖರಣೆಯಾಗುತ್ತಿದ್ದು, ಮಾರುಕಟ್ಟೆ ಕಡಿಮೆ ಇರುವುದರಿಂದ ಹಾಲಿನ ಮಾರಾಟ ಕಡಿಮೆಯಾಗಿದೆ ಎಂದರು.

ರಾಜ್ಯ ಮಟ್ಟದ ನೆಟ್‌ಬಾಲ್ ಪಂದ್ಯಾವಳಿಗೆ ಚಾಲನೆ...



ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಶನ್ ವತಿಯಿಂದ ನಡೆದ 19 ವರ್ಷದೊಳಗಿನ ರಾಜ್ಯ ಮಟ್ಟದ ನೆಟ್‌ಬಾಲ್ ಚಾಂಪಿಯನ್‌ಶಿಪ್ ಪಂದ್ಯಾವಳಿಗೆ ಅಸೋಸಿಯೇಷನ್ ಗೌರವಾಧ್ಯಕ್ಷೆ ನರ್ಗಿಸ್ ಭಾನು ಚಾಲನೆ ನೀಡಿದರು. ಭಾರತ ಸೇವಾದಳ ಜಿಲ್ಲಾಧ್ಯಕ್ಷ, ಬಿ.ಎಸ್.ವೆಂಕಟ ನಾಗಪ್ಪಶೆಟ್ಟಿ ಬಾಬು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸುರೇಶ್, ಗ್ರೀನ್ ಅಗ್ರಿಟೆಕ್ ಗ್ರಾಮೀಣಾಭಿವೃದ್ಧಿ ಸಂಸ್ಥೆ ನಿರ್ದೇಶಕ ಡಾ.ಕೆ.ಶ್ರೀಕಂಠಸ್ವಾಮಿ, ಅಸೋಸಿಯೇಷನ್ ಅಧ್ಯಕ್ಷ ವಿ.ಶ್ರೀನಿವಾಸಪ್ರಸಾದ್, ರಾಜ್ಯ ಪ್ರಧಾನ ಕಾರ್ಯದರ್ಶಿ ಸಿಗಿರೀಶ್, ಜಿಲ್ಲಾ ಪ್ರಧಾನಕಾರ್ಯದರ್ಶಿ ಬಿ.ಮಹದೇವಪ್ರಸಾದ್, ರಾಜ್ಯ ಉಪಾಧ್ಯಕ್ಷ ಅನಿಲ್ ಕುಮಾರ್, ಖಜಾಂಚಿ ಮಹದೇವಸ್ವಾಮಿ, ಸಂಘಟನಾ ಕಾರ್ಯದರ್ಶಿ ಮಧುಕುಮಾರ್, ಸಹಕಾರ್ಯದರ್ಶಿ ಸುರೇಶ್ ಕುಮಾರ್, ರಾಷ್ಟ್ರೀಯ ಕ್ರೀಡಾಪಟು ಸುರಭಿ, ಸ್ವಾಗತ ಟ್ರೇಡರ್‌ನ ರಮೇಶ್, ಹಿರಿಯ ಕ್ರೀಡಾಪಟು ಶ್ರೀನಿವಾಸ್ ಇದ್ದರು.

ಯಳಂದೂರಿನ ಬಳೆಪೇಟೆ ಮಹಿಳೆ ನಾಪತ್ತೆ



ಯಳಂದೂರು: ಪಟ್ಟಣದ ಬಳೆಪೇಟೆ ನಿವಾಸಿ ವೆಂಕಟಚಲ ಶೆಟ್ಟಿ ಅವರ ಮಗಳು ಹೇಮಾವತಿ (45) ಕಾಣೆಯಾಗಿದ್ದು, ಈ ಸಂಬಂಧ ಯಳಂದೂರು ಠಾಣೆಯಲ್ಲಿ ದೂರು ದಾಖಲಾಗಿದೆ. ಈಕೆ ಮಾನಸಿಕ ಖಿನ್ನತೆಗೆ ಒಳಗಾಗಿದ್ದಳು.

ಡಿ.22ರಂದು ನಾನು ಕೆಲಸ ನಿಮಿತ್ತ ಹನೂರಿಗೆ ಹೋಗಿದ್ದು, ಹಿರಿ ಮಗಳು ಶೋಭಾ ತನ್ನ ಪತ್ನಿಯೊಂದಿಗೆ ಕಬ್ಬಳ್ಳಿ ದೇವಸ್ಥಾನಕ್ಕೆ ಹೋಗಿದ್ದಳು. ಈ ವೇಳೆ ಹೇಮಾವತಿ ಮನೆಯಿಂದ ಹೊರಗಡೆ ಹೋದವಳು ಕಾಣೆಯಾಗಿರುತ್ತಾಳೆ ಎಂದು ತಂದೆ ವೆಂಕಟಚಲ ಶೆಟ್ಟಿ ದೂರಿನಲ್ಲಿ ತಿಳಿಸಿದ್ದಾರೆ. ಈಕೆ ಪತ್ತೆಯಾದಲ್ಲಿ ಯಳಂದೂರು ಠಾಣೆ ಅಥವಾ ದೂ.ಸ:08226240028ಕ್ಕೆ ತಿಳಿಸಬಹುದು.

ಕೇಂದ್ರ ಸರ್ಕಾರದ ಸ್ವ ಉದ್ಯೋಗ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ



ದಿಶಾ ಸಭೆಯಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಮನವಿ

ಮಂಡ್ಯ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿ ಯೊಬ್ಬರಿಗೂ ಸರ್ಕಾರಿ ಕೆಲಸ ಸಿಗುವುದು ಕಷ್ಟಕರ. ಆದರೆ ಪ್ರತಿಯೊಬ್ಬರಿಗೂ ಉದ್ಯೋಗ ಸಿಗಬೇಕು. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಸ್ವ ಉದ್ಯೋಗ ಯೋಜನೆಗಳಲ್ಲಿ ಹೆಚ್ಚಿನ ಆದ್ಯತೆ ನೀಡಿ ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸಿಕೊಡಿ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಗುರುವಾರ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬೀದಿ ಬದಿ ವ್ಯಾಪಾರಿಗಳಿಗೆ ಪಿ.ಎಂ. ಸ್ವನಿಧಿ ಯೋಜನೆಯಡಿ ಮೊದಲ ಬಾರಿಗೆ ರೂ 10,000 ನಂತರ 20,000 ಮೂರನೇ ಬಾರಿಗೆ 50,000ರೂ ಸಾಲ ನೀಡಬಹುದು. ಈ ಯೋಜನೆಯ ಬಗ್ಗೆ ಹೆಚ್ಚಿನ ಪ್ರಚಾರ ನೀಡಿ ಸಾರ್ವಜನಿಕರಿಗೆ ತಲುಪಿಸಿ ಎಂದರು.

ಕೇಂದ್ರ ಸರ್ಕಾರವು ಜನರಿಗೆ ದೊಡ್ಡ ಮಟ್ಟದ ನೆರವನ್ನು ನೀಡಲಿದೆ. ಕೇವಲ ಭತ್ತ ಕಬ್ಬು ಬೆಳೆಯನ್ನು ಬೆಳೆಯುವುದರಿಂದ ರೈತರು ಆರ್ಥಿಕವಾಗಿ ಸಬಲರಾಗುವುದಿಲ್ಲ. ಬೆಳೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಸಾರ್ವಜನಿಕರ ಸಹಕಾರದಿಂದ ಮಾತ್ರ ಜಿಲ್ಲೆಯಲ್ಲಿ ಅಭಿವೃದ್ಧಿ ಸಾಧ್ಯ. ಜಿಲ್ಲೆಯಲ್ಲಿ ನೈರುತ್ಯ ಮನ್ಸೂನ್‌ನಲ್ಲಿ 59 ಮನೆ ಹಾನಿಯಾಗಿದ್ದು, ಪೂರ್ಣ ಮನೆ ಹಾನಿಯಾದವರಿಗೆ 1,20,000 ರೂ ಪರಿಹಾರವನ್ನು, ಶೇ.50 ರಿಂದ 75 ಮನೆ ಹಾನಿಗೆ 50,000 ರೂ, ಶೇ. 20 ರಿಂದ 50 ಮನೆ ಹಾನಿಗೆ 30,000 ರೂ ಹಾಗೂ 15 ರಿಂದ 20 ಮನೆಹಾನಿ ಯಾದವರಿಗೆ 6500 ರೂ ಪರಿಹಾರ ವನ್ನು ನೀಡಲಾಗಿದೆ. ಬೆಳೆ ಹಾನಿಯಾದ ರೈತರಿಗೆ ಒಟ್ಟಾರೆ 5,74,334 ರೂ ಪರಿಹಾರ ನೀಡಲಾಗಿದೆ ಎಂದರು.

ಜಿಲ್ಲಾಧಿಕಾರಿ ಡಾ.ಕುಮಾರ, ಜಿಪಂ. ಸಿಇಓ ಶೇಖ್ ತನ್ವೀರ್ ಆಸೀಫ್ ಮಾತನಾಡಿದರು.

ಸಭೆಯಲ್ಲಿ ಶಾಸಕರಾದ ಹೆಚ್.ಟಿ.ಮಂಜು, ಮಾಜಿ ಸಚಿವ ಹಾಗೂ ನಾಮ ನಿರ್ದೇಶಿತ ಸದಸ್ಯ ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ನಾಮ ನಿರ್ದೇಶಿತ ಸದಸ್ಯ ಡಾ.ಕೆ.ಅನ್ನದಾನಿ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದ ಮೂರ್ತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಖೋ–ಖೋ ವಿಶ್ವಕಪ್ ಪಂದ್ಯಾವಳಿ ಭಾರತ ತಂಡಕ್ಕೆ ಪಾಂಡವಪುರ ತಾಲೂಕಿನ ಇಬ್ಬರು ವಿದ್ಯಾರ್ಥಿನಿಯರು ಆಯ್ಕೆ



ಜೈತ್ರಾ.ಬಿ



ಮೋನಿಕ.ಎಲ್

ಪಾಂಡವಪುರ: ಇದೇ ಮೊದಲ ಬಾರಿಗೆ ಜನವರಿ 13 ರಿಂದ 19 ರವರೆಗೆ ದೆಹಲಿಯಲ್ಲಿ ನಡೆಯುತ್ತಿರುವ ಖೋ–ಖೋ ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾಗವಹಿಸುವ ಭಾರತ ತಂಡಕ್ಕೆ ಪಾಂಡವಪುರ ತಾಲೂಕಿನ ಜಯಂತಿ ನಗರದ ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಇಬ್ಬರು ಬಿಪಿಇಡಿ ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ದ್ವಿತೀಯ ಬಿಪಿಇಡಿ ವಿದ್ಯಾರ್ಥಿನಿ ಜೈತ್ರಾ.ಬಿ ಹಾಗೂ ಪ್ರಥಮ ಬಿಪಿಇಡಿ ವಿದ್ಯಾರ್ಥಿನಿ ಮೋನಿಕ ಎಲ್. ಅವರು ಭಾರತ ತಂಡಕ್ಕೆ ಆಯ್ಕೆಯಾಗಿದ್ದು, ಈಗಾಗಲೇ ಭಾರತ ತಂಡದ ಕ್ಯಾಂಪ್ ಸೇರಿದ್ದಾರೆ.

ಗ್ರಾಮೀಣ ಕ್ರೀಡೆ ಪ್ರೋತ್ಸಾಹಿಸುವ ಉದ್ದೇಶದಿಂದ ಇದೇ ಮೊದಲ ಬಾರಿಗೆ ದೆಹಲಿಯಲ್ಲಿ ಚೊಚ್ಚಲ ಖೋ–ಖೋ ವಿಶ್ವಕಪ್ ಪಂದ್ಯಾವಳಿ ಆಯೋಜಿಸಲಾಗಿದೆ. ಪಂದ್ಯಾವಳಿ ಯಲ್ಲಿ ಭಾಗವಹಿಸಲು ಭಾರತ ತಂಡಕ್ಕೆ ರಾಜ್ಯ ದಿಂದ ನಾಲ್ಕು ಮಂದಿ ವಿದ್ಯಾರ್ಥಿನಿಯರು ಆಯ್ಕೆಯಾಗಿದ್ದರು, ಇದರಲ್ಲಿ ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಇಬ್ಬರು ವಿದ್ಯಾರ್ಥಿನಿಯರು ಆಯ್ಕೆಯಾಗುವ ಮೂಲಕ ಕೀರ್ತಿತಂದಿದ್ದಾರೆ. ಆಯ್ಕೆಯಾದ ಇಬ್ಬರು ವಿದ್ಯಾರ್ಥಿನಿಯರು ರೈತಾಪಿ ಕುಟುಂಬಕ್ಕೆ ಸೇರಿದ್ದಾರೆ ಎನ್ನುವುದು ಮತ್ತೊಂದು ವಿಶೇಷವಾಗಿದೆ.

ದ್ವಿತೀಯ ಬಿಪಿಇಡಿ ಓದುತ್ತಿರುವ ಜೈತ್ರಾ ಬಿ. 30ಕ್ಕೂ ಅಧಿಕ ಬಾರಿ ಕರ್ನಾಟಕದ ಖೋ–ಖೋ ತಂಡದಲ್ಲಿ ಭಾಗವಹಿಸಿದ್ದಾರೆ. ಜೈತ್ರಾ ಬಿ ಹಾಗೂ ಮೋನಿಕ ಎಲ್., ಅವರು ಭಾರತ ತಂಡವನ್ನು ಪ್ರತಿನಿಧಿಸಬೇಕೆಂದು ಕಠಿಣ ಪರಿಶ್ರಮ ಹಾಕಿ ನಿರಂತರ ಅಭ್ಯಾಸ ನಡೆಸಿದ್ದರು. ಚೈತ್ರ ಬಿ. ಹಾಗೂ ಮೋನಿಕ ಎಲ್ ಅವರಿಗೆ ಮಂಜುನಾಥ್ ಅವರು ತರಬೇತಿ ನೀಡಿದ್ದರು, ಇದೀಗ ಭಾರತ ತಂಡಕ್ಕೆ ಆಯ್ಕೆಯಾಗುವ ಮೂಲಕ ಅವರ ಶ್ರಮಕ್ಕೆ ಪ್ರತಿಫಲ ದೊರೆತಿದೆ.

ನಾಳೆ ಮೈಶುಗರ್ ಶಾಲೆಯ ಅಮೃತ ಮಹೋತ್ಸವ

ಮಂಡ್ಯ: ಮೈಶುಗರ್ ಪ್ರೌಢ ಶಾಲೆ ಅಮೃತ ಮಹೋತ್ಸವ ಸಮಾರಂಭ ಶಾಲೆಯ ಪ್ರಾಂಗಣದಲ್ಲಿ ಡಿ.28ರಂದು ಬೆಳಗ್ಗೆ 9 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಮೈಶುಗರ್ ಅಧ್ಯಕ್ಷ ಹಾಗೂ ಶಾಲೆಯ ಹಿರಿಯ ವಿದ್ಯಾರ್ಥಿ ಸಿ.ಡಿ.ಗಂಗಾಧರ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾರಂಭದ ಸಾನಿಧ್ಯವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ವಹಿಸಲಿದ್ದು, ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಪುರುಷೋತ್ತಮಾನಂದನಾಥ ಸ್ವಾಮೀಜಿ ವಹಿಸುವರು ಎಂದರು. ಉದ್ಘಾಟನೆಯನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೆರವೇರಿಸಲಿದ್ದು, ಸಾಹಿತಿ ಪ್ರೊ.ಎಂ.ಕೃಷ್ಣೇಗೌಡ ಆಶಯ ನುಡಿಗಳನ್ನಾಡುವರು, ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಅಮೃತಧಾರೆ ಸಂಚಿಕೆ ಬಿಡುಗಡೆ ಮಾಡಲಿದ್ದು, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಅಧ್ಯಕ್ಷತೆ ವಹಿಸುವರು ಎಂದು ಹೇಳಿದರು.

ಅಪರಿಚಿತ ವಾಹನ ಡಿಕ್ಕಿ: ವ್ಯಕ್ತಿ ಸಾವು



ಭಾರತೀನಗರ, ಡಿ.26– ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ರಸ್ತೆಯಲ್ಲಿ ಮಾತನಾಡುತ್ತಾ ನಿಂತಿದ್ದ ವ್ಯಕ್ತಿಯೊಬ್ಬರು ಸಾವನ್ನಪ್ಪಿರುವ ಘಟನೆ ಭಾರತೀನಗರದ ಮದ್ದೂರು–ಮಳವಳ್ಳಿ ಹೆದ್ದಾರಿಯಲ್ಲಿ ಸಂಭವಿಸಿದೆ.

ಕಾಡುಕೊತ್ತನಹಳ್ಳಿ ಗ್ರಾಮದ ಕೆ.ಸಿ.ರಮೇಶ್ (48) ಮೃತ ದುರ್ದೈವಿ.

ಈತ ಭಾರತೀನಗರದ ವಿಜಿ ಕಾಲೋನಿಯಲ್ಲಿ ವಾಸವಾಗಿದ್ದು, ಬುಧವಾರ ರಾತ್ರಿ ಭಾರತೀನಗರದ ಮದ್ದೂರು–ಮಳವಳ್ಳಿ ಹೆದ್ದಾರಿಯಲ್ಲಿರುವ ರಮ್ಯ ದರ್ಶಿನಿ ಹೋಟೆಲ್ ಮುಂಭಾಗದ ರಸ್ತೆ ಬದಿಯಲ್ಲಿ ನಿಂತು ಸ್ನೇಹಿತರೊಂದಿಗೆ ಮಾತನಾಡುತ್ತಿದ್ದಾಗ ಯಾವುದೋ ಅಪರಿಚಿತ ವಾಹನ ಡಿಕ್ಕಿ ಹೊಡೆದು ಪರಾರಿಯಾಗಿದೆ.

ಗಂಭೀರವಾಗಿ ಗಾಯಗೊಂಡಿದ್ದ ರಮೇಶ್ ಅವರನ್ನು ತಕ್ಷಣ ಅಕ್ಕಪಕ್ಕದವರು ಆಸ್ಟರ್ ಜಿ.ಮಾದೇಗೌಡ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ್ದಾರೆ, ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಸದ್ಯಕ್ಕೆ ಸಿಸಿ ಕ್ಯಾಮರಾದಲ್ಲಿ ಕೆ.ಸಿ.ರಮೇಶ್ ಅವರಿಗೆ ಡಿಕ್ಕಿ ಹೊಡೆದ ದೃಶ್ಯ ಸೆರೆಯಾಗಿದ್ದು, ಪೊಲೀಸರಿಗೆ ಲಭ್ಯವಾಗಿದೆ. ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿದ್ದಾರೆ. ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನೃತ್ಯದಿಂದ ದೈಹಿಕ ಸಾಮರ್ಥ್ಯ, ಸಮತೋಲನ ಸುಧಾರಣೆ

ಆದಾಯ ತೆರಿಗೆ ಇಲಾಖೆ ಹೆಚ್ಚುವರಿ ಆಯುಕ್ತ ಎಂ.ಎಸ್.ನೇತ್ರಪಾಲ್



ರಾಷ್ಟ್ರೀಯ ಖೋ ಖೋ ಕ್ರೀಡಾಪಟುಗಳಾದ ಅರ್ಪಿತಾ ಹಾಗೂ ಮೇಘನಾ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಡಿ.26– ನೃತ್ಯ ದೇಹದ ಸ್ಥಿರತೆ ಹೆಚ್ಚಿಸುತ್ತದೆ. ದೈಹಿಕ ಸಾಮರ್ಥ್ಯ ಮತ್ತು ಸಮತೋಲನ ಸುಧಾರಿಸುವಲ್ಲಿ ಪರಿಣಾಮಕಾರಿ ಪಾತ್ರ ವಹಿಸುತ್ತದೆ ಎಂದು ಆದಾಯ ತೆರಿಗೆ ಇಲಾಖೆ ಹೆಚ್ಚುವರಿ ಆಯುಕ್ತ ಎಂ.ಎಸ್. ನೇತ್ರಪಾಲ್ ತಿಳಿಸಿದರು.

ಪಟ್ಟಣದ ಮಹದೇಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳ 77ನೇ ಜನ್ಮ ವರ್ಧಂತ್ಯೋತ್ಸವದ ಅಂಗವಾಗಿ ಶಾರದಾ ಡ್ಯಾನ್ಸ್ ಅಕಾಡೆಮಿ ವತಿಯಿಂದ ಆಯೋಜಿಸಿದ್ದ 3ನೇ ವರ್ಷದ ರಾಜ್ಯಮಟ್ಟದ ನೃತ್ಯ ಸ್ಪರ್ಧೆಯಲ್ಲಿ ಮಾತನಾಡಿದ ಅವರು, ನೃತ್ಯ ದೇಹವನ್ನು ನಿಯಂತ್ರಿಸಲು ಮತ್ತು ಭಂಗಿಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಚಿಕ್ಕವಯಸ್ಸಿನಿಂದಲೇ ನೃತ್ಯ ಮಾಡಲು ಪ್ರಾರಂಭಿಸಿದರೆ, ದೇಹವನ್ನು ಸಮತೋಲನದಲ್ಲಿಡುವುದು ಸಾಧ್ಯ. ವೃದ್ಧಾಪ್ಯದಲ್ಲೂ ಸಾಮಾನ್ಯವಾಗಿ ನಡೆಯಲು ಸಾಧ್ಯವಾಗುತ್ತದೆ ಎಂದರು.

ನೃತ್ಯ ಸ್ಪರ್ಧೆ ಆಯೋಜಿಸಿರುವುದು ಸ್ವಾಗತಾರ್ಹ. ಇದರಿಂದ ಗ್ರಾಮೀಣ ಮಕ್ಕಳ ಪ್ರತಿಭೆ ಅನಾವರಣಗೊಳಿಸಲು ಸಹಾಯಕವಾಗುತ್ತದೆ. ವಾಟಾಳು ಶ್ರೀಗಳು ಕೇವಲ ನಿರ್ದಿಷ್ಟ ಜಾತಿಗೆ ಸೀಮಿತವಾಗದೇ ಸರ್ವ ಜನಾಂಗವನ್ನು ಸಮಾನವಾಗಿ ಕಾಣುವ ಮನೋಭಾವ ಹೊಂದಿದ್ದಾರೆ. 77 ವರ್ಷವಾದರೂ ಆಹ್ವಾನಿಸುವ ಸಮಾರಂಭಗಳಿಗೆಲ್ಲಾ ಹಾಜರಾಗುವ ಮೂಲಕ ಈ ಭಾಗದ ನಡೆದಾಡುವ ದೇವರೆಂದೇ ಖ್ಯಾತರಾಗಿದ್ದು, ಭಗವಂತ ಹೆಚ್ಚಿನ ಸಮಾಜ ಸೇವೆ ಮಾಡಲು ಆರೋಗ್ಯ, ಆಯುಸ್ಸು ಕರುಣಿಸಲಿ ಎಂದು ಪ್ರಾರ್ಥಿಸಿದರು.

ವಿದ್ಯೋದಯ ಶಿಕ್ಷಣ ಸಂಸ್ಥೆ ಗೌರವ ಕಾರ್ಯದರ್ಶಿ ಕೆ.ಪಿ.ಮಹದೇವಸ್ವಾಮಿ ಮಾತನಾಡಿದರು. ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಖೋ ಖೋ ಕ್ರೀಡಾಪಟುಗಳಾದ ತಾಲೂಕಿನ ಕುರುಬೂರು ಗ್ರಾಮದ ವಿದ್ಯಾರ್ಥಿನಿಯರಾದ ಅರ್ಪಿತಾ ಹಾಗೂ ಮೇಘನಾ ಅವರನ್ನು ಸನ್ಮಾನಿಸಲಾಯಿತು. ಅಲ್ಲದೇ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ನೃತ್ಯಪಟುಗಳು ಚಲನಚಿತ್ರ ಗೀತೆ ಹಾಗೂ ಶಾಸ್ತ್ರೀಯ ಸಂಗೀತಕ್ಕೆ ನೃತ್ಯ ಮಾಡಿ ನೆರೆದಿದ್ದ ಪ್ರೇಕ್ಷಕರನ್ನು ರಂಜಿಸಿದರು.

ಈ ವೇಳೆ ಶಾರದಾ ನೃತ್ಯ ಅಕಾಡೆಮಿ ಅಧ್ಯಕ್ಷ ಪುಷ್ಪಲತಾ, ಕಾರ್ಯದರ್ಶಿ ಬಸವರಾಜು, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ಕೃಷಿಕ ಸಮಾಜದ ಅಧ್ಯಕ್ಷ ಬೆನಕನಹಳ್ಳಿ ಶಿವಮಲ್ಲಪ್ಪ ಬಿಇಓ ಶಿವಸ್ವಾಮಿ, ಪೂಜಿತ್ ಮೆಡಿಕಲ್ ಕುಮಾರ್, ಖಾಸಗಿ ಬಸ್ ಏಜೆಂಟ್ ಸಂಘದ ಅಧ್ಯಕ್ಷ ಶ್ರೀನಿವಾಸ್, ಕಾರ್ಯದರ್ಶಿ ರಾಜಣ್ಣ, ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ಅನಾಥ ಶವಗಳ ಮುಕ್ತಿದಾತ ಡಾ.ಎಂ. ಮಾದೇಶ್, ಪುರಸಭಾ ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ, ಮುಖಂಡರಾದ ಸಿದ್ದಲಿಂಗಸ್ವಾಮಿ ಹಿರಿಯೂರು ಪ್ರಕಾಶ್, ತೊಂಟೇಶ್, ಕುಮಾರಸ್ವಾಮಿ, ವಕೀಲ ಜ್ಞಾನೇಂದ್ರ ಮೂರ್ತಿ, ಭಾನುಪ್ರಕಾಶ್, ಜಗದೀಶ್, ಬಿಆರ್‌ಸಿ ನಾಗೇಶ್, ರತ್ನಶೇಖರ್, ರಾಜೇಶ್, ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಸಿದ್ದರಾಜು ಮತ್ತಿತರರಿದ್ದರು.


ಶ್ರೀಕಂಠೇಶ್ವರನ ಹುಂಡಿಯಲ್ಲಿ 1.23 ಕೋಟಿ ರೂ. ಸಂಗ್ರಹ

ನಂಜನಗೂಡು, ಡಿ.26– ಶ್ರೀಕಂಠೇಶ್ವರ ದೇವಾಲಯದ ಹುಂಡಿಯಲ್ಲಿ 1.23 ಕೋಟಿ ರೂ. ಸಂಗ್ರಹವಾಗಿದೆ.

ಇಲ್ಲಿನ ದಾಸೋಹ ಭವನದಲ್ಲಿ ಗುರುವಾರ ದೇವಾಲಯದ ಹುಂಡಿಗಳ ಪರ್ಕಾವಣೆ ಕಾರ್ಯ ನಡೆಯಿತು. ಈ ವೇಳೆ 1.23 ಕೋಟಿ ರೂ., 28 ಗ್ರಾಂ ಚಿನ್ನ, 1 ಕೆಜಿ 780 ಗ್ರಾಂ ಬೆಳ್ಳಿ, 28 ವಿದೇಶಿ ಕರೆನ್ಸಿಗಳು ದೊರೆತಿವೆ ಎಂದು ದೇವಾಲಯದ ಇಓ ಜಗದೀಶ್ ಕುಮಾರ್ ಹೇಳಿದರು. ನ.28 ರಂದು ದೇವಾಲಯದ ಹುಂಡಿಗಳ ಪರ್ಕಾವಣೆ ಕಾರ್ಯ ನಡೆದಿತ್ತು. ಈಗ ಮತ್ತೆ ಒಂದು ತಿಂಗಳ ಅವಧಿಯಲ್ಲಿ ದೇವಾಲಯಕ್ಕೆ 1.23 ಕೋಟಿ ಆದಾಯ ಬಂದಿದೆ. ಜೊತೆಗೆ 21 ಅಮೆರಿಕಾ ಡಾಲರ್, 1 ಇಂಗ್ಲೆಂಡ್ ಪೌಂಡ್, 3 ಕೆನಡಾ ಡಾಲರ್, 3 ಹಾಂಕಾಂಗ್ ಡಾಲರ್ ಸೇರಿದಂತೆ ಒಟ್ಟು 28 ವಿದೇಶಿ ಕರೆನ್ಸಿಗಳು ಹುಂಡಿಯಲ್ಲಿ ಸಂಗ್ರಹಗೊಂಡಿದೆ ಎಂದು ಮಾಹಿತಿ ನೀಡಿದರು.

ಹುಂಡಿ ಎಣಿಕೆ ಕಾರ್ಯದಲ್ಲಿ ಸ್ತ್ರೀಶಕ್ತಿ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಮತ್ತು ದೇವಾಲಯದ ಸಿಬ್ಬಂದಿ ನೆರವಾದರು. ಈ ಸಂದರ್ಭದಲ್ಲಿ ದೇವಾಲಯದ ಎಇಓ ಸತೀಶ್, ಲೆಕ್ಕಾಧಿಕಾರಿ ಗುರುಮಲ್ಲಯ್ಯ ಸೇರಿದಂತೆ ಇತರರಿದ್ದರು.

ಹೈಟೆಕ್ ಆಸ್ಪತ್ರೆ ಲೋಕಾರ್ಪಣೆಗೆ ಒತ್ತಾಯಿಸಿ ಪ್ರತಿಭಟನೆ



ಹೈಟೆಕ್ ಆಸ್ಪತ್ರೆ ಲೋಕಾರ್ಪಣೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಹುಣಸೂರು, ಡಿ.26– ನಗರದಲ್ಲಿ ಬಹುಕೋಟಿ ವೆಚ್ಚದಲ್ಲಿ ನಿರ್ಮಿಸುತ್ತಿರುವ ನೂತನ ಸಾರ್ವಜನಿಕ ಹೈಟೆಕ್ ಆಸ್ಪತ್ರೆಯನ್ನು ಶೀಘ್ರ ಲೋಕಾರ್ಪಣೆಗೊಳಿಸುವಂತೆ ಒತ್ತಾಯಿಸಿ ಸಿಪಿಐಎಂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ತಾಲೂಕು ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ನೂತನ ಆಸ್ಪತ್ರೆ ಉದ್ಘಾಟನೆಗೆ ವಿಳಂಬ ಮಾಡುತ್ತಿರುವ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಕೂಡಲೇ ಆಸ್ಪತ್ರೆಯ ಉಳಿದ ಕಾಮಗಾರಿ ಮುಗಿಸಿ ಲೋಕಾರ್ಪಣೆ ಮಾಡುವ ಮೂಲಕ ಬಡವರಿಗೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿದರು. ಸಿಪಿಎಂ ತಾಲೂಕು ಕಾರ್ಯದರ್ಶಿ ವೆಂಕಟೇಶ್ ಮಾತನಾಡಿ, ಹುಣಸೂರು ಮಾಜಿ ಸಿಎಂ ಡಿ.ದೇವರಾಜ ಅರಸು ಅವರ ಕರ್ಮಭೂಮಿಯಾಗಿ ರಾಜ್ಯದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ. ಆದರೆ ಅರಸು ಅವರ ಹೆಸರಿನಲ್ಲಿರುವ ಸಾರ್ವಜನಿಕ ಆಸ್ಪತ್ರೆ ಮಾತ್ರ ಆಡಳಿತ ವ್ಯವಸ್ಥೆ ವೈಫಲ್ಯದಿಂದಾಗಿ ಹಲವು ಸಮಸ್ಯೆಗಳಿಂದ ಬಳಲುತ್ತಿರುವುದರಿಂದ ಇಲ್ಲಿಗೆ ಬರುವ ರೋಗಿಗಳ ಪಾಡು ಹೇಳತೀರದಾಗಿದೆ ಎಂದು ದೂರಿದರು. ಈಗಿರುವ ಆಸ್ಪತ್ರೆ ಹಳೇ ಕಟ್ಟಡ ಮಳೆ ಬಂದರೆ ಸೋರುವ ಪರಿಸ್ಥಿತಿ ಇದ್ದು, ಈ ಕಟ್ಟಡಕ್ಕೆ ವಿದ್ಯುತ್ ಅವ್ಯವಸ್ಥೆಯಿಂದಾಗಿ ಸಂಪೂರ್ಣ ಬೆಳಕಿನ ವ್ಯವಸ್ಥೆ ಇಲ್ಲದೇ ರೋಗಿಗಳ ಪರದಾಡುವಂತಾಗಿದೆ ಮುಂದಿನ ದಿನಗಳಲ್ಲಿ ಅನಾಹುತ ಸಂಭವಿಸಿ ಜೀವಗಳು ಬಲಿಯಾಗುವ ಮುನ್ನಾ ಹೈಟೆಕ್ ಆಸ್ಪತ್ರೆಯನ್ನು ಉದ್ಘಾಟಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕಾಗಿದೆ ಎಂದರು.

ಸಿಪಿಎಂ ಮುಖಂಡ ಬಸವರಾಜು ಮಾತನಾಡಿದರು. ಪ್ರತಿಭಟನೆಯಲ್ಲಿ ಮುಖಂಡರಾದ ಶಿವರಾಮು, ಚಂದ್ರೇಗೌಡ, ಚಂದ್ರಶೇಖರ್, ಮಹದೇವ, ಚಿಕ್ಕಣ್ಣೇಗೌಡ, ಪುಟ್ಟರಾಜು, ಮಹದೇವ, ಕೆಂಪರಾಮಯ್ಯ, ಪ್ರಿಯ, ಜೀವನ್ ಕುಮಾರ್, ಹೇಮಂತ್, ಕಿರಣ್, ಪುಟ್ಟಶೆಟ್ಟಿ, ಸಿದ್ದಯ್ಯ ಇನ್ನಿತರರಿದ್ದರು.



ಕಲರ್ ಮಾಫಿಯಾ ಸುತ್ತ 'ವರ್ಣವೇದಂ'

ಈ ಹಿಂದೆ ನಾನು ಮತ್ತು ಗುಂಡ ಎಂಬ ಚಿತ್ರ ನಿರ್ದೇಶಿಸಿದ ಶ್ರೀನಿವಾಸ್ ತಿಮ್ಮಯ್ಯ ಅವರ ನಿರ್ದೇಶನದ ಮತ್ತೊಂದು ಚಿತ್ರ 'ವರ್ಣವೇದಂ'. ಇತ್ತೀಚೆಗೆ ಈ ಚಿತ್ರದ ಶೀರ್ಷಿಕೆ ಗೀತೆಯನ್ನು ಬೆಂಗಳೂರು ಫಿಲಂ ಸಿಟಿ ಎಂಬ ನೂತನ ಸ್ಟುಡಿಯೋದಲ್ಲಿ ಚಿತ್ರೀಕರಿಸಲಾಯಿತು. ಈ ಸಂದರ್ಭದಲ್ಲಿ ಚಿತ್ರದ ಕುರಿತು ಮಾತನಾಡಿದ ನಿರ್ದೇಶಕ ಶ್ರೀನಿವಾಸ್ ತಿಮ್ಮಯ್ಯ, 'ನಾನು ಮತ್ತು ಗುಂಡ' ನಂತರ ನಾನು ನಿರ್ದೇಶಿಸುತ್ತಿರುವ ಎರಡನೇ ಚಿತ್ರವಿದು. ಶ್ರೀನಿವಾಸ್ ತಿಮ್ಮಯ್ಯ ಫಿಲಂ ಫ್ಯಾಕ್ಟರಿ ಲಾಂಛನದಲ್ಲಿ ಚಂದ್ರಶೇಖರ್, ವಿಶ್ವನಾಥ್, ಶೈಜು ಹಾಗೂ ರಾಜೇಶ್ ಸೇರಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ.

ಈ ಚಿತ್ರದಲ್ಲಿ ನವನಟ ನೈಋತ್ಯ ನಾಯಕನಾಗಿ ನಟಿಸುತ್ತಿದ್ದು, ನಾಯಕಿಯಾಗಿ ಪ್ರತೀಕ್ಷ ಕಾಣಿಸಿಕೊಂಡಿದ್ದಾರೆ. ಈ ಹಾಡಿನಲ್ಲಿ ನಾಯಕ, ನಾಯಕಿ ಹಾಗೂ ನೂರಾರು ಜನ ನೃತ್ಯ ಕಲಾವಿದರು ಅಭಿನಯಿಸಿದ್ದಾರೆ. ಈ ಹಾಡಿಗೆ ಮೋಯಿನ್ ಮಾಸ್ಟರ್ ನೃತ್ಯ ಸಂಯೋಜಿಸುತ್ತಿದ್ದಾರೆ. ಗಗನ್ ಭಡೇರಿಯಾ ಅವರು ಸಂಗೀತ ಸಂಯೋಜಿಸಿರುವ ಈ ಹಾಡಿಗೆ ರಜತ್ ಹೆಗಡೆ ಹಾಗೂ ತನುಷಾ ದನಿಯಾಗಿದ್ದಾರೆ. 'ವರ್ಣವೇ ವರ್ಣವೇ' ಎಂಬ ಸಾಹಿತ್ಯ ಇರುವ ಈ ಶೀರ್ಷಿಕೆ ಗೀತೆಯನ್ನು ಪ್ರತಾಪ್ ಭಟ್ ರಚಿಸಿದ್ದಾರೆ. ಈಗಾಗಲೇ ಮಾತಿನ ಭಾಗದ ಚಿತ್ರೀಕರಣ ಮುಕ್ತಾಯ ಹಂತ ತಲುಪಿದೆ. ಇನ್ನೆರಡು ಹಾಡು ಹಾಗೂ ಒಂದು ಸಾಹಸ ಸನ್ನಿವೇಶದ ಚಿತ್ರೀಕರಣ ಮಾತ್ರ ಬಾಕಿಯಿದೆ.

'ವರ್ಣವೇದಂ' ಬಣ್ಣದ ಬಗ್ಗೆ ಕಥಾಹಂದರ ಇರುವ ಸಿನಿಮಾ. ಕಲರ್ ಮಾಫಿಯಾ ಸುತ್ತ ನಡೆಯುವ ಘಟನೆಗಳೇ ಈ ಚಿತ್ರದ ಪ್ರಮುಖ ಕಥಾವಸ್ತು. ಚಿತ್ರದ ನಾಯಕಿಯ ಹೆಸರು ವರ್ಣ ಹಾಗೂ ನಾಯಕನ ಹೆಸರು ವೇದಾಂತ್.

ವರ್ಣವೇದಂ ಎನ್ನುವ ಟೈಟಲ್‌ನಲ್ಲೇ ನಾಯಕ, ನಾಯಕಿಯ ಹೆಸರಿದೆ. ನಾಯಕ ನೈಋತ್ಯ ಮಾತನಾಡುತ್ತ ಮೂಲತಃ ರಂಗಭೂಮಿ ಕಲಾವಿದನಾಗಿರುವ ನನಗೆ ನಾಯಕನಾಗಿ ಇದು ಮೊದಲ ಚಿತ್ರ. ಚಿತ್ರದಲ್ಲಿ ನಾನೊಬ್ಬ ಮ್ಯುಸಿಷಿಯನ್ ಆಗಿ ಕಾಣಿಸಿಕೊಂಡಿದ್ದೇನೆ ಎಂದು ತಿಳಿಸಿದರು. ಮೂಲತಃ ಮಂಗಳೂರಿನವಳಾದ ನನಗೂ ಇದು ಚೊಚ್ಚಲ ಚಿತ್ರ ಎಂದು ನಾಯಕಿ ಪ್ರತೀಕ್ಷ ಹೇಳಿದರು. ನೃತ್ಯ ನಿರ್ದೇಶಕ ಮೋಯಿನ್, ಸ್ಟುಡಿಯೋ ಮಾಲೀಕ ಮಹಮ್ಮದ್ ಗೌಸ್ ಹಾಗೂ ಛಾಯಾಗ್ರಾಹಕ ಚಿದಾನಂದ್ ಎಲ್ಲರೂ 'ವರ್ಣವೇದಂ' ಚಿತ್ರದ ಬಗ್ಗೆ ಮಾಹಿತಿ ನೀಡಿದರು.



ಫೆಬ್ರವರಿ 7ಕ್ಕೆ 'ಅನ್‌ಲಾಕ್ ರಾಘವ' ಲಾಕ್

ತನ್ನ ಟೈಟಲ್‌ನಿಂದಲೇ ದೊಡ್ಡಮಟ್ಟದ ನಿರೀಕ್ಷೆ ಹುಟ್ಟು ಹಾಕಿರುವ ಚಿತ್ರ "ಅನ್‌ಲಾಕ್ ರಾಘವ". ಫೆ. 7ರಂದು ರಿಲೀಸಾಗಲಿರುವ ಈ ಚಿತ್ರದಲ್ಲಿ ಮಿಲಿಂದ್ ಹಾಗೂ ರೆಚೆಲ್‌ಡೇವಿಡ್ (ಲವ್ ಮಾಕ್ಟೇಲ್) ನಾಯಕ-ನಾಯಕಿಯಾಗಿ ನಟಿಸಿದ್ದು, ದೀಪಕ್ ಮಧುವನಹಳ್ಳಿ ಆಕ್ಷನ್ ಕಟ್ ಹೇಳಿದ್ದಾರೆ. ಮಂಜುನಾಥ್ ದಾಸೇಗೌಡ ಹಾಗೂ ಗಿರೀಶ್‌ಕುಮಾರ್ ಚಿತ್ರವನ್ನು ನಿರ್ಮಿಸಿದ್ದಾರೆ.

ಈಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕರು ನನ್ನ ಹಿಂದಿನ ಚಿತ್ರಗಳನ್ನು ನೋಡಿದ್ದ ಗೆಳೆಯರು, ನಿನ್ನ ಸಿನಿಮಾಗಳಲ್ಲಿ ಗ್ಲಾಮರ್ರೇ ಇರಲ್ಲ ಎನ್ನುತ್ತಿದ್ದರು. ಆದರೆ ಅನ್‌ಲಾಕ್ ರಾಘವ ಚಿತ್ರದ ಫಸ್ಟ್‌ಲುಕ್‌ನಲ್ಲಿ ನಾಯಕಿ ರೆಚೆಲ್ ಅವರ ಮಾದಕ ಲುಕ್ ನೋಡಿ ಈಗ ನೀನೊಬ್ಬ ಕಮರ್ಷಿಯಲ್ ನಿರ್ದೇಶಕ ಎಂದು ಮೆಚ್ಚಿದ್ದರು ಎಂದರು. ನಾಯಕ ಮಿಲಿಂದ್ ಸ್ಫುರದ್ರೂಪಿ ನಟ, ಅಷ್ಟೇ ಅಲ್ಲ. ಭರವಸೆಯ ನಟ ಕೂಡ ಹೌದು. ಇದೊಂದು ಪಕ್ಕಾ ಮನರಂಜನೆಯ ರಸದೌತಣ ನೀಡುವ, ಪ್ರೇಕ್ಷಕ ಕೊಟ್ಟ ದುಡ್ಡಿಗೆ ಮೋಸಮಾಡದ ಚಿತ್ರ. "ರಾಮರಾಮ ರೇ" ಖ್ಯಾತಿಯ ಸತ್ಯಪ್ರಕಾಶ್ ಕಥೆ, ಚಿತ್ರಕಥೆ ಬರೆದಿದ್ದಾರೆ. ಕೋಟೆ ನಾಡು ಚಿತ್ರದುರ್ಗದಲ್ಲೇ ಹೆಚ್ಚಿನ ಭಾಗದ ಚಿತ್ರೀಕರಣ ನಡೆಸಿದ್ದೇವೆ. ಲವಿತ್ ಅವರ ಛಾಯಾಗ್ರಹಣದಲ್ಲಿ ಚಿತ್ರದುರ್ಗದ ಸೊಬಗನ್ನು ನೋಡುವುದೆ ಚೆಂದ. ಅನೂಪ್ ಸೀಳಿನ್ ಅವರ ಸಂಗೀತದ ಹಾಡುಗಳು ಈಗಾಗಲೇ ಪ್ರೇಕ್ಷಕರ ಮನ ಗೆದ್ದಿವೆ ಎಂದು ವಿವರಿಸಿದರು.

ಸತ್ಯಪ್ರಕಾಶ್ ಹೇಳಿದ ಕಥೆ ತುಂಬಾ ಇಷ್ಟವಾಯಿತು. ಹೊಸ ನಾಯಕನ ಎಂಟ್ರಿಗೆ ಬೇಕಾದ ಎಲ್ಲಾ ಅಂಶಗಳ ಜತೆಗೆ ಚೆಂದವಾದ ಕಥೆಯೊಂದನ್ನು ಕಟ್ಟಿಕೊಟ್ಟಿದ್ದರು. ಅಷ್ಟೇ ಸುಂದರವಾಗಿ ದೀಪಕ್ ನಿರ್ದೇಶನ ಮಾಡಿದ್ದಾರೆ. ಈ ಹಿಂದೆ ಯಾವ ಚಿತ್ರಗಳಲ್ಲೂ ನೋಡಿರದ ಸಾಧುಕೋಕಿಲ ಹಾಗೂ ಶೋಭರಾಜ್ ಅವರನ್ನು ನಮ್ಮ ಚಿತ್ರದಲ್ಲಿ ನೋಡಬಹುದು. ಇತ್ತೀಚಿಗೆ ಟೆಕ್ನಿಕಲ್ ಶೋನಲ್ಲಿ ಚಿತ್ರವನ್ನು ನೋಡಿದಾಗ ಎಲ್ಲರ ಮುಖದಲ್ಲಿ ನಗು ಮೂಡಿತ್ತು. ಆ ನಗು ಪ್ರೇಕ್ಷಕನ ಮುಖದಲ್ಲೂ ಮೂಡಲಿದೆ ಎಂಬ ಭರವಸೆಯಿದೆ ಎಂದು ನಾಯಕ ಮಿಲಿಂದ್ ಹೇಳಿದರು. ನಾಯಕಿ ರಚೆಲ್ ಡೇವಿಡ್ ಮಾತನಾಡಿ, ದೀಪಕ್ ಅವರು ಈ ಕಥೆಯನ್ನು ಹೇಳಿದಾಗ ಈ ಚಿತ್ರದಲ್ಲಿ ನಟಿಸಲೇಬೇಕೆಂದು ನಿರ್ಧರಿಸಿದ್ದೆ, ಅಷ್ಟು ಸುಂದರ ಕಥೆಯಿದು. ಪ್ರಾಚ್ಯಶಾಸ್ತ್ರ ಸಂಶೋಧಕಿ ಜಾನಕಿ ಪಾತ್ರದಲ್ಲಿ ನಾನು ಕಾಣಿಸಿಕೊಂಡಿದ್ದೇನೆ ಎಂದು ಹೇಳಿದರು. ಇದು ನನ್ನ ನಿರ್ಮಾಣದ ನಾಲ್ಕನೇ ಚಿತ್ರ ಎಂದ ನಿರ್ಮಾಪಕ ಮಂಜುನಾಥ್ ದಾಸೇಗೌಡ, ಸಾಕಷ್ಟು ಸವಾಲುಗಳನ್ನು ಎದುರಿಸಿ ಚಿತ್ರವೀಗ ತೆರೆಗೆ ಬರಲು ಸಿದ್ಧವಾಗಿದೆ. ಇತ್ತೀಚೆಗೆ ಪ್ರೀಮಿಯರ್ ಶೋನಲ್ಲಿ ಚಿತ್ರ ನೋಡಿದಾಗ ಬಹಳ ಖುಷಿಯಾಯಿತು. ಇದು ನಮ್ಮ ಸೊಗಡಿನ ಚಿತ್ರ. ಅನ್‌ಲಾಕ್ ರಾಘವ ಇಷ್ಟು ಚೆನ್ನಾಗಿ ಮೂಡಿಬರಲು ಚಿತ್ರತಂಡದ ಸಹಕಾರವೇ ಕಾರಣ ಎಂದು ಹೇಳಿದರು.

'ಫಾರೆಸ್ಟ್' ಪೈಸಾ ಪೈಸಾ... ಹಾಡು ಕಾಡಲ್ಲಿ ನಡೆಯುವ ರೋಚಕ ಕಥೆ



ತನ್ನ ಟೈಟಲ್‌ನಿಂದಲೇ ಸುದ್ದಿ ಮಾಡುತ್ತಿರುವ ಚಿತ್ರ ಫಾರೆಸ್ಟ್. ಆ.24ಕ್ಕೆ ಬಿಡುಗಡೆಯಾಗಲಿರುವ ಈ ಚಿತ್ರದ ಪೈಸಾ ಪೈಸಾ ರೇ ಎಂಬ ಹಾಡೊಂದು ಇತ್ತೀಚೆಗೆ ರಿಲೀಸಾಗಿದೆ, ಈ ಹಾಡಿಗೆ ಧರ್ಮವಿಶ್ ಅವರ ಸಂಗೀತ ಸಂಯೋಜನೆಯಿದ್ದು, ಚೇತನ್‌ಕುಮಾರ್ ಸಾಹಿತ್ಯ ರಚಿಸಿದ್ದಾರೆ. ಈ ಪೆಪ್ಪಿ ನಂಬರ್ ಹಾಡಿಗೆ ರ್‍ಯಾಪರ್ ಚಂದನ್ ಶೆಟ್ಟಿ ದನಿಯಾಗಿದ್ದಾರೆ.

ಎನ್.ಎಂ.ಕೆ ಸಿನಿಮಾಸ್ ಅಡಿ ಎನ್.ಎಂ. ಕಾಂತರಾಜ್ ಅವರು ಈ ಚಿತ್ರವನ್ನು ಅದ್ಧೂರಿಯಾಗಿ ನಿರ್ಮಿಸಿದ್ದಾರೆ. ಬಜೆಟ್ ಎಷ್ಟಾದರೂ ಯೋಚಿಸದೆ ಸಿನಿಮಾ ಚೆನ್ನಾಗಿ ಬರಬೇಕೆಂಬ ಉದ್ದೇಶದಿಂದ ಧಾರಾಳವಾಗಿ ಖರ್ಚು ಮಾಡಿದ್ದಾರೆ, ಇತ್ತೀಚೆಗಷ್ಟೇ ಚಿತ್ರದ ಸೆನ್ಸಾರ್ ಪ್ರಕ್ರಿಯೆ ನಡೆದಿದೆ, ಈ ಹಿಂದೆ ರೊಮ್ಯಾಂಟಿಕ್ ಕಾಮಿಡಿ ಚಿತ್ರ ನಿರ್ದೇಶಿಸಿದ್ದ ಚಂದ್ರ ಮೋಹನ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ, ಫಾರೆಸ್ಟ್‌ನಲ್ಲಿ ನಡೆಯುವ ಅಡ್ವೆಂಚರಸ್ ಕಾಮಿಡಿ ಕಥೆಯನ್ನು ಈ ಚಿತ್ರದಲ್ಲಿ ಹೇಳಿದ್ದಾರೆ. ಹಾಸ್ಯನಟ ಚಿಕ್ಕಣ್ಣ, ಅನೀಶ್ ತೇಜೇಶ್ವರ್, ಗುರುನಂದನ್, ರಂಗಾಯಣ ರಘು ಪ್ರಮುಖ ಪಾತ್ರದಲ್ಲಿ ಅಭಿನಯಿಸಿರುವ ಮಲ್ಟಿಸ್ಟಾರರ್ ಚಿತ್ರ ಇದಾಗಿದ್ದು, ಶೀರ್ಷಿಕೆಯೇ ಹೇಳುವಂತೆ ಇದು ಫಾರೆಸ್ಟ್‌ನಲ್ಲಿ ನಡೆಯುವ ಅಡ್ವೆಂಚರಸ್ ಕಾಮಿಡಿ ಕಥಾಹಂದರ ಹೊಂದಿದೆ. ಚಿತ್ರದ ಬಹುತೇಕ ಕಥೆ ಕಾಡಿನಲ್ಲಿಯೇ ನಡೆಯಲಿರುವುದು ಚಿತ್ರದ ಮತ್ತೊಂದು ವಿಶೇಷ. ಈ ಚಿತ್ರಕ್ಕೆ ಸತ್ಯಶೌರ್ಯ ಸಾಗರ್ ಹಾಗೂ ಚಂದ್ರ ಮೋಹನ್ ಸೇರಿ ಕಥೆ, ಚಿತ್ರಕಥೆ ರಚಿಸಿದ್ದಾರೆ. ಆರಂಭದಲ್ಲಿ ಶತಮಾನದ ಅತಿದೊಡ್ಡ ಕಳ್ಳತನವೊಂದು ನಡೆದಿರುತ್ತದೆ, ಅದನ್ನು ಪೊಲೀಸರು ಹುಡುಕಿಕೊಂಡು ಹೋಗುತ್ತಾರೆ, ಮುಂದೆ ನಡೆಯುವುದೇ ಫಾರೆಸ್ಟ್ ಅಡ್ವೆಂಚರ್, ಬೆಂಗಳೂರು, ಮಡಿಕೇರಿ, ಚಿಕ್ಕಮಗಳೂರು, ಸಂಪಾಜೆ ಫಾರೆಸ್ಟ್ ಹಾಗೂ ಮಲೆ ಮಾದೇಶ್ವರ ಬೆಟ್ಟದ ಸುತ್ತಮುತ್ತ 80 ದಿನಗಳವರೆಗೆ ಈ ಚಿತ್ರದ ಚಿತ್ರೀಕರಣ ನಡೆಸಲಾಗಿದೆ ಎಂದು ನಿರ್ಮಾಪಕ ಎನ್.ಎಂ.ಕಾಂತರಾಜು ಅವರು ತಿಳಿಸಿದ್ದಾರೆ.

'ಕ್ಯಾಪಿಟಲ್ ಸಿಟಿ'ಯಲ್ಲಿ ಸೇಡಿನ ಕಥೆ...

ಇತ್ತೀಚಿನ ದಿನಗಳಲ್ಲಿ ಕ್ರೌಡ್ ಫಂಡಿಂಗ್ ಮೂಲಕ ಚಿತ್ರ ನಿರ್ಮಾಣ ಬೆಳೆದುಬಂದಿದೆ. ಲೂಸಿಯಾ ಪವನ್ ಅಂಥ ಪ್ರಯೋಗಕ್ಕೆ ನಾಂದಿ ಹಾಡಿದ್ದರು, ಅದೇ ರೀತಿ ಇದೀಗ ಕ್ಯಾಪಿಟಲ್ ಸಿಟಿ ಎಂಬ ಚಿತ್ರ ತಯಾರಾಗಿದೆ. ಹಲವಾರು ಯಶಸ್ವಿ ಚಿತ್ರಗಳನ್ನು ನಿರ್ದೇಶಿಸಿದ ಆರ್. ಅನಂತರಾಜು ಆಕ್ಷನ್ ಕಟ್ ಹೇಳಿರುವ ಈ ಚಿತ್ರಕ್ಕೆ ಇಪ್ಪತ್ತು ಸಮಾನ ಮನಸ್ಕರು ಸೇರಿ ಇನಿಫಿನಿಟಿ ಕ್ರಿಯೇಷನ್ಸ್ ಮೂಲಕ ಬಂಡವಾಳ ಹೂಡಿದ್ದಾರೆ. ರಾಜೀವ್ ರೆಡ್ಡಿ ಹಾಗೂ ಪ್ರೇರಣ ಪ್ರಮುಖ ಪಾತ್ರದಲ್ಲಿ ನಟಿಸಿರುವ ಈ ಚಿತ್ರದ ಆಡಿಯೋ ಇತ್ತೀಚೆಗೆ ಬಿಡುಗಡೆಯಾಯಿತು, ಸಿ.ಕೆ.ರಾಮಮೂರ್ತಿ, ಮಾಜಿ ಶಾಸಕ ರೇಣುಕಾಚಾರ್ಯ ಚಿತ್ರದ ಟ್ರೇಲರ್, ಆಡಿಯೋ ಬಿಡುಗಡೆ ಮಾಡಿದರು. ಶಿವಗಂಗೆಯ ಮಲಯ ಶಾಂತ ಮುನಿ ಸ್ವಾಮಿಗಳು ಹಾಗೂ ಆದಿತ್ಯ ಸ್ವಾಮಿಗಳ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಮೇಶ್ ಬಣಕಾರ್, ಶಿಲ್ಪ ಶ್ರೀನಿವಾಸ್ ಮುಂತಾದವರು ಭಾಗ ವಹಿಸಿದ್ದರು, ನಿರ್ಮಾಪಕರ ಪರವಾಗಿ ಕರ್ನಲ್ ರಾಜೇಂದ್ರ ಮಾತನಾಡಿ, 39 ವರ್ಷ ಸೈನಿಕನಾಗಿ ಸೇವೆ ಸಲ್ಲಿಸಿ, ನಂತರ ರೈತನಾಗಿ, ಈಗ ಚಿತ್ರರಂಗಕ್ಕೆ ಬಂದಿದ್ದೇನೆ ಎಂದರು. ನಾಯಕ ರಾಜೀವ್‌ರೆಡ್ಡಿ ಮಾತನಾಡಿ, ಇದೊಂದು ರಿವೆಂಜ್ ಕಥೆ, ನಿಮಗೆ ತೊಂದರೆ ಬಂದಾಗ, ನಿಮ್ಮಲ್ಲಿರುವ ಆಕ್ರೋಶ ಹೇಗೆ ಸ್ಫೋಟವಾಗುತ್ತದೆ, ನಿಮಗೆ ತೊಂದರೆಯಾದಾಗ ನಿಮ್ಮನ್ನು ನೀವು ಹೇಗೆ ಕಾಪಾಡಿಕೊಳ್ಳುತ್ತೀರಾ ಅಂತ ಚಿತ್ರದಲ್ಲಿ ಹೇಳಿದ್ದೇವೆ ಎಂದರು.




ನಿರ್ದೇಶಕ ಆರ್.ಅನಂತರಾಜು ಮಾತನಾಡಿ, ಇದೊಂದು ಉತ್ತಮ ಸಂದೇಶವಿರುವ ಚಿತ್ರ, ಆಕ್ಷನ್ ಜತೆ ಸೆಂಟಿಮೆಂಟ್, ಕಾಮಿಡಿಯೂ ಇದೆ. ಬೆಂಗಳೂರು ಭೂಗತ ಜಗತ್ತಿನಲ್ಲಿ ನಡೆಯುವ ಘಟನೆಗಳ ಸುತ್ತ ನಡೆಯುವ ಕಥೆ. ಇಬ್ಬರು ಡಾನ್‌ಗಳ ನಡುವೆ ಸಿಕ್ಕಿ ಹಾಕಿಕೊಂಡ ನಾಯಕ ಅಲ್ಲಿಂದ ಹೇಗೆ ಪಾರಾಗಿ ಬರುತ್ತಾನೆಂಬುದೇ ಈ ಚಿತ್ರದ ಕಥೆ. ಮಾಸ್ ಕಥೆ ಇದ್ದರೂ ನಾಯಕಿಯ ಪಾತ್ರ ಹೈಲೈಟಾಗುತ್ತದೆ, ಶರತ್ ಲೋಹಿತಾಶ್ವ ಅವರು ಇನ್‌ಸ್ಪೆಕ್ಟರ್ ಆಗಿ ನ್ಯಾಯಕ್ಕೋಸ್ಕರ ಹೋರಾಡುವ ಅಧಿಕಾರಿಯಾಗಿ ನಟಿಸಿದ್ದಾರೆ. ಇದೊಂದು ರಿವೆಂಜ್ ಬೇಸ್ ಕಾಲ್ಪನಿಕ ಕಥೆಯಾಗಿದ್ದು, ರೌಡಿಸಂ ಪ್ರೇರೇಪಿಸುವಂಥ ಯಾವುದೇ ಅಂಶಗಳನ್ನಿಟ್ಟಿಲ್ಲ, ಆಕ್ಷನ್ ಚಿತ್ರವಾದರೂ ನೋಡುಗರಿಗೆ ಬೇಕಾದ ಎಲ್ಲಾಥರದ ಮನರಂಜನಾತ್ಮಕ ಅಂಶ ಗಳು ಚಿತ್ರದಲ್ಲಿದೆ ಎಂದರು. ಎಸ್.ನಾಗು, ವೀರ ಸಮರ್ಥ್ ಅವರ ಸಂಗೀತ ಸಂಯೋಜನೆ, ದೀಪಕ್‌ಕುಮಾರ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದ್ದು, 2025ರ ಜನವರಿ ಅಂತ್ಯಕ್ಕೆ ಚಿತ್ರವನ್ನು ತೆರೆಗೆ ತರಲು ಸಿದ್ಧತೆ ನಡೆಯುತ್ತಿದೆ. ನಾಯಕಿ ಪ್ರೇರಣ, ನಿರ್ಮಾಪಕರಾದ ಮಂಜುನಾಥ್ ಚಿತ್ರದ ಕುರಿತಂತೆ ಮಾಹಿತಿ ನೀಡಿದರು.

ಸಿನಿಪದಬಂಧ-557



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______
ವಿಳಾಸ ______

ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1.ನಮ್ಮ ಸಂಸಾರದ ಸಂತೋಷದ ಕಡಲು	6
5.ಅಂಬಿಯ ಸಮಯದ ಬಂಡಿ ತಿರುಗಿದೆ	4
7.ರಾಜೀವ್ ಅಭಿನಯದ ಚೊಕ್ಕ ಚಿನ್ನ	4
8.ರುದ್ರಭೂಮಿಯಲ್ಲಿ ಅರಳಿದ ಪುಷ್ಪ	6
11.ಕಿಂಕರನ ಬಾಸ್	2
12.ಪ್ರೇಮಾಳ ಚಳಿಗಾಲದ ಋತು	3
14.ರಮೇಶ್ – ಚಾರುಲತಾ ನಡುವೆ ನಡೆದ ವಿವಾಹ ಇಲ್ಲಿ ಅಸ್ತವ್ಯಸ್ತ	3
17.ವಿಷ್ಣುವಿನ ಹತ್ತು ವೇಷ	5
18.ಏಳು ಸುತ್ತಿನ ಕೋಟೆ ಚಿತ್ರದ ನಾಯಕಿ	3
19.ಕಿಚ್ಚ ಸುದೀಪ್ ಅಭಿನಯದ ದೈವ ಸನ್ನಿಧಿ	4

ಮೇಲಿನಿಂದ ಕೆಳಕ್ಕೆ

2.ರಾಜ್‌ಕುಮಾರ್ ಅಭಿನಯದಲ್ಲಿ ಸದಾ ಉರಿದ ಹಣತೆ	4
3.ರವಿಚಂದ್ರನ್ – ನಗ್ಮ ಅಭಿನಯದ ಚಿತ್ರ	4
4.ವಿಜಯಕಾಶಿ ನಡೆಸಿದ ದಾಳಿ	4
6.ದೇವರಾಜ್ – ಅಂಜನಾ ಅಭಿನಯದಲ್ಲಿ ನಡೆದ ವಿವಾಹ	6
7.ಮಗಳ ಗಂಡನ ಜೊತೆ ಬಂದ ಸ್ನೇಹಿತ	6
9.ವಿಷ್ಣುವರ್ಧನ್ ತ್ರಿಪಾತ್ರಭಿನಯದ ಚಿತ್ರ	7
10.ರಮೇಶ್ ಅರವಿಂದ್ ಸುರಿಸಿದ ಪುಷ್ಪವೃಷ್ಟಿ	3
13.ನಾಗ ಕಾಳನೊಂದಿಗೆ ಬಂದವನು	3
14.ನವರಾತ್ರಿಯ ಎಂಟನೆಯ ದಿನ	4
15.ಗಂಡು ನವಿಲು	3
16.ಲಕ್ಷ್ಮಿಯೊಂದಿಗಿನ ವಿದ್ಯಾ ದೇವತೆ	4

ಸಿನಿ ಪದಬಂಧ 556ರ ಉತ್ತರ

ಅ	ಜ	ಗ	ಜಾಂ	ತ	ರ		ಪ			
	ಯ				ಸ್ತೆ		ದೇ	ವ	ರಾ	ಜ್
	ಮಾ		ಒ		ರಾ		ಪ			
ಕೋ	ಲಾ	ಹ	ಲ		ಜ	ಗ	ದೇ	ಕ	ವೀ	ರ
ಕಿ			ವೇ			ಣೇ			ರ	
ಲ	ವ್		ಜೀ		ರೋ	ಶ	ನಿ		ಣ್ಣ	
ಮೋ			ವ			ನ		ಅ		
ಹ		ಮಾ	ನ	ಸ		ಗ		ರ		ಕೂ
ನ್		ಳ		ತ್ಕಾ		ಲಾ	ಲಿ	ಸು	ವ್ವಾ	ಲಿ
		ವಿ		ರ		ಟೆ				ರಾ
ರ	ಸಿ	ಕ					ಮ	ಹಾ	ರಾ	ಜ

ವಿಜೇತರು: ಜಶ್ವಿಕ್ ವಿ., #2501, ಸಿ.ಹೆಚ್.22, 6ನೇ ತಿರುವು ಅಶೋಕಪುರಂ, ಮೈಸೂರು-570008

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಲಂಚ ಪಟ್ಟಿ ಪ್ರಕಟಿಸಿ...!

● ಕಂದಾಯ ಸಚಿವ ಕೃಷ್ಣಭೈರೇಗೌಡರು ತಮ್ಮದೇ ಇಲಾಖೆ ಅಧಿಕಾರಿಗಳಿಗೆ ನೀಡಿದ ಸಲಹೆ!! ● ಇಲಾಖಾ ಕಚೇರಿಗೆ ದಿಢೀರ್ ಭೇಟಿ; ಖಾಲಿ ಕುರ್ಚಿಗಳು, ಬಾಗಿಲೇ ತೆರೆದಿರದ ಕಚೇರಿ ಕಂಡು ಆಕ್ರೋಶ ● ಸಚಿವರೇ ಸಾರ್ವಜನಿಕರ ಅಹವಾಲು ಸ್ವೀಕರಿಸುವ ವೇಳೆ ದಡದಡ ಬಂದ ಅಧಿಕಾರಿಗಳು, ಸಿಬ್ಬಂದಿ ● ಡಿಸಿಗೆ ದೂರವಾಣಿ ಕರೆ ಮಾಡಿ ಕ್ರಮಕ್ಕೆ ಸೂಚನೆ


ದೊಡ್ಡಬಳ್ಳಾಪುರ ತಹಸೀಲ್ದಾರ್ ಹಾಗೂ ಉಪನೋಂದಣಾಧಿಕಾರಿ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿದ ಕಂದಾಯ ಸಚಿವ ಕೃಷ್ಣಬೈರೇಗೌಡ

ಬೆಂಗಳೂರು, ಡಿ.26(ಕೆಎಂಶಿ)– ಗ್ರಾಮೀಣ ಜನರು ಕೆಲಸಗಳಿಗಾಗಿ ಕಚೇರಿಗಳಿಗೆ ದಿನನಿತ್ಯ ಅಲೆಯುವುದನ್ನು ತಪ್ಪಿಸಲು ಯಾರ್‍ಯಾರಿಗೆ ಎಷ್ಟು ಲಂಚ ಎಂಬ ಪಟ್ಟಿ ಪ್ರಕಟಿಸಿ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತಮ್ಮ ಇಲಾಖೆಯಡಿ ಬರುವ ಕಚೇರಿಗಳಲ್ಲಿನ ವ್ಯವಸ್ಥೆ ಮತ್ತು ಖಾಲಿ ಕುರ್ಚಿಗಳನ್ನು ನೋಡಿ ಆಡಳಿತವೇ ಕುಸಿದಿದೆಯಲ್ಲಾ, ಏನು ಮಾಡಬೇಕೋ ಎಂದು ಹಣೆ ಹಣೆ ಚಚ್ಚಿಕೊಂಡ ಘಟನೆ ನಡೆದಿದೆ.

ಮಂತ್ರಿಗಳಿಗೆ ಹಣ ಕೊಡಬೇಕು ಎನ್ನುತ್ತೀರಲ್ಲಾ ಅವರಿಗೆ ಎಷ್ಟು ಕೊಡಬೇಕು ಎಂಬುದನ್ನು ಪಟ್ಟಿಯ ಮೇಲ್ಭಾಗದಲ್ಲೇ ಪ್ರಕಟಿಸಿ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಎಲ್ಲೋ ನಿಂತು, ಮೂರನೇ ವ್ಯಕ್ತಿ ಮೂಲಕ ಚೌಕಾಸಿ ಮಾಡಿಸುವ ಬದಲು, ಅಧಿಕೃತವಾಗಿ ನೀವೇ ಪಟ್ಟಿ ಹಾಕಿ ಜನರಿಂದ ವಸೂಲಿ ಮಾಡಿ ಕೆಲಸ ಮಾಡಿಕೊಡಿ ಎಂದರು.

ಸಣ್ಣ ಪುಟ್ಟ ಕೆಲಸಕ್ಕೂ ಹತ್ತಾರು ಬಾರಿ ಅಲೆಸಿ, ಕೊನೆಗೆ ಮಧ್ಯವರ್ತಿಗೆ ಹಣ ನೀಡಿದ ನಂತರ ಅರ್ಜಿಗೆ ಸೀಲು ಬೀಳುತ್ತದೆ, ಇಂತಹ ವ್ಯವಸ್ಥೆ ಏಕೆ, ಹೋಟೆಲ್‌ಗಳಲ್ಲಿ ತಿಂಡಿ ಬೆಲೆ ನಿಗದಿ ಮಾಡಿದಂತೆ, ಯಾವ ಯಾವ ಕೆಲಸಕ್ಕೆ ಎಷ್ಟು ಹಣ ಎಂಬುದನ್ನು ಪ್ರಕಟಿಸಿ ಎಂದಿದ್ದಾರೆ.

ದಿಢೀರನೆ ಇಂದು ದೊಡ್ಡಬಳ್ಳಾಪುರ ತಹಸೀಲ್ದಾರ್ ಹಾಗೂ ಉಪನೋಂದಣಾಧಿಕಾರಿ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿದ ಸಚಿವರಿಗೆ, ಖಾಲಿ ಕುರ್ಚಿಗಳು ಕಂಡುಬಂದರೆ, ಮತ್ತೆ ಕೆಲವು ಅಧಿಕಾರಿಗಳ ಕಚೇರಿ ಬಾಗಿಲುಗಳೇ ತೆರೆದಿರಲಿಲ್ಲ.

ಸರ್ಕಾರಿ ಕೆಲಸದ ಸಮಯ ಆರಂಭವಾಗಿ 30 ನಿಮಿಷಗಳ ನಂತರವೂ ಇಂತಹ ಪರಿಸ್ಥಿತಿ ಕಂಡು ಸಚಿವರು ಹೌಹಾರಿದರು.

ಸ್ಥಳದಲ್ಲೇ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಯನ್ನು ಸಂಪರ್ಕಿಸಿ ತಾಲೂಕು ಮತ್ತು ಎಸಿ ಕಚೇರಿಯ ಪರಿಸ್ಥಿತಿ ವಿವರಿಸಿ ಕ್ರಮ ಜರುಗಿಸುವಂತೆ ಆದೇಶಿಸಿದರು.

ನಂತರ ಸಚಿವರೇ ಖುದ್ದಾಗಿ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುತ್ತಿದ್ದಾಗ, ಸಿಬ್ಬಂದಿ ಮತ್ತು ಅಧಿಕಾರಿಗಳು ದಢದಢನೇ ಕಚೇರಿಗಳಿಗೆ ಧಾವಿಸಿದರು.

ಅವರೆಲ್ಲರನ್ನೂ ಜನರ ಮುಂದೆಯೇ ನಿಲ್ಲಿಸಿಕೊಂಡು ತರಾಟೆಗೆ ತೆಗೆದುಕೊಂಡಿದ್ದಲ್ಲದೆ, ಸಾರ್ವಜನಿಕರನ್ನು ಯಾವ ರೀತಿ ಅಲೆದಾಡಿಸುತ್ತಿದ್ದೀರಿ ಎನ್ನುವುದಕ್ಕೆ ಈ ಮಂದಿಯೇ ಸಾಕ್ಷಿ.

ಅವರನ್ನು ಅಲೆಸುವ ಬದಲು ಯಾವ ಕೆಲಸಕ್ಕೆ ಎಷ್ಟು ರೇಟು, ಯಾವ ಅಧಿಕಾರಿಯ ಪಾಲೆಷ್ಟು ಎಂಬ ಮಾಹಿತಿಯನ್ನು ಬಹಿರಂಗವಾಗಿ ಪ್ರಕಟಿಸಿ ಎಂದಿದ್ದಲ್ಲದೆ, ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಸರ್ಕಾರಿ ಕಚೇರಿಗೆ, ಜನರ ಕೆಲಸಕ್ಕೆ ಟೈಮೇ ಇಲ್ಲ, ನೀವು ಬರುವ ಸಮಯವೇ ಸರ್ಕಾರಿ ಕೆಲಸದ ಸಮಯ ಅಲ್ಲವೇ ಎಂದು ಪ್ರಶ್ನಿಸಿದರು.

ನೀವು ಸರ್ಕಾರದ ವ್ಯವಸ್ಥೆಯಲ್ಲಿದ್ದೀರಾ ಅಥವಾ ನಿಮ್ಮ ಸ್ವಂತ ವ್ಯವಸ್ಥೆಯಲ್ಲಿದ್ದೀರಾ, ನೀವು ಹೇಳಿದ್ದಷ್ಟೇ ಸರ್ಕಾರಿ ಕೆಲಸ ಅಲ್ಲವೇ? ಎಂದು ತರಾಟೆಗೆ ತೆಗೆದುಕೊಂಡರು.

ಸಂಘಟನೆ ದೃಷ್ಟಿಯಿಂದ ನಾಯಕತ್ವ ಇರುವವರಿಗೆ ಅವಕಾಶ

● 2025ರಲ್ಲಿ ಕಾಂಗ್ರೆಸ್ ಸಂಘಟನೆಗೆ ವಿನೂತನ ಕಾರ್ಯಕ್ರಮ ● 2025ರ ಜನವರಿ ತನಕ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಕಾರ್ಯಕ್ರಮ'



ಬೆಳಗಾವಿ, ಡಿ.26– ಮಹಾತ್ಮಗಾಂಧಿ ಅಧ್ಯಕ್ಷತೆಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸ್ಮರಣಾರ್ಥ ಬೆಳಗಾವಿಯ ವೀರಸೌಧದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಭೆ (ಸಿಡಬ್ಲ್ಯುಸಿ) ನಡೆದಿದ್ದು, ಸಭೆಯಲ್ಲಿ ಮಹತ್ವದ ಚರ್ಚೆಗಳು ಆಗಿವೆ. ಅಲ್ಲದೇ ಈ ಸಭೆಯಲ್ಲಿ ಕಾಂಗ್ರೆಸ್ ಎರಡು ಪ್ರಮುಖ ನಿರ್ಣಯಗಳನ್ನು ತೆಗೆದುಕೊಂಡಿದೆ.

ಮೊದಲನೆಯದ್ದು ಮಹಾತ್ಮ ಗಾಂಧಿ, ಎರಡನೆಯದ್ದು ರಾಜಕೀಯ. 2025ರಲ್ಲಿ ಸಂಘಟನೆಗೆ ಪರಿವರ್ತನೆ ತರಲು ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳುವುದು ಹಾಗೂ 2025 ಜನವರಿ ತನಕ 'ಜೈ ಬಾಪು ಜೈ ಭೀಮ್ ಜೈ ಸಂವಿಧಾನ ಕಾರ್ಯಕ್ರಮ' ನಿರ್ಣಯ ಕೈಗೊಂಡಿದೆ.

ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ ಇತಿಹಾಸದಲ್ಲಿ ಇಂದು ಐತಿಹಾಸಿಕ ಸಭೆ ಆಗಿದೆ. ಎಂದೆಂದಿಗೂ ನೆನಪಿಡಬೇಕಾದ ಸಭೆ ನಡೆದಿದೆ. ದೇಶದ ಕಾಂಗ್ರೆಸ್ಸಿಗರು ಹೆಮ್ಮೆಪಡುವಂತಹ ದಿನ ಇಂದು. ಗಾಂಧೀಜಿ ಎಐಸಿಸಿ ಅಧ್ಯಕ್ಷರಾಗಿ ಸಮ್ಮೇಳನ ನಡೆಸಿದ ಸ್ಥಳ ಇದು. 100 ವರ್ಷದ ಬಳಿಕ ಮತ್ತೆ ಇದೇ ಸ್ಥಳದಲ್ಲಿ ಸಭೆ ನಡೆದಿದೆ. ಅದೇ ಪರಂಪರೆ ನಾವು ಮುಂದುವರಿಸಿಕೊಂಡು ಬಂದಿದ್ದೇವೆ. ಸಭೆಯಲ್ಲಿ 2 ಮಹತ್ವದ ನಿರ್ಣಯ ತೆಗೆದುಕೊಂಡಿದ್ದೇವೆ. 2025ರಲ್ಲಿ ಸಂಘಟನೆಗೆ ಪರಿವರ್ತನೆ ತರುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೂತ್‌ಮಟ್ಟದಿಂದ ಮೇಲಿನವರೆಗೂ ಬದಲಾವಣೆ ತರುತ್ತೇವೆ. ಸಂಘಟನೆ ದೃಷ್ಟಿಯಿಂದ ಮಹತ್ವದ ಬದಲಾವಣೆ ಮಾಡುತ್ತೇವೆ. ನಾಯಕತ್ವ ಯಾರಿಗೆ ಇದೆ ಅವರಿಗೆ ಅವಕಾಶ ನೀಡುತ್ತೇವೆ ಎಂದು ಹೇಳಿದರು.

2025ರ ಜನವರಿ ತನಕ ಜೈ ಬಾಪು ಜೈ ಭೀಮ್ ಜೈ ಸಂವಿಧಾನ ಕಾರ್ಯಕ್ರಮ ನಡೆಯಲಿದೆ. 13 ತಿಂಗಳ ಕಾಲ ನಿರಂತರವಾಗಿ ಸಮಾವೇಶ, ರ್‍ಯಾಲಿ, ಪಾದಯಾತ್ರೆ, ಸೆಮಿನಾರ್ ಮಾಡುತ್ತೇವೆ. ಬೃಹತ್ ಸಮಾವೇಶಗಳಲ್ಲಿ ಸಂವಿಧಾನದ ಮೇಲಿನ ದಾಳಿ ಖಂಡಿಸುತ್ತೇವೆ. ಭ್ರಷ್ಟಾಚಾರದ ಬಗ್ಗೆ ಚರ್ಚೆ ಮಾಡುತ್ತೇವೆ. ನಿರಂತರ ಕ್ಯಾಂಪೇನ್ ನಡುವೆಯೂ ಸಂಘಟನಾತ್ಮಕ ಬದಲಾವಣೆ ಇರುತ್ತದೆ. ಏಪ್ರಿಲ್‌ನಲ್ಲಿ ಗುಜರಾತ್‌ನಲ್ಲಿ ಎಐಸಿಸಿ ಸಮಾವೇಶ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ಚುನಾವಣಾ ಆಯೋಗದ ವಿರುದ್ಧ ಬೇಸರ ವ್ಯಕ್ತಪಡಿಸಿದ ವೇಣುಗೋಪಾಲ್, ಚುನಾವಣಾ ಆಯೋಗದ ಕೆಲಸ ಹಿಂದೆ ಬೀಳುತ್ತಿದೆ. ಚುನಾವಣಾ ಆಯೋಗದ ಮೇಲೆ ಜನರಿಗೆ ನಂಬಿಕೆ ಉಳಿದಿಲ್ಲ ಮಹಾರಾಷ್ಟ್ರ, ಹರಿಯಾಣ ಚುನಾವಣೆಯಲ್ಲಿ ವ್ಯತ್ಯಾಸವಾಗಿದೆ. ಇವೆರಡು 2 ರಾಜ್ಯಗಳ ಚುನಾವಣೆಯಲ್ಲಿ ಲೋಪದೋಷಗಳಾಗಿವೆ ಹೀಗಾಗಿ ಚುನಾವಣಾ ಆಯೋಗದ ವಿರುದ್ಧ ಸಮರ ಸಾರಲು ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಡಾ.ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆ ಪ್ರಸ್ತಾಪಿಸಿದರು. ಈ ಹೇಳಿಕೆಯು ಸಂವಿಧಾನದ ನಿರ್ಮಾಪಕನಿಗೆ ಅತ್ಯಂತ ಅವಮಾನ. ನಾವು ಆಕ್ಷೇಪ ವ್ಯಕ್ತಪಡಿಸಿದ್ದೇವೆ. ಪ್ರತಿಭಟನೆ ಕೂಡ ಮಾಡಿದ್ದೇವೆ. ಈಗ ದೇಶಾದ್ಯಂತ ಅಮಿತ್ ಶಾ ವಿರುದ್ಧ ಪ್ರತಿಭಟನೆ ನಡೆಯುತ್ತಿವೆ. ಪ್ರಧಾನಿ ಮತ್ತು ಸರ್ಕಾರ ತಮ್ಮ ತಪ್ಪನ್ನು ಒಪ್ಪಿಕೊಳ್ಳಲು ಸಿದ್ಧರಿಲ್ಲ. ರಾಜೀನಾಮೆ ಕೇಳುವ ಬದಲು ಮೋದಿ ಅಮಿತ್ ಶಾಗೆ ಬೆಂಬಲಿಸಿದ್ದಾರೆ ಗೃಹ ಸಚಿವ ಅಮಿತ್ ಶಾ ರಕ್ಷಣೆಗೆ ಪ್ರಧಾನಿ ಹೇಳಿಕೆ ನೀಡಿದ್ದಾರೆ. ರಾಹುಲ್ ಗಾಂಧಿ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದರು.

ಬಿಜೆಪಿಯವರು ಸಾಂವಿಧಾನಿಕ ಸಂಸ್ಥೆಗಳ ಮೇಲೆ ಹಿಡಿತ ಸಾಧಿಸುತ್ತಿದ್ದಾರೆ. ಚುನಾವಣಾ ಆಯೋಗದ ನಿಷ್ಪಕ್ಷಪಾತದ ಬಗ್ಗೆ ಪ್ರಶ್ನೆಗಳು ಎದ್ದಿವೆ. ಜನರ ನಂಬಿಕೆ ಕ್ರಮೇಣ ಕಡಿಮೆಯಾಗುತ್ತಿರುವುದು ಕಳವಳಕಾರಿ. ಕೆಲ ದಿನಗಳ ಹಿಂದೆ ಅವರು ಕೋರ್ಟ್ ಆದೇಶದ ಮಾಹಿತಿಯನ್ನು ಹಂಚಿಕೊಳ್ಳಲು ಚುನಾವಣಾ ನಿಯಮಗಳನ್ನು ಬದಲಾಯಿಸಿದರು. ಕೆಲವೊಮ್ಮೆ ಮತದಾರರ ಹೆಸರು ಪಟ್ಟಿಯಿಂದ ಅಳಿಸಿ ಹೋಗುವುದು. ಕೆಲವೊಮ್ಮೆ ಮತದಾನ ಮಾಡದಂತೆ ತಡೆಯುವುದು, ಕೆಲವೊಮ್ಮೆ ಪಟ್ಟಿಯಲ್ಲಿ ಮತದಾರರ ಸಂಖ್ಯೆಯಲ್ಲಿ ದಿಢೀರ್ ಹೆಚ್ಚಳ. ಕೊನೆಯ ಕ್ಷಣದಲ್ಲಿ ಅನಿರೀಕ್ಷಿತವಾಗಿ ಮತದಾನದ ಪ್ರಮಾಣ ಹೆಚ್ಚಾಗುವುದು, ಈ ಕೆಲ ಪ್ರಶ್ನೆಗಳು ಉದ್ಭವಿಸುತ್ತಲೇ ಇರುತ್ತವೆ. ಇವುಗಳಿಗೆ ಯಾವುದೇ ತೃಪ್ತಿಕರ ಉತ್ತರ ಕಂಡುಬಂದಿಲ್ಲ ಎಂದು ತಿಳಿಸಿದರು.

ಮಹಾತ್ಮಗಾಂಧೀಜಿ ಅಧ್ಯಕ್ಷತೆಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿ ವೇಶನದ ಶತಮಾನೋತ್ಸವ ಹಿನ್ನೆಲೆ ಬೆಳಗಾವಿಗೆ ಕಾಂಗ್ರೆಸ್ ಪಕ್ಷದ ಘಟಾನುಘಟಿ ನಾಯಕರ ದಂಡೇ ಆಗಮಿಸಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆದ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಕಾರ್ಯಕಾರಿಣಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಉಸ್ತುವಾರಿಗಳಾದ ರಣದೀಪ್ ಸಿಂಗ್ ಸುರ್ಜೇವಾಲಾ, ಕೆ.ಸಿ.ವೇಣುಗೋಪಾಲ್ ಸೇರಿದಂತೆ 200ಕ್ಕೂ ಅಧಿಕ ಕಾಂಗ್ರೆಸ್ ರಾಷ್ಟ್ರೀಯ ನಾಯಕರು ಭಾಗವಹಿಸಿದ್ದರು. ಆದರೆ, ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ ಗೈರಾಗಿದ್ದಾರೆ.

ಬೆಳಗಾವಿ ಕಾಂಗ್ರೆಸ್ ಅಧಿವೇಶನ ರದ್ದು

ಬೆಳಗಾವಿ, ಡಿ.26– ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ನಾಳೆ ನಡೆಯಬೇಕಿದ್ದ ಕಾಂಗ್ರೆಸ್ ಅಧಿವೇಶನ ಹಾಗೂ ಎಲ್ಲಾ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿದೆ.

ಬೆಳಗಾವಿ ಸುವರ್ಣಸೌಧದಲ್ಲಿ ನಾಳೆ ಮಹಾತ್ಮ ಗಾಂಧಿ ಪುತ್ಥಳಿ ಅನಾವರಣ ಹಾಗೂ ಸಾರ್ವಜನಿಕ ಸಮಾವೇಶ ಆಯೋಜಿಸಲಾಗಿತ್ತು. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ಎಲ್ಲಾ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿದೆ.

ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಬೆಳಗಾವಿಗೆ ಆಗಮಿಸಿದ್ದರು. ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಕೆ.ಸಿ ವೇಣುಗೋಪಾಲ್, ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣದಿಂದ ಕಾಂಗ್ರೆಸ್ ನಾಯಕರು ವಿಶೇಷ ವಿಮಾನದ ಮೂಲಕ ದೆಹಲಿಗೆ ಹೊರಟರು.

ಮೈಸೂರಲ್ಲಿ ಕಂಪ್ಯೂಟರ್ ಆಪರೇಟರ್ ದಿನಾಚರಣೆ

ಗ್ರಾಮೀಣ ಜನರಿಗೆ ಸೌಲಭ್ಯ ಸವಲತ್ತು ತಲುಪಿಸುವಲ್ಲಿ ಗ್ರಾಪಂ ಪಾತ್ರ ಪ್ರಧಾನವಾಗಿದೆ: ತಾಪಂ ಇಓ ಸಿ.ಕೃಷ್ಣ


ರಾಜ್ಯ ಗ್ರಾಮ ಪಂಚಾಯ್ತಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್(ಡಿಇಓ) ಕ್ಷೇಮಾಭಿವೃದ್ಧಿ ಸಂಘದ ಮೈಸೂರು ತಾಲೂಕು ಘಟಕದ ವತಿಯಿಂದ 'ಗ್ರಾಮ ಪಂಚಾಯತ್ ಕಂಪ್ಯೂಟರ್ ಆಪರೇಟರ್ ದಿನವನ್ನು' ಆಚರಿಸಲಾಯಿತು.

ಮೈಸೂರು, ಡಿ.26(ಎಸ್‌ಬಿಡಿ)– ಕರ್ನಾಟಕ ರಾಜ್ಯ ಗ್ರಾಮ ಪಂಚಾಯ್ತಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ (ಡಿಇಓ) ಕ್ಷೇಮಾಭಿವೃದ್ಧಿ ಸಂಘದ ಮೈಸೂರು ತಾಲೂಕು ಘಟಕದ ವತಿಯಿಂದ 'ಗ್ರಾಮ ಪಂಚಾಯತ್ ಕಂಪ್ಯೂಟರ್ ಆಪರೇಟರ್ ದಿನವನ್ನು' ತಾಲೂಕು ಪಂಚಾಯ್ತಿ ಸಭಾಂಗಣದಲ್ಲಿ ಗುರುವಾರ ಆಚರಿಸಲಾಯಿತು.

ತಾಲೂಕು ಪಂಚಾಯ್ತಿ ಕಾರ್ಯ ನಿರ್ವಾಹಕ ಅಧಿಕಾರಿ ಸಿ.ಕೃಷ್ಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಂಪ್ಯೂಟರ್ ಪಿತಾಮಹ ಚಾರ್ಲ್ಸ್ ಬ್ಯಾಬೇಜ್ ಅವರ ಜನ್ಮದಿನದ ಅಂಗವಾಗಿ ರಾಜ್ಯ ಸರ್ಕಾರದ ನಿರ್ದೇಶನದಂತೆ ಕಂಪ್ಯೂಟರ್ ಆಪರೇಟರ್ ದಿನಾಚರಣೆಯನ್ನು ಇದೇ ಮೊದಲ ಬಾರಿಗೆ ಹಮ್ಮಿಕೊಳ್ಳಲಾಗಿದೆ ಎಂದರು.

ಕಂಪ್ಯೂಟರ್‌ನಿಂದ ಕ್ಷಿಪ್ರಗತಿಯಲ್ಲಿ ಮಾಹಿತಿ ಹಾಗೂ ಸೇವೆಗಳನ್ನು ಪಡೆಯಲು ಸಾಧ್ಯವಾಗಿದೆ. ಪ್ರಸ್ತುತ ಎಲ್ಲಾ ಇಲಾಖೆಗಳಿಗಿಂತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅತೀ ಹೆಚ್ಚು ತಾಂತ್ರಿಕತೆ ಅಳವಡಿಸಿಕೊಳ್ಳಲಾಗಿದೆ. ಗ್ರಾಮೀಣ ಜನರಿಗೆ ಹಲವು ಸೌಲಭ್ಯ ಹಾಗೂ ಸವಲತ್ತುಗಳನ್ನು ತಲುಪಿಸುವಲ್ಲಿ ಗ್ರಾಮ ಪಂಚಾಯ್ತಿ ಪಾತ್ರ ಪ್ರಧಾನವಾಗಿದೆ. ಹಾಗೆಯೇ ಜನರಿಗೆ ಅಗತ್ಯ ಸೇವೆಗಳನ್ನು ಸಕಾಲದಲ್ಲಿ ಒದಗಿಸುವಲ್ಲಿ ಕಂಪ್ಯೂಟರ್ ಆಪರೇಟರ್‌ಗಳ ಸೇವೆ ಮಹತ್ವದ್ದಾಗಿದೆ ಎಂದು ಬಣ್ಣಿಸಿದರು.

ಗಣಕಯಂತ್ರ ನಿರ್ವಾಹಕರು (ಕಂಪ್ಯೂಟರ್ ಆಪರೇಟರ್) ಗ್ರಾಮ ಪಂಚಾಯ್ತಿಗೆ ಬೆನ್ನೆಲುಬಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೆಲ ಸಂದರ್ಭಗಳಲ್ಲಿ ಕಚೇರಿ ಅವಧಿ ಮೀರಿಯೂ ಕೆಲಸ ಮಾಡುತ್ತಿದ್ದಾರೆ. ಪ್ರತಿಯೊಬ್ಬರು ಸೇವಾ ಮನೋಭಾವದಿಂದ ತಮಗೆ ವಹಿಸಿದ ಕೆಲಸವನ್ನು ನಿಷ್ಠೆಯಿಂದ ಮಾಡಿದರೆ ಸಾರ್ವಜನಿಕರಿಗೆ ಮತ್ತಷ್ಟು ತ್ವರಿತವಾಗಿ ಸೇವೆ ಲಭ್ಯವಾಗುತ್ತದೆ ಎಂದು ಹೇಳಿದರು.

ರಾಜ್ಯ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಕೆ.ರುಕ್ಮಾಂಗದ ಮಾತನಾಡಿ, ತಂತ್ರಜ್ಞಾನ ಮುಂದುವರಿದಂತೆ ಜನರಿಗೆ ತ್ವರಿತ ಸೇವೆ ಲಭ್ಯವಾಗುತ್ತದೆ. ಹಾಗೆಯೇ ಅದಕ್ಕೆ ಪೂರಕವಾಗಿ ಸಮರ್ಪಕ ಮಾನವ ಸಂಪನ್ಮೂಲವೂ ಅಗತ್ಯವಾಗಿದೆ. ಗಣಕಯಂತ್ರ ನಿರ್ವಾಹಕರು ತ್ವರಿತ ಸೇವೆಗಾಗಿ ಬರುವ ಸಾರ್ವಜನಿಕರಿಗೆ ಸ್ಪಂದಿಸುವುದರ ಜೊತೆಗೆ ಇತರೆ ಅಭಿವೃದ್ಧಿ ಕಾರ್ಯಗಳಲ್ಲೂ ಮಹತ್ವದ ಪಾತ್ರ ವಹಿಸುತ್ತಾರೆ ಎಂದರು.

ಇದೇ ಸಂದರ್ಭದಲ್ಲಿ ಸಂಘದ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಗಂಗಾಧರ್, ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕಿ ಭವ್ಯ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ನಿರ್ದೇಶಕ ಡಿ.ಸಿ.ಶಿವಣ್ಣ, ಸಹಾಯಕ ಲೆಕ್ಕಾಧಿಕಾರಿ ಪ್ರೇಮಾ, ಕಚೇರಿ ವ್ಯವಸ್ಥಾಪಕಿ ಜಮುನಾ, ರಾಜ್ಯ ಗ್ರಾಮ ಪಂಚಾಯ್ತಿ ಡಿಇಓ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಜಿರಮೇಶ್, ಮೈಸೂರು ತಾಲೂಕು ಘಟಕದ ಅಧ್ಯಕ್ಷ ಎಂ.ಶ್ರೀಕಾಂತ್, ಉಪಾಧ್ಯಕ್ಷೆ ಸಿ.ಮಂಜುಳಾ, ಕಾರ್ಯದರ್ಶಿ ಬಿ.ರಘು ಸೇರಿದಂತೆ ತಾಲೂಕಿನ ಎಲ್ಲಾ ಗಣಕಯಂತ್ರ ನಿರ್ವಾಹಕರು ಭಾಗವಹಿಸಿದ್ದರು.

ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಹೆಸರಿಡುವ ಪ್ರಸ್ತಾಪ; ಸಿದ್ದರಾಮಯ್ಯ ಸಮರ್ಥನೆ

● ಬಿಜೆಪಿಯವರಿಗೆ ಎಲ್ಲದಕ್ಕೂ ವಿರೋಧ ಮಾಡುವುದನ್ನು ಬಿಟ್ಟರೆ ಬೇರೆ ಕೆಲಸವಿಲ್ಲ
● ಅವರ ಪಕ್ಷದ ಮಾಜಿ ಸಂಸದ ಪ್ರತಾಪ್ ಸಿಂಹ ಪಾಲಿಕೆ ನಿರ್ಧಾರ ಸಮರ್ಥಿಸಿಕೊಂಡಿದ್ದಾರಲ್ಲ



ಬೆಂಗಳೂರು, ಡಿ.26(ಕೆಎಂಶಿ)– ಮೈಸೂರು ಮಹಾನಗರ ಪಾಲಿಕೆ, ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಮರು ನಾಮಕರಣ ಮಾಡುವುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ.

ಈ ರಸ್ತೆಗೆ ಸದ್ಯ, ರಾಣಿಯರ (ಪ್ರಿನ್ಸೆಸ್) ಹೆಸರಿದೆ, ಅದನ್ನು ಪಾಲಿಕೆ ಬದಲಾವಣೆ ಮಾಡಿ ಸಿದ್ದರಾಮಯ್ಯ ಆರೋಗ್ಯ ಮಾರ್ಗ ಹೆಸರನ್ನು ಇಡಲು ಉದ್ದೇಶಿಸಿದೆ.

ಪಾಲಿಕೆಯ ನಿರ್ಧಾರವನ್ನು ಬಿಜೆಪಿ ಹಾಗೂ ಜೆಡಿಎಸ್ ವಿರೋಧಿಸಿದ್ದರೆ, ಮಾಜಿ ಸಂಸದ ಹಾಗೂ ಬಿಜೆಪಿ ನಾಯಕ ಪ್ರತಾಪ್ ಸಿಂಹ ಸಮರ್ಥಿಸಿಕೊಂಡಿದ್ದಾರೆ.

ರಸ್ತೆ ಮರುನಾಮಕರಣಕ್ಕೆ ಸಂಬಂಧಿಸಿದಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಬಿಜೆಪಿಯವರಿಗೆ ಬೇರೆ ಕೆಲಸವೇ ಇಲ್ಲ. ಅವರಿಗೆ ವಿರೋಧ ಮಾಡುವುದನ್ನು ಬಿಟ್ಟರೆ, ಜನಪರ ಕೆಲಸ ಮಾಡುವ ಅಭ್ಯಾಸವಿಲ್ಲ. ಅವರ ಪಕ್ಷದ ಮಾಜಿ ಸಂಸದ ಪ್ರತಾಪ್ ಸಿಂಹ ಅವರೇ ನಗರಪಾಲಿಕೆ ನಿರ್ಧಾರವನ್ನು ಸಮರ್ಥಿಸಿದ್ದಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ಎಂದು ಪ್ರಶ್ನಿಸಿದರು.

ಪಾಲಿಕೆ ಕಾಲಾನುಕಾಲಕ್ಕೆ ರಸ್ತೆಗಳ ಹೆಸರನ್ನು ಜನಾಭಿಪ್ರಾಯದಂತೆ ಬದಲಾವಣೆ ಮಾಡುತ್ತದೆ. ಆ ವಿಷಯದಲ್ಲಿ ನಾವು ಮೂಗು ತೂರಿಸುವುದಿಲ್ಲ ಅವರ ನಿರ್ಧಾರದ ಬಗ್ಗೆ ನನಗೆ ತಿಳಿಯದು, ನಾನು ಅದರಲ್ಲಿ ಹಸ್ತಕ್ಷೇಪವನ್ನೂ ಮಾಡಿಲ್ಲ, ಬಿಜೆಪಿ ಅವರಿಗೆ ವಿರೋಧ ಮಾಡುವುದೊಂದೇ ಅಭ್ಯಾಸ ಎಂದು ಕಿಡಿಕಾರಿದರು.

ಮೈಸೂರು ನಗರದ ಒಂಟಿಕೊಪ್ಪಲು ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಸ್ಥಾನದಿಂದ ರಿಂಗ್ ರಸ್ತೆ ಜಂಕ್ಷನ್‌ವರೆಗಿನ ಕೆ.ಆರ್.ಎಸ್. ರಸ್ತೆಯನ್ನು 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ನಾಮಕರಣ ಮಾಡಲು ಪಾಲಿಕೆ ಮುಂದಾಗಿ, ಸಾರ್ವಜನಿಕರ ಆಕ್ಷೇಪ ಆಹ್ವಾನಿಸಿದೆ.

ಇದರ ಬೆನ್ನಲ್ಲೇ ಮಹಾರಾಣಿಯರ ಹೆಸರಿನಲ್ಲಿರುವ ರಸ್ತೆಗೆ ಸಿದ್ದರಾಮಯ್ಯ ಹೆಸರಿಡಲು ಮುಂದಾಗಿರುವುದು ಭಾರಿ ವಿವಾದಕ್ಕೆ ಕಾರಣವಾಗಿದೆ. ಪಾಲಿಕೆಯ ಈ ನಿರ್ಧಾರವನ್ನು ರಾಜಮನೆತನದವರು ವಿರೋಧಿಸಿದ್ದು, ಹೆಸರು ಬದಲಾವಣೆ ಮಾಡದಂತೆ ಒತ್ತಾಯಿಸಿದ್ದಾರೆ.

ಮೈಸೂರಿನ ಪ್ರಿನ್ಸೆಸ್ ರಸ್ತೆಯನ್ನು ಯಾವುದೇ ಕಾರಣಕ್ಕೂ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಮಾಡಬಾರದು

● ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಆಗ್ರಹ ● ಮೈಸೂರು ರಾಜಮನೆತನದ ಮಹಾರಾಣಿಯರ ಕೊಡುಗೆ ಸ್ಮರಣೆಗೆ ಚ್ಯುತಿ ಬಾರದಿರಲಿ ● ಕೆಲವರು ಓಲೈಕೆಗಾಗಿ ಈ ಕಾರ್ಯಕ್ಕೆ ಕೈ ಹಾಕಿದ್ದಾರೆ


ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಆರ್.ಕೌಟಿಲ್ಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ಡಿ.26(ಎಂಟಿವೈ)– ಮೈಸೂರಿನ ಪ್ರಿನ್ಸೆಸ್(ಕೆಆರ್‌ಎಸ್) ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಮರುನಾಮಕರಣ ಮಾಡಲು ಸಾಧ್ಯವಿಲ್ಲ ಎಂದು ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ತಿಳಿಸಿದ್ದಾರೆ.

ಮೈಸೂರಿನ ಚಾಮರಾಜಪುರಂನಲ್ಲಿರುವ ಬಿಜೆಪಿ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಆರ್‌ಎಸ್ ರಸ್ತೆಗೆ ಈ ಹಿಂದೆಯೇ ಪ್ರಿನ್ಸೆಸ್ ರಸ್ತೆ ಎಂದು ಹೆಸರಿಡಲಾಗಿದೆ. ಮೈಸೂರಿನ ಮಹಾರಾಣಿಯವರ ಸ್ಮರಣಾರ್ಥವಾಗಿ ಅಂದೇ 'ಪ್ರಿನ್ಸೆಸ್ ರಸ್ತೆ' ಎಂದು ಹೆಸರಿಡಲಾಗಿದೆ. ಈ ವಿಚಾರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಗೊತ್ತಿದೆಯೋ, ಇಲ್ಲವೋ ತಿಳಿದಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಎರಡನೇ ಬಾರಿ ಸಿಎಂ ಆಗಿದ್ದಾರೆ. ಬದುಕಿದ್ದ ಯಾವುದೇ ವ್ಯಕ್ತಿಗಳ ಹೆಸರನ್ನು ರಸ್ತೆಗೆ ಇಡುವ ಸಂಪ್ರದಾಯವಿಲ್ಲ. ಆ ಕಾರಣಕ್ಕಾಗಿ ಪ್ರಿನ್ಸೆಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಹೆಸರಿಡಬಾರದು ಎಂದು ಒತ್ತಾಯಿಸಿದರು.

ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಸಿಎಂ ಸಿದ್ದರಾಮಯ್ಯ ಅವರ ಮೇಲೆ ಈಗ ಕಳಂಕವಿದೆ. ಇಂತಹ ಸಂದರ್ಭದಲ್ಲಿ ಪ್ರಿನ್ಸೆಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಹೆಸರಿಡಲು ಮುಂದಾಗಿರುವುದು ಸರಿಯಲ್ಲ. ಮಹಾನಗರ ಪಾಲಿಕೆಯಲ್ಲಿ ಸದಸ್ಯರು ಇಲ್ಲ. ಇಂತಹ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಕೌನ್ಸಿಲ್ ಸಭೆ ನಿರ್ಣಯ ಕೈಗೊಳ್ಳದೇ ಯಾವುದೇ ನಿರ್ಣಯ ಕೈಗೊಳ್ಳಲು ಸಾಧ್ಯವಿಲ್ಲ. ಆದರೂ ಕೆಲವರು ಓಲೈಕೆಗಾಗಿ ಸಿದ್ದರಾಮಯ್ಯ ರಸ್ತೆ ಎಂದು ಹೆಸರಿಡಲು ಮುಂದಾಗಿದ್ದಾರೆ. ಇದಕ್ಕೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು.

ಮೈಸೂರಿನ ರಿಂಗ್ ರಸ್ತೆಗೆ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ.ಕೃಷ್ಣ ಅವರ ಹೆಸರಿಡಬೇಕು. ಈ ಬಗ್ಗೆ ಮೈಸೂರು ಮಹಾನಗರ ಪಾಲಿಕೆಗೆ ಮನವಿ ಸಲ್ಲಿಸುತ್ತೇನೆ ಎಂದರು.

ಮಾಜಿ ಸಂಸದ ಪ್ರತಾಪ್ ಸಿಂಹ ಬಕೆಟ್ ಹಿಡಿಯುವುದನ್ನು ಬಿಡಬೇಕು: ರಘು ಕೌಟಿಲ್ಯ

ಮೈಸೂರು,ಡಿ.26(ಎಂಟಿವೈ)– ಮೈಸೂರಿನ ಪ್ರಿನ್ಸೆಸ್(ಕೆಆರ್‌ಎಸ್) ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಹೆಸರಿಡುವುದಕ್ಕೆ ಸಹಮತ ವ್ಯಕ್ತಪಡಿಸುವ ಮೂಲಕ ಮಾಜಿ ಸಂಸದ ಪ್ರತಾಪ ಸಿಂಹ ಬಕೆಟ್ ಹಿಡಿಯುವ ಕೆಲಸ ಮಾಡುತ್ತಿದ್ದಾರೆ ಎಂದು ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ವಾಗ್ದಾಳಿ ನಡೆಸಿದ್ದಾರೆ.


ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರಿಡಬೇಕು ಎಂದು ಪ್ರತಾಪ್ ಸಿಂಹ ಹೇಳಿಕೆ ನೀಡಿರುವುದನ್ನು ನೋಡಿದರೆ ಅವರು ಬಕೆಟ್ ಹಿಡಿದಂತೆ ಕಾಣುತ್ತಿದೆ. ಪ್ರತಾಪ ಸಿಂಹ ಯಾವ ಉದ್ದೇಶಕ್ಕಾಗಿ ಬಕೆಟ್ ಹಿಡಿಯುತ್ತಿದ್ದಾರೋ ಗೊತ್ತಿಲ್ಲ. ಯಾರನ್ನು ಓಲೈಕೆ ಮಾಡಲು ಹೊರಟಿದ್ದಾರೋ ಗೊತ್ತಿಲ್ಲ ಎಂದು ಹರಿಹಾಯ್ದರು.

ಎರಡು ಬಾರಿ ಸಂಸದರಾಗಿರುವ ಅನುಭವ ಹೊಂದಿರುವ ಪ್ರತಾಪ ಸಿಂಹ ಬಕೆಟ್ ಹಿಡಿಯುವುದನ್ನು ಇನ್ನಾದರೂ ಬಿಡಬೇಕು ಎಂದು ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಬಿಜೆಪಿ ವಕ್ತಾರ ಎಂ.ಜಿ. ಮಹೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮುಖಂಡರಾದ ಬಿ.ಎಂ.ರಘು, ಕೇಬಲ್ ಮಹೇಶ್ ಇನ್ನಿತರರು ಇದ್ದರು.

ರಸ್ತೆಗೆ ಪೋಕ್ಸೊ ಆರೋಪ ಹೊತ್ತ ಯಡಿಯೂರಪ್ಪ ಹೆಸರು ನಾಮಕರಣ; ಮೈಸೂರಿಗೆ ಹಲವು ಕೊಡುಗೆ ನೀಡಿದ ಸಿದ್ದರಾಮಯ್ಯ ಹೆಸರಿಟ್ಟರೇನು ತಪ್ಪು?

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಪ್ರಶ್ನೆ


ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಗುರುವಾರ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು, ಡಿ.26(ಬಿಎಲ್‌ಯು)– ಭ್ರಷ್ಟಾಚಾರ ಆರೋಪದಲ್ಲಿ ಜೈಲು ಶಿಕ್ಷೆ ಅನುಭವಿಸಿ, ಪ್ರಸ್ತುತ ಪೋಕ್ಸೋ ಆರೋಪ ಎದುರಿಸುತ್ತಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಹೆಸರನ್ನು ಬೆಳಗಾವಿಯ ರಸ್ತೆಯೊಂದಕ್ಕೆ ನಾಮಕರಣ ಮಾಡಿದ್ದು, ತವರು ಜಿಲ್ಲೆಗೆ ಹಲವು ಕೊಡುಗೆ ನೀಡಿರುವ ಸಿದ್ದರಾಮಯ್ಯ ಹೆಸರನ್ನು ಮೈಸೂರು ರಸ್ತೆಗೆ ನಾಮಕರಣ ಮಾಡಿದರೆ ತಪ್ಪೇನು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಪ್ರಶ್ನಿಸಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯ ಪಿ.ಬಿ.ರಸ್ತೆಗೆ ಯಡಿಯೂರಪ್ಪ ಹೆಸರು ನಾಮಕರಣ ಮಾಡಲಾಗಿದೆ. ಗುಜರಾತ್‌ನ ರಸ್ತೆಗೆ ಅಮಿತ್ ಶಾ ಹೆಸರಿಡಲಾಗಿದೆ, ಸ್ಟೇಡಿಯಂವೊಂದನ್ನು ನರೇಂದ್ರ ಮೋದಿ ಹೆಸರಿನಿಂದ ಕರೆಯಲಾಗುತ್ತಿದೆ. ಉಡುಪಿಯ ಬೋಳ ಗ್ರಾಮಕ್ಕೆ ನಾಥುರಾಮ್ ಗೋಡ್ಸೆ ಹೆಸರಿಡಲಾಗಿದೆ ಹೀಗಿರುವಾಗ ಸಿದ್ದರಾಮಯ್ಯ ಹೆಸರನ್ನು ಮೈಸೂರಿನ ರಸ್ತೆಗೆ ನಾಮಕರಣ ಮಾಡಿದರೆ ತಪ್ಪೇನು ಎಂದು ಪ್ರಶ್ನಿಸಿದರು.

ಪ್ರತಾಪ್ ಸಿಂಹಗೆ ಜ್ಞಾನೋದಯವಾಗಿದೆ: ಈ ಮಧ್ಯೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಲು ಬಿಜೆಪಿಯ ಮಾಜಿ ಸಂಸದ ಪ್ರತಾಪ್ ಸಿಂಹ ಅವರೇ ಬೆಂಬಲ ಸೂಚಿಸಿದ್ದಾರೆ. ಚುನಾವಣೆಯಲ್ಲಿ ಸೋತ ನಂತರ ಜ್ಞಾನೋದಯವಾಗಿರುವ ಪ್ರತಾಪ್ ಸಿಂಹ ಅವರ ಈ ನಡೆಗೆ ನಮ್ಮ ಮೆಚ್ಚುಗೆ ಇದ್ದು, ಅವರು ಸಿಕ್ಕರೆ ಕರೆದುಕೊಂಡು ಹೋಗಿ ಕಾಫಿ ಕುಡಿಸುತ್ತೇನೆ ಎಂದು ಲಕ್ಷ್ಮಣ ತಿಳಿಸಿದರು.

ಕೆಲ ಬಿಜೆಪಿಗರು ಸ್ಯಾಡಿಸ್ಟ್‌ಗಳು: ಬಿಜೆಪಿಯ ಕೆಲವು ನಾಯಕರು ಸ್ಯಾಡಿಸ್ಟ್‌ಗಳಾಗಿದ್ದು, ಅವರ ಹಿಡನ್ ಅಜೆಂಡಾ ಬಹಿರಂಗಗೊಳ್ಳುತ್ತಿದೆ. ಐದು ಮುಖ್ಯಮಂತ್ರಿ ಕಂಡಿರುವ ಬಿಜೆಪಿಯವರು ಮೈಸೂರಿಗೆ ನೀಡಿರುವ ಕೊಡುಗೆಯಾದರೂ ಏನು ಎಂದು ತಿಳಿಸಬೇಕು ಎಂದು ಸವಾಲು ಹಾಕಿದರು.

2.1 ಕಿಲೋ ಮೀಟರ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡುವ ಪ್ರಸ್ತಾವನೆ ವಿಚಾರ ಈಗ ರಾಜ್ಯ ಮಾತ್ರವಲ್ಲದೆ ದೇಶ–ವಿದೇಶದಲ್ಲೂ ಚರ್ಚೆ ಆಗುತ್ತಿರುವುದು ದುರ್ದೈವದ ಸಂಗತಿಯಾಗಿದೆ. ಚಾಮರಾಜ ಕ್ಷೇತ್ರದ ಜನರ ಅಭಿಲಾಷೆಯಂತೆ ಸಿದ್ದರಾಮಯ್ಯ ಆರೋಗ್ಯ ಮಾರ್ಗ ಎಂದು ನಾಮಕರಣ ಮಾಡುವಂತೆ ಸ್ಥಳೀಯ ಶಾಸಕ ಕೆ.ಹರೀಶ್ ಗೌಡ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಜಯದೇವ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಜಿಲ್ಲಾಸ್ಪತ್ರೆ, ಹೈಟೆಕ್ ಪಂಚಕರ್ಮ ಆಸ್ಪತ್ರೆ, ಚರಕ ಆಸ್ಪತ್ರೆ ಸೇರಿದಂತೆ 1,569 ಕೋಟಿ ವೆಚ್ಚದಲ್ಲಿ ಕಟ್ಟಡಗಳನ್ನು ಸಿದ್ದರಾಮಯ್ಯ ನಿರ್ಮಿಸಿದ್ದಾರೆ. ಈಗ ಕಿದ್ವಾಯಿ ಆಸ್ಪತ್ರೆ ಕಾಮಗಾರಿ ಪ್ರಗತಿಯಲ್ಲಿದೆ, ನಿಮಾನ್ಸ್ ಘೋಷಣೆ ಮಾಡಿದ್ದಾರೆ. ಇವೆಲ್ಲವೂ ಈ ರಸ್ತೆಯಲ್ಲಿ ನಿರ್ಮಾಣ ಮಾಡಿರುವ ಹಿನ್ನೆಲೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಸಿದ್ದರಾಮಯ್ಯ ಹೆಸರು ಇತಿಹಾಸ ಪುಟದಲ್ಲಿ ಇರಬೇಕು ಎಂಬುವುದು ಜನರ ಅಪೇಕ್ಷೆಯಾಗಿದೆ ಎಂದು ಲಕ್ಷ್ಮಣ್ ತಿಳಿಸಿದರು.

ಶಾಸಕ ಮುನಿರತ್ನ ಒಬ್ಬ ಕ್ರಿಮಿನಲ್. ಆತನ ವಿರುದ್ಧ ಸಾಕಷ್ಟು ಪ್ರಕರಣಗಳಿವೆ. ಈಗ ತನ್ನ ಕಡೆಯವರಿಂದಲೇ ಮೊಟ್ಟೆ ಹೊಡೆಸಿಕೊಂಡು ನಾಟಕವಾಡುತ್ತಿದ್ದಾರೆ. ಮುನಿರತ್ನ ಸ್ವಲ್ಪ ದಿನದಲ್ಲಿ ಮತ್ತೆ ಜೈಲಿಗೆ ಹೋಗುತ್ತಾರೆ ಎಂದು ಭವಿಷ್ಯ ನುಡಿದರು.

ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಿವಣ್ಣ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

DOCUMENT LOST

Original Sale Deed bearing No : 3089, Volume 4942 at pages 80-87 dated 25-09-1998 before the Sub-Registrar, Mysuru South, Mysuru has been lost while travelling from Rangsons Technologies, 2963, Brigade Point, V.V. Mohalla, Mysuru 2nd Main, V.V. Puram, Mysore - 570002, Karnataka on November 27, 2024. Finders please contact 91089 19826. Lost Complaint bearing No. 1395729/2024 lodged.

PUBLIC NOTICE

Notice is hereby issued to the General Public that Smt. VEMURY SWAPNA GOWRI W/O. Sri. Vemury Viswanath & D/O. Late. P. S. Murthy, residing at # 3A, AWHO-Sector B, Sikh Road, Diamond Point Hotel, DPS Secunderabad, Manovikasnagar, Tirumalagiri, Hyderabad, Telangana 500009 has agreed to Sell the Schedule Property to my client/s. Any person/s asserting any right, title, interest or claim, pending litigation or demand of any nature in or upon the schedule property or any part thereof, the same may be brought to the notice of the undersigned along with documentary evidence at # L-50/2A, 1st Floor, Ashoka Road, Mysuru -570 001 within SEVEN (07) days from the date of this Public Notice, failing which such claim/s shall be considered to have been waived and/or given up and my client/s shall be entitled to complete the sale transaction that there are no claims of whatsoever nature with respect of the schedule property.

SCHEDULE: All That Piece And Parcel Of Residential Property Bearing MIG House No. 207, Measuring East To West (55¾+52¼) / 2 Feet And North To South 80½ Feet, Situated At 1st Stage, Brindavan Extension, Devaraja Mohalla, Mysuru Having Constructed Rcc Roofing Building On Ground Floor & Bounded On :- East By : Road, West By : Property Bearing No. 205, North By :Property Bearing No. 206, South By :Road

Sd/- M. Sanjay Jain
B.B.M., LL.B., CCL, CMJFS
Advocate, #L-50/2A, 1st Floor,
Ashoka Road, Mysuru - 570 001
E-mail: msj186@yahoo.co.in,
Cell : 9341464636


Place: Mysuru, Date: 26/12/2024

3ನೇ ವರ್ಷದ ಪುಣ್ಯಸ್ಮರಣೆ



ಆದರ್ಶ
ನಿಧನ: 27.12.2021

ನೀವು ನಮ್ಮನ್ನಗಲಿ ಇಂದಿಗೆ 3 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ
ದುಃಖತಪ್ತರು: ತಂದೆ ಸ್ವಾಮಿಗೌಡ, ತಾಯಿ ಶಾಂತಮ್ಮ, ಪತ್ನಿ ಇಂದ್ರಾಣಿ, ಮಗ : ನಿಹಾಲ್‌ಗೌಡ, ತಂಗಿ : ಶ್ವೇತ, ಭಾವ : ಮನೋಜ್, ಅನುಷ್ಕ, ಯದುವೀರ್ ಕೃಷ್ಣ ಕುಟುಂಬವರ್ಗದವರು ಇಲವಾಲ



ಭೋಗೇಶ್ ಎಂ.ಕೆ.

22ನೇ ವರ್ಷದ ಸವಿನೆನಪು

ನಿಧನ : 27.1.2002

ನೀವು ನಮ್ಮನ್ನಗಲಿ **22** ವರ್ಷ ಕಳೆದರೂ ನಿಮ್ಮ ಸವಿನೆನಪು ನಮ್ಮ ಹೃದಯದಲ್ಲಿ ಸದಾ ನೆಲೆಸಿದೆ. ಭಗವಂತನು ನಿಮ್ಮ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಬಯಸುವ,

ಪತ್ನಿ ಶಾಂತ, ರೇವಣ್ಣ, ರೂಪ ಹಾಗೂ ಕುಟುಂಬವರ್ಗದವರು

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಭೈರತಿ ರಣಗಲ್(ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುಐ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಪುಷ್ಪ–2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಸಂಗಂ	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ) + ಬೇಬಿ ಜಾನ್ (ಹಿಂ)	3+1 ಪ್ರದರ್ಶನಗಳು
ತಿಬ್ಬಾದೇವಿ	
ಬೇಬಿಜಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ಔಟ್ ಆಫ್ ಸಿಲಬಸ್(ಕ) + ಪುಷ್ಪ–2 (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಯುಐ (2024) (ಕ): ಬೆ.9.30ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12.10ಕ್ಕೆ, ಮ.2.35ಕ್ಕೆ, ಸಂ.5ಕ್ಕೆ, ರಾ.7.25ಕ್ಕೆ, ಮಾರ್ಕೋ (ಮ): ರಾ.9.55ಕ್ಕೆ.
ಸ್ಕ್ರೀನ್ 2	ಯುಐ (2024) (ಕ): ಬೆ.9ಕ್ಕೆ, ಪುಷ್ಪಾ 2 (ತೆ): ಮ.12.05ಕ್ಕೆ, ವಿಡುತಲೈ 2 (ತ): ಮ.3.55ಕ್ಕೆ, ರಾ.10.05ಕ್ಕೆ, ವನ್ವಾಸ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 3	ಇಡಿ ಎಕ್ಸ್ಟ್ರಾ ಡಿಸೆಂಟ್ (ಮ): ಬೆ.9.50ಕ್ಕೆ, ಪುಷ್ಪಾ 2 (ಕ): ಮ.12.15ಕ್ಕೆ, ಸಂ.6.10ಕ್ಕೆ, ಹರಿದಾಸರ ದಿನಚರಿ (ಕ): ಸಂ.4.05ಕ್ಕೆ, ಬಚ್ಚಲ ಮಲ್ಲಿ (ತೆ): ರಾ.10.05ಕ್ಕೆ.
ಸ್ಕ್ರೀನ್ 4	ಯುಐ (2024) (ಕ): ಬೆ.8.30ಕ್ಕೆ, ಬೆ.11.10ಕ್ಕೆ, ಮ.1.50ಕ್ಕೆ, ಸಂ.4.30.ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನೈಋತ್ಯ ರೈಲ್ವೆ



ನೈಋತ್ಯ ರೈಲ್ವೆಯು ಜನವರಿ 1, 2025 ರಿಂದ ಅನ್ವಯವಾಗುವಂತೆ ಹೊಸ ಸಾರ್ವಜನಿಕ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ಪರಿಷ್ಕೃತ ವೇಳಾಪಟ್ಟಿಯನ್ನು ನೈಋತ್ಯ ರೈಲ್ವೆಯ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಈ ವೇಳಾಪಟ್ಟಿ ತಿಳಿಯಲು ಪ್ರಯಾಣಿಕರು ಮೇಲ್ಕಾಣಿಸಿರುವ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡಿ ಅಥವಾ ಕೆಳಗೆ ನೀಡಿರುವ ಲಿಂಕ್ ಮೇಲೆ ಕ್ಲಿಕ್ ಮಾಡಿ ಮಾಹಿತಿ ಪಡೆಯಬಹುದು.


ಲಿಂಕ್: https://swr.indianrailways.gov.in/view_section.jsp?fontColor=black&backgroundColor=LIGHTSTEELBLUE&lang=0&id=0,1,808,818,847,1880

ಕ್ರ.ಸಂ.	ಸಾರಾಂಶಗಳು
1	ಹೊಸ ವೇಳಾಪಟ್ಟಿ–21, ದಿನಾಂಕ 01.01.2025 ರಿಂದ ಅನ್ವಯವಾಗುವುದು
2	ಕಳೆದ ವರ್ಷದಲ್ಲಿ ಅಕ್ಟೋಬರ್ 2023 ರಿಂದ ಡಿಸೆಂಬರ್ 2024 ರವರೆಗೆ 09 ಜೊತೆಯ ರೈಲುಗಳನ್ನು ಪರಿಚಯಿಸಲಾಗಿದೆ. ಎ) 04 (ನಾಲ್ಕು) ಜೊತೆಯ ವಂದೇ ಭಾರತ್ ರೈಲುಗಳು ಬಿ) 01 (ಒಂದು) ದ್ವಿ–ಸಾಪ್ತಾಹಿಕ ಎಕ್ಸ್‌ಪ್ರೆಸ್ ಸಿ) 01 (ಒಂದು) ಸಾಪ್ತಾಹಿಕ ಎಕ್ಸ್‌ಪ್ರೆಸ್ ಡಿ) 03 (ಮೂರು) ಜೋಡಿ ಮೆಮು ರೈಲುಗಳು
3	01 (ಒಂದು) ಜೊತೆ ರೈಲಿನ ಆವರ್ತನವನ್ನು ವಾರದಲ್ಲಿ 06 ದಿನಗಳಿಂದ ಪ್ರತಿದಿನಕ್ಕೆ ಹೆಚ್ಚಿಸಲಾಗಿದೆ
4	09 (ಒಂಬತ್ತು) ಜೊತೆ ರೈಲುಗಳನ್ನು ವಿಸ್ತರಿಸಲಾಗಿದೆ
5	04 (ನಾಲ್ಕು) ಜೊತೆ ರೈಲುಗಳ ಸೇವೆಯ ದಿನಗಳನ್ನು ಬದಲಾಯಿಸಲಾಗಿದೆ
6	04 (ನಾಲ್ಕು) ಜೊತೆ ರೈಲು ಸಂಖ್ಯೆಗಳನ್ನು ಬದಲಾಯಿಸಲಾಗಿದೆ
7	02 (ಎರಡು) ಜೊತೆ ರೈಲುಗಳ ಶಂಟಿಂಗ್ ಅನ್ನು ಸರಿಯಾಗಿ ತಪ್ಪಿಸುವ ಮೂಲಕ ಸ್ಲಿಪ್ ಕೋಚ್‌ಗಳನ್ನು ಸ್ಥಗಿತಗೊಳಿಸಲಾಗಿದೆ
8	37 (ಮೂವತ್ತೇಳು) ರೈಲುಗಳ ವೇಗವನ್ನು ಹೆಚ್ಚಿಸಲಾಗಿದೆ
9	08 ರೇಕ್‌ಗಳು / 09 ರೈಲುಗಳನ್ನು ಎಲ್ ಹೆಚ್ ಬಿ ರೇಕ್‌ಗಳನ್ನಾಗಿ ಪರಿವರ್ತಿಸಲಾಗಿದೆ
10	13 ಜೊತೆ ರೈಲುಗಳಿಗೆ ಹೆಚ್ಚುವರಿ ನಿಲುಗಡೆಗಳನ್ನು ಒದಗಿಸಲಾಗಿದೆ
11	04 (ನಾಲ್ಕು) ಜೋಡಿ ಡೆಮು ರೇಕ್‌ಗಳನ್ನು ಮೆಮು ರೇಕ್‌ಗಳನ್ನಾಗಿ ಪರಿವರ್ತಿಸಲಾಗಿದೆ
12	59 (ಐವತ್ತೊಂಬತ್ತು) ಜೊತೆ ನೈಋತ್ಯ ವಿಶೇಷ ರೈಲುಗಳನ್ನು ಹೊಸ ನಿಯಮಿತ ಸಂಖ್ಯೆಗಳೊಂದಿಗೆ ಮರುಸಂಖ್ಯೆ ಮಾಡಲಾಗಿದೆ
13	01 (ಒಂದು) ಜೊತೆ ಸಿಆರ್ ರೈಲನ್ನು ಹೊಸ ನಿಯಮಿತ ಸಂಖ್ಯೆಯೊಂದಿಗೆ ಮರುಸಂಖ್ಯೆ ಮಾಡಲಾಗಿದೆ.
14	05 (ಐದು) ಜೊತೆ ಎಸ್ ಸಿ ಆರ್ ವಿಶೇಷ ರೈಲುಗಳನ್ನು ಹೊಸ ನಿಯಮಿತ ಸಂಖ್ಯೆಗಳೊಂದಿಗೆ ಮರುಸಂಖ್ಯೆ ಮಾಡಲಾಗಿದೆ
15	03 (ಮೂರು) ಜೊತೆ ಎಸ್ ಆರ್ ವಿಶೇಷ ರೈಲುಗಳನ್ನು ಹೊಸ ನಿಯಮಿತ ಸಂಖ್ಯೆಗಳೊಂದಿಗೆ ಮರುಸಂಖ್ಯೆ ಮಾಡಲಾಗಿದೆ
16	327 ರೈಲು ಸಮಯಗಳನ್ನು ಪ್ರಯಾಣಿಕರ ಅನುಕೂಲಕ್ಕಾಗಿ ಪರಿಷ್ಕರಿಸಲಾಗಿದೆ.

PUB/651/AAMO/PRB/SWR/2024-25

South Western Railway - SWR | SWRRLY | SWRRLY | www.swr.indianrailways.gov.in | sw_railways

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀಮತಿ ಸುಗುಣಮ್ಮನವರು

ಇವರು ದಿನಾಂಕ: 26.12.2024 ಗುರುವಾರ ದೈವಾಧೀನರಾಗಿದ್ದು ಮೃತರ ಅಂತ್ಯಕ್ರಿಯೆಯನ್ನು ದಿ: 27.12.2024 ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು.

ಮನೆ ವಿಳಾಸ: #6, 1ನೇ ಮೇನ್, 1ನೇ ಕ್ರಾಸ್, ಇಂಡಿಯನ್ ಓವರ್‌ಸೀಸ್ ಬ್ಯಾಂಕ್ ಹಿಂಭಾಗ, ಗಿರಿದರ್ಶಿನಿ ಲೇಔಟ್, ಟಿ.ನರಸೀಪುರ ರಸ್ತೆ, ಮೈಸೂರು

ದುಃಖತಪ್ತರು: ಕುಟುಂಬವರ್ಗದವರು